ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 99 ಸಂಚಿಕೆ- 99 | PAGE-8 ಪುಟ-8 | ಭಾನುವಾರ 25.05.2025 | RS.2/- ಬೆಲೆ 2/-

## ಅಧಿಕಾರ ಶಾಶ್ವತವಲ್ಲ



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಮೇ.24: ಪ್ರಿಯಾಂಕ್ ಖರ್ಗೆಯವರೇ,ಅಧಿಕಾರಶಾಶ್ವತವಲ್ಲ; ನಿಮ್ಮಅಧಿಕಾರದದರ್ಪ,ಅಹಂಕಾರ, ಅಧಿಕಾರದ ಸೊಕ್ಕನ್ನು ಅಡಗಿಸುವ ಶಕ್ತಿಬಿಜೆಪಿ ಕಾರ್ಯಕರ್ತರಿಗೆ ಇದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಎಚ್ಚರಿಸಿದ್ದಾರೆ.

ಸಚಿವ ಪ್ರಿಯಾಂಕ್ ಖರ್ಗೆ ದೌರ್ಜನ್ಯ, ಗೂಂಡಾಗಿರಿ ಮತ್ತು ಸಂವಿಧಾನ ವಿರೋಧಿ ನಡೆಯನ್ನು ವಿರೋಧಿಸಿ ಇಂದು ಇಲ್ಲಿನ ಜಿಲ್ಲಾಧಿಕಾರಿ ಕಚೇರಿಯ ವೃತ್ತದ ಬಳಿ ಬಿಜೆಪಿ ಹಮ್ಮಿಕೊಂಡಿದ್ದ "ಕಲಬುರ್ಗಿ ಚಲೋ" ಬೃಹತ್ ಹೋರಾಟ ಸಮಾವೇಶದಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಸರಕಾರ ಬಂದ ಬಳಿಕ ಗುಲ್ಬರ್ಗ ಜಿಲ್ಲೆಯಲ್ಲಿ ಪಾಳೇಗಾರಿಕೆ ನಡೆಯುತ್ತಿದೆ. ಈ ಭಾಗದಲ್ಲಿ 18–20 ಜನರ ಹತ್ಯೆ ಆಗಿದೆ. ಅಧಿಕಾರಿಗಳೂ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಗಮನ ಸೆಳೆದರು. ಈ ಭಾಗದ ಮತದಾರರು ಮುಂದಿನ ದಿನಗಳಲ್ಲಿ ಇದೆಲ್ಲದಕ್ಕೂ ಉತ್ತರ ಕೊಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರ ಬೆಂಬಲಿಗರು, ರಾಜಕೀಯ ಪುಡಾರಿಗಳು ಮೊನ್ನೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ದಿಗ್ಬಂಧನ ಹಾಕಿದ್ದಾರೆ ಎಂದು ಟೀಕಿಸಿದರು. ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಗುಲ್ಬರ್ಗ ಜಿಲ್ಲಾ ಪ್ರವಾಸ ಮಾಡಿದ್ದಾಗ ಪತ್ರಿಕಾಗೋಷ್ಠಿಯಲ್ಲಿ ಕೆಲವು ಮಾತನಾಡಿದ್ದಾರೆ ಎಂಬ ವಿಷಯ ಮುಂದಿಟ್ಟು ಚಿತ್ತಾಪುರದ ಅತಿಥಿಗೃಹಕ್ಕೆ ಬೀಗ ಹಾಕಿ ಛಲವಾದಿಯವರಿಗೆ ದಿಗ್ಬಂಧನ ಹಾಕಿದ್ದಾರೆ ಎಂದು ಆಕ್ಷೇಪಿಸಿದರು.

ಆ ದಿನದ ಘಟನೆ ನೋಡಿದಾಗ ನನಗೆ ಪ್ರಿಯಾಂಕ್ ಖರ್ಗೆ ಬಗ್ಗೆ ಕೋಪ ಬರಲಿಲ್ಲ; ಅದರ ಬದಲಾಗಿ ಪ್ರಿಯಾಂಕ್ ಬಗ್ಗೆ ಮರುಕ ಹುಟ್ಟಿತು. ರಾಜ್ಯ–ದೇಶವನ್ನು ಸುದೀರ್ಘವಾಗಿ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷದವರು ಗುಲ್ಬರ್ಗ ಜಿಲ್ಲೆಯನ್ನು 50 ವರ್ಷಕ್ಕೂ ಹೆಚ್ಚು ಕಾಲ ಆಡಳಿತ ಮಾಡಿದ

(2ನೇ ಪುಟ ನೋಡಿ)

## ಕೇಂದ್ರ, ರಾಜ್ಯಗಳು ಟೀಮ್ ಇಂಡಿಯಾದಂತೆ ಒಟ್ಟಾಗಿ ಕೆಲಸ ಮಾಡಿದರೆ, ಯಾವುದೇ ಗುರಿ ಅಸಾಧ್ಯವಲ್ಲ: ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಮೇ.24: ವಿಕಸಿತ ಭಾರತ ಗುರಿಯನ್ನು ಸಾಧಿಸಲು ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ 'ಟೀಂ ಇಂಡಿಯಾ' ರೀತಿ ಕೆಲಸ ಮಾಡಬೇಕೆಂದು ಪ್ರಧಾನಿ ಮೋದಿ ಕರೆ ನೀಡಿದರು.

ನೀತಿ ಆಯೋಗದ ಹತ್ತನೇ ಸಭೆಯ ಅಧ್ಯಕ್ಷತೆ ವಹಿಸಿದ ಅವರು, ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳನ್ನು ಉದ್ದೇಶಿಸಿ ಮಾತನಾಡಿದರು. ನಾವು ಅಭಿವೃದ್ಧಿಯ ವೇಗವನ್ನು ಹೆಚ್ಚಿಸಬೇಕು. ಕೇಂದ್ರ ಮತ್ತು ಎಲ್ಲಾ ರಾಜ್ಯಗಳು ಒಟ್ಟಾಗಿ ಟೀಂ ಇಂಡಿಯಾದಂತೆ ಒಟ್ಟಾಗಿ ಕೆಲಸ ಮಾಡಿದರೆ, ಯಾವುದೇ ಗುರಿ ಅಸಾಧ್ಯವಲ್ಲ. ವಿಕಸಿತ ಭಾರತ ಭಾರತ ಪ್ರತಿಯೊಬ್ಬ ಭಾರತೀಯನ ಗುರಿ. ಪ್ರತಿಯೊಂದು ರಾಜ್ಯ ವಿಕಸಿತ ಆದಾಗ, ಭಾರತ ವಿಕಸಿತವಾಗುತ್ತದೆ. ಇದು 140 ಕೋಟಿ ನಾಗರಿಕರ ಆಕಾಂಕ್ಷೆ ಎಂದು ಅಭಿಪ್ರಾಯಪಟ್ಟರು.

ರಾಜ್ಯಗಳು ಜಾಗತಿಕ ಮಾನದಂಡಗಳಿಗೆ

(2ನೇ ಪುಟ ನೋಡಿ)

## ಪ್ರಜಾಪ್ರಭುತ್ವದ ಕಗ್ಗೊಲೆ ಖಂಡಿಸಿ ಹೋರಾಟ: ರವಿಕುಮಾರ್

ಕಲಬುರಗಿ,ಮೇ.24: ಜಿಲ್ಲೆಯಲ್ಲಿ ಪ್ರಿಯಾಂಕ್ ಖರ್ಗೆ ನೇತೃತ್ವದಲ್ಲಿ ದೌರ್ಜನ್ಯ ಹೆಚ್ಚಾಗಿದ್ದು, ಪ್ರಜಾಪ್ರಭುತ್ವ ಕಗ್ಗೊಲೆ ಆಗುತ್ತಿದೆ. ಇದನ್ನು ಖಂಡಿಸಿ ಬಿಜೆಪಿ ಬೀದಿಗಿಳಿದು ಹೋರಾಟ ಮಾಡುವ ಅನಿವಾರ್ಯತೆ ಸೃಷ್ಟಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪ್ರಿಯಾಂಕ್ ಅವರ ದೌರ್ಜನ್ಯ, ಅಹಂಕಾರದ ವಿರುದ್ಧ ನಮ್ಮ ಹೋರಾಟ ನಡೆ–ಯುತ್ತಿದೆ ಎಂದರು.

ವಿಪಕ್ಷ ನಾಯಕರಾಗಿರುವ ಚಲವಾದಿ ನಾರಾಯಣಸ್ವಾಮಿ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಐದು ಗಂಟೆಗಳ ಕಾಲ ದಿಗ್ಬಂಧನಕ್ಕೆ ಒಳಪಡಿಸಿದ್ದರು. ಚಲವಾದಿ ತಿರಂಗಾ ಯಾತ್ರೆ ಕಾರ್ಯಕ್ರಮಕ್ಕೂ ಹೋಗಲು ಬಿಡಲಿಲ್ಲ. ಒಬ್ಬ ದಲಿತ ನಾಯಕನಿಗೆ ರಕ್ಷಣೆ ಒದಗಿಸುವಲ್ಲಿ ಚಿತ್ತಾಪುರದ ಪೊಲೀಸರು ಸೋತಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ, ನೀತಿಯಂತೆಯೇ ನಮ್ಮ ವಿಪಕ್ಷ ನಾಯಕರಿಗೆ ಅಪಮಾನ ಮಾಡಲಾಗಿದೆ ಎಂದು ಟೀಕಿಸಿದರು.

ಚಲವಾದಿ ಅವರೊಂದಿಗೆ ನಡೆದುಕೊಂಡಿರುವ ರೀತಿಯನ್ನು ಗಮನಿಸಿದರೆ ಪ್ರಜಾಪ್ರಭುತ್ವದ ಕಗ್ಗೊಲೆ ಆಗಿರುವುದು ಸ್ಪಷ್ಟಗೊಂಡಂತಾಗಿದೆ. ಇದನ್ನು ಕೇಳಲೆಂದೇ ನಾವೆಲ್ಲಾ ಬಿಜೆಪಿ ಮುಖಂಡರು ಬಂದಿದ್ದೇವೆ ಎಂದರು.

ಪ್ರಿಯಾಂಕ್ ಅವರೇ ಜಿಲ್ಲೆಯಲ್ಲಿ ಸರ್ವಾಧಿಕಾರ ತಂದಿದ್ದಾರೆ. ರಜಾ–ಕಾರರಂತೆಯೇ ಇವರೂ ದೌರ್ಜನ್ಯ ನಡೆಸುತ್ತಿದ್ದಾರೆ. ಅದರಲ್ಲೂ ಇಂದಿನ ಪೀಳಿಗೆ ರಜಾಕಾರರನ್ನು ನೋಡಿಲ್ಲ. ಅದನ್ನು ತೋರಿಸಲು ಪ್ರಿಯಾಂಕ್ ಖರ್ಗೆ ಯತ್ನಿಸುತ್ತಿದ್ದಾರೆ ಎಂದು ಲೇವಡಿ ಮಾಡಿದರು.

'ಪ್ರಿಯಾಂಕ್ ಅವರೇ ನೀವು ಬಲಿತ ದಲಿತ. ಆದರೆ, ನಮ್ಮವರು ಬಡತನದ ದಲಿತರು. ಗೆದ್ದ ತಕ್ಷಣ ನಿಮಗೆ ಅಹಂಕಾರ ಬಂದಿದೆಯಾ? ನೀವು ಹೇಳಿದಂತೆಯೇ ನಡೆಯಬೇಕಾ? ನಿಮ್ಮನ್ನು ಯಾರೂ ಪ್ರಶ್ನಿಸುವಂತಿಲ್ಲವೇ ಎಂದು ರವಿಕುಮಾರ್ ಪ್ರಶ್ನಿಸಿದರು.

ಚಿತ್ತಾಪುರ ಕ್ಷೇತ್ರದಿಂದ ಗೆದ್ದಿದ್ದರೂ ಬೆಂಗಳೂರಲ್ಲೇ ನಿಮ್ಮ ವಾಸವಿರುತ್ತದೆ ಎಂದ ಅವರು, ಎಷ್ಟು ದಿನ ಚಿತ್ತಾಪುರದಲ್ಲಿ ವಾಸ್ತವ್ಯ ಇದ್ದೀರಿ ಎಂಬುದರ ಲೆಕ್ಕ ಕೊಡಿ. ಎಷ್ಟು ಜನರ ಸಮಸ್ಯೆ ಪರಿಹರಿಸಿದ್ದೀರಿ ಅನ್ನುವುದರ ಕುರಿತು ಸಹ ಮಾಹಿತಿ ಕೊಡಿ ಎಂದರು.

'ಯಾವುದರಿಂದ ಅವರು ಗೆದ್ದಿದ್ದಾರೆ ಗೊತ್ತಿದೆ. ನಾವು ಏನೆಲ್ಲಾ ಕೆಲಸ ಮಾಡಿದ್ದೇವೆ. ನೀವು ಏನು ಕೆಲಸ

(2ನೇ ಪುಟ ನೋಡಿ)

## ನಿಜಾಮಗಿರಿ ಪ್ರದರ್ಶನ ಬೇಡ: ಸಿ.ಟಿ.ರವಿ



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಮೇ.24: ಪ್ರಿಯಾಂಕ್ ಖರ್ಗೆ ರವರೇ 1948ರಲ್ಲೇ ನಿಜಾಮನ ಶಾಸನ ಹೋಗಿದೆ. ನೀವು ನಿಜಾಮರ ಉತ್ತರಾಧಿಕಾರಿಗಳಲ್ಲ, ಪ್ರಜಾಪ್ರಭುತ್ವದಲ್ಲಿ ನಿಜಾಮಗಿರಿಯನ್ನು ತೋರಿಸುವ ಪ್ರಯತ್ನ ಮಾಡಬೇಡಿ ಎಂದು ವಿಧಾನ ಪರಿಷತ್ತಿನ ಸದಸ್ಯ ಸಿ.ಟಿ. ರವಿ ಎಚ್ಚರಿಸಿದ್ದಾರೆ.

ಇಂದು ಇಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಗೂಂಡಾಗಿರಿ ನಡೆಯುವುದಕ್ಕೆ ಸಾಧ್ಯವಿಲ್ಲ; ಪ್ರಜಾಪ್ರಭುತ್ವ ಮತ್ತು ಗೂಂಡಾಗಿರಿ ಎರಡು ಒಟ್ಟಿಗೆ ಹೋಗಲು ಸಾಧ್ಯವಿಲ್ಲ. ಒಬ್ಬ ವಿರೋಧ ಪಕ್ಷದ ನಾಯಕರು ರಾಜ್ಯದ ಛಾಯಾ ಮುಖ್ಯಮಂತ್ರಿಗಳು ಎಂದು ಕರೆ–ಯುತ್ತಾರೆ. ಅವರ ಮೇಲೆ

(2ನೇ ಪುಟ ನೋಡಿ)

## ರಾಜ್ಯದಲ್ಲಿ 35 ಕೋವಿಡ್ ಸಕ್ರಿಯ ಕೇಸ್: ದಿನೇಶ್ ಗುಂಡೂರಾವ್



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.24: ರಾಜ್ಯದಲ್ಲಿ ಕಳೆದ ಒಂದು ವಾರದಲ್ಲಿ ಕೋವಿಡ್ ಪಾಸಿಟಿವ್ ಪ್ರಕರಣಗಳಲ್ಲಿ ಕೊಂಚ ಏರಿಕೆ ಕಂಡಿದ್ದು, ಒಟ್ಟು 35 ಜನರು ಕೋವಿಡ್ ಪಾಸಿಟಿವ್ ಹೊಂದಿದ್ದಾರೆ. ಹೀಗಾಗಿ ಆತಂಕಪಡುವ ಪರಿಸ್ಥಿತಿ ಇಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿಯೇ 32 ಕೋವಿಡ್ ಪಾಸಿಟಿವ್ ಪ್ರಕರಣಗಳು ವರದಿಯಾಗಿವೆ .ಕೋವಿಡ್ ಬಂದಿದೆ ಎಂದು ಜನರು ಆತಂಕಪಡುವ ಅಗತ್ಯವಿಲ್ಲ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಅಗತ್ಯ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ ಎಂದರು.

ಕೋವಿಡ್ ತಾಂತ್ರಿಕ ಸಮಿತಿ ಸಭೆಯನ್ನು ಶುಕ್ರವಾರ ನಡೆಸಿ ರಾಜ್ಯದಲ್ಲಿ ಕಂಡುಬಂದಿರುವ ಕೋವಿಡ್ ಪ್ರಕರಣಗಳ ಕುರಿತಂತೆ ಚರ್ಚೆ ನಡೆಸಲಾಗಿದೆ. ನಾವು ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದೇವೆ. ಕೇಂದ್ರ ಸರ್ಕಾರದ ಜೊತೆ ಕೂಡ ಸಂಪರ್ಕದಲ್ಲಿದ್ದೇವೆ. ದೇಶದಲ್ಲಿ ಒಟ್ಟು 257 ಪ್ರಕರಣ ದಾಖಲಾಗಿವೆ. ಕೋವಿಡ್ ಪಾಸಿಟಿವ್ ಹೊಂದಿದವರಿಗೆ ಕೆಲವು ಗುಣಲಕ್ಷಣಗಳಿವೆ, ಬಿಟ್ಟರೆ ಗಂಭೀರವಾದ ಸಮಸ್ಯೆಗಳು ಕಂಡುಬಂದಿಲ್ಲ. ಉಸಿರಾಟದ ತೆ–ೂಂದರೆ ಇರುವವರಿಗೆ, ಎಸ್ಎಆರ್ಐ ಪ್ರಕರಣಗಳಲ್ಲಿ ಕಡ್ಡಾಯವಾಗಿ ಕೋವಿಡ್ ಟೆಸ್ಟ್ ಮಾಡಲು ಸೂಚನೆ ನೀಡಲಾಗಿದೆ. ಉಸಿರಾಟ ಹಾಗೂ ಹೃದಯಸಂಬಂಧಿ ಕಾಯಿಲೆ ಇರುವವರು ಅಡ್ಮಿಟ್ ಆಗಿರುವ ಆಸ್ಪತ್ರೆಗಳಲ್ಲಿ ಸ್ಯಾಂಪಲ್ ಕಲೆಕ್ಟ್ ಮಾಡಿ ಕಡ್ಡಾಯವಾಗಿ ಕೋವಿಡ್

(2ನೇ ಪುಟ ನೋಡಿ)

## ಕಿಡಿಗೇಡಿಗಳಿಂದ ಯಾದಗಿರಿ ಕಾಂಗ್ರೆಸ್ ಕಚೇರಿಗೆ ಬೆಂಕಿ





ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ:ಮೇ.24: ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಕಿಡಿಗೇಡಿಗಳು ಬೆಂಕಿಯಿಟ್ಟಿದ್ದು, ಕಚೇರಿಯಲ್ಲಿದ್ದ ಸೋಫಾ, ಎಸಿ ಎಲ್ಲವೂ ಸುಟ್ಟು ಭಸ್ಮವಾಗಿದೆ.ಯಾದಗಿರಿ ನಗರದ ಸ್ಟೇಷನ ರಸ್ತೆಯಲ್ಲಿರುವ ಕನಕ ವೃತ್ತದ ಬಳಿಯಿರುವ ಕಾಂಗ್ರೆಸ್ ಕಚೇರಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ. ಪರಿಣಾಮ ಕಚೇರಿಯಲ್ಲಿದ್ದ ಸೋಫಾ, ಎಸಿ ಎಲ್ಲವೂ ಸುಟ್ಟು ಭಸ್ಮವಾಗಿದೆ. ಕಚೇರಿಗೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ, ಡಾಗ್ ಸ್ಕ್ವಾಡ್, ಬೆರಳಚ್ಚು ತಜ್ಞರು ಸೇರಿ ಪರಿಶೀಲನೆ ನಡೆಸಿದ್ದಾರೆ. ಇನ್ನೂ ಬೆಂಕಿ ಹಚ್ಚಲು ಬಳಸಿದ್ದ ಪೆಟ್ರೋಲ್ ಕ್ಯಾನ್ ಅಲ್ಲೇ ಬಿಸಾಕಿ ಹೋಗಿದ್ದು, ಪೊಲೀಸರು ತನಿಖೆ ನಡೆಸಿದ್ದಾರೆ.

## ಶಿರಸ್ತೆದಾರ ಅಪಹರಣ:ಆರೋಪಿ ಶಾದ್ರಕ್ ಹಂದಿಕೇರಾ ನ್ಯಾಯಾಂಗ ಬಂಧನಕ್ಕೆ

ಮಲ್ಲಮ್ಮನುಡಿವಾರ್ತೆಚಿಟಗುಪ್ಪ:ಮೇ.24: ಇಲ್ಲಿಯ ತಹಸೀಲ್ ಕಚೇರಿಯ ಶಿರಸ್ತೆದಾರ ಸುಭಾಷಚಂದ್ರ ನಿಡಗುಂದಿ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಟಗುಪ್ಪ ಪಿಎಸ್ಐ ಹಾಗೂ ಸಿಬ್ಬಂದಿ ವರ್ಗ ಆರೋಪಿ ಶಾದ್ರಕ್ ದಶರಥ್ ಹಂದಿಕೇರಾ ಇವರನ್ನು ಮೇ22 ರಂದು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಅಪಹರಣಕ್ಕೆ ಬಳಸಿದ ಕಿಯಾ ಸೆಲಟೋಸ್ ಕಾರ ಸಹ ಜಪ್ತಿ ಮಾಡಲಾಗಿದೆ. ಹಾಗೂ ಇನ್ನಿತರ ಅರೋಪಿಗಳ ಬಂಧನಕ್ಕೆ ಚಿಟಗುಪ್ಪ ಪೊಲೀಸರು ಬಲೆ ಬೀಸಿದ್ದಾರೆ.

## ನೀತಿ ಆಯೋಗ ಆಯೋಗ್ಯ ಸಂಸ್ಥೆ ; ಜೈರಾಮ್ ರಮೇಶ್

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ, ಮೇ 24 : ನೀತಿ ಆಯೋಗವನ್ನು ಅಯೋಗ್ಯ ಸಂಸ್ಥೆ ಎಂದು ಕಾಂಗ್ರೆಸ್ ಜರಿದಿದೆ. ನೀತಿ–ಆಯೋಗ ಸಭೆಯು ಬೂಟಾಟಿಕೆ ಮತ್ತು ದಿಕ್ಕು ತಪ್ಪಿಸುವಿಕೆಯ ಮತ್ತೊಂದು ಕಸರತ್ತು ಎಂದು ಅದು ಹೇಳಿದೆ. ವಿಕಸಿತ್ ಭಾರತ ಗುರಿಯ ಪ್ರಗತಿಯನ್ನು ಪರಿಶೀಲಿಸಲು ನೀತಿ ಆಯೋಗದ ಆಡಳಿತ ಮಂಡಳಿಯು ಇಂದು ಪ್ರಧಾನಿ ನರೇಂದ್ರ ಮೋದಿಯವರ ಅಧ್ಯಕ್ಷತೆಯಲ್ಲಿ ಸಭೆ ಸೇರಲಿದೆ ಎಂದು ಕಾಂಗ್ರೆಸ್ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

## ನನ್ನನ್ನು ನಾಯಿ ಎಂದವರು ಅಳುತ್ತಿದ್ದಾರೆ:ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.24: ನನ್ನನ್ನ ನಾಯಿ ಅಂತ ಬೈಯ್ದು ಅವರು ಅಳುತ್ತಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದರು.

ಕೆಪಿಸಿಸಿ ಕಚೇರಿಯಲ್ಲಿಂದು ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು ಕಲಬುರಗಿಯಲ್ಲಿ ಬಿಜೆಪಿ ಪ್ರತಿಭಟನೆ ವಿಚಾರವಾಗಿ ಮಾತನಾಡಿ, ನನ್ನನ್ನ ಕ್ಯಾಬಿನೆಟ್‌ನಿಂದ ಕೈ ಬಿಡಬೇಕು ಅಂತ ?ಪ್ರಿಯಾಂಕ್ ಖರ್ಗೆ ಹಠಾವೋ' ಅಂತಿದ್ದಾರೆ. ಇದು ?ಪ್ರಿಯಾಂಕ್ ಖರ್ಗೆ ಹಠಾವ್ ನಾರಾಯಣಸ್ವಾಮಿ ಬಚಾವೋ'ಪ್ರತಿಭಟನೆ. ಕಾಂಗ್ರೆಸ್‌ನವ್ರು ಮೋದಿಯವರಿಗೆ ಪ್ರಶ್ನೆ ಮಾಡಬಾರದು ಅಂತಾರೆ. ದೇಶದ ಆರ್ಥಿಕ ವಿಚಾರ ಬಂದಾಗಲೂ ಪ್ರಶ್ನೆ ಮಾಡಬಾರದು ಅಂತಾ ಪ್ರೆಸ್‌ಮೀಟ್ ಮಾಡ್ತಾರೆ. ಇಂದು ರಿಪಬ್ಲಿಕ್ ಆಫ್ ಕಲಬುರಗಿ ಅಂತಾ ಹೋಗಿದ್ದಾರೆ. ನಾರಾಯಣಸ್ವಾಮಿಯವ್ರು ಅಲ್ಲಿ ಹೋಗಿ ಅಳುತ್ತಾ ಇದ್ದಾರೆ. ನನ್ನ ಮೇಲೆ ಅತ್ಯಾಚಾರ ಆಗಿದೆ ಅಂತಾ ಅಳುತ್ತಿದ್ದಾರೆ, ಅವ್ರೇನೂ ಸಂತ್ರಸ್ತರಾ..? ನಾಯಿ ಅಂತ ಬೈದಿದ್ದು ನಂಗೆ ಅವ್ರು, ಸಂತ್ರಸ್ತರ ರೀತಿ ಅಳುತ್ತಿದ್ದಾರೆ. ಉಲ್ಟಾ ನನ್ನ ವಿರುದ್ಧವೇ ಪ್ರತಿಭಟನೆ ಮಾಡ್ತಿದ್ದಾರೆ. ಅಶೋಕ್, ವಿಜಯೇಂದ್ರ, ಸಿಟಿ ರವಿ, ಮಾಜಿ ಸಿಎಂಗಳು ಕಲಬುರಗಿಗೆ ಬಂದಿದ್ದಾರೆ. ಅಧಿಕಾರ ಇದ್ದಾಗ ಅಭಿವೃದ್ಧಿಗೆ ಒಬ್ಬರೂ ಬರಲಿಲ್ಲ. ಆದ್ರೀಗ ನಾಲ್ಕು ಬಾರಿ ಕಲಬುರಗಿಗೆ ಭೇಟಿ ನೀಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಅಕ್ಕಿ ಕಳ್ಳನಿಗೆ ಟಿಕೆಟ್ ಕೊಟ್ರಲ್ಲ ಏನಾಯ್ತು?

4 ಸಲ ಬಂದಾಗಲೂ ಪ್ರಿಯಾಂಕ್

(2ನೇ ಪುಟ ನೋಡಿ)

## ರಾಜ್ಯದೆಲ್ಲೆಡೆ ಮೇ 28ರವರೆಗೆ ಭಾರೀ ಮಳೆ



ಬೆಂಗಳೂರು:ಮೇ.24: ಮೇ 28ರವರೆಗೆ ರಾಜ್ಯದೆಲ್ಲೆಡೆ ಭಾರೀ ಮಳೆಯಾಗುವ ಎಚ್ಚರಿಕೆಯನ್ನು ಹವಾಮಾನ ಇಲಾಖೆ ನೀಡಿದೆ.

ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಭಾಗದಲ್ಲಿ ವ್ಯಾಪಕ ಮಳೆಯ ಎಚ್ಚರಿಕೆಯನ್ನು ನೀಡಿದ್ದು, ಮೇ 24ರಿಂದ ಮೇ 27ರವರೆಗೆ ರೆಡ್

(2ನೇ ಪುಟ ನೋಡಿ)

## ಸಿಇಟಿ ಫಲಿತಾಂಶ ಪ್ರಕಟ : 2,75,677 ವಿದ್ಯಾರ್ಥಿಗಳಿಗೆ ರ‍್ಯಾಂಕ್



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.24: ಯುಜಿ ಸಿಇಟಿ 2025ರ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು, 2,75,677 ವಿದ್ಯಾರ್ಥಿಗಳಿಗೆ ರ‍್ಯಾಂಕ್ ನೀಡಲಾಗಿದೆ.

ಈ ಕುರಿತು ಉನ್ನತ ಶಿಕ್ಷಣ ಸಚಿವ ಡಾ. ಸುಧಾಕರ್ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.3 ಲಕ್ಷದ 11 ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 2,75,677 ವಿದ್ಯಾರ್ಥಿಗಳಿಗೆ ರ‍್ಯಾಂಕ್ ನೀಡಲಾಗಿದೆ. ಬೀದರ್‌ನಲ್ಲಿ ವಿದ್ಯಾರ್ಥಿ ಜನಿವಾರ ಹಾಕಿದ್ದಕ್ಕೆ ಎಕ್ಸಾಂಗೆ ಕೂರಿಸದ ಪ್ರಕರಣದಲ್ಲಿ ವಿದ್ಯಾರ್ಥಿಗೆ ಉಳಿದ ವಿಷಯಗಳ ಅಂಕಗಳ ಆಧಾರದಲ್ಲಿ ಸರಾಸರಿ ಅಂಕಗಳನ್ನು ನೀಡಲಾಗಿದೆ ಎಂದು ಸಚಿವರು ತಿಳಿಸಿದರು. ಇನ್ನು ಭೌತಶಾಸ್ತ್ರದಲ್ಲಿ ಒಂದು ಗ್ರೇಸ್ ಅಂಕ ನೀಡಲಾಗಿದೆ. ರಸಾಯನ ಶಾಸ್ತ್ರದಲ್ಲಿ 2 ಪ್ರಶ್ನೆಗಳಿಗೆ ಎರಡು ಸರಿ ಉತ್ತರ ಮತ್ತು ಜೀವಶಾಸ್ತ್ರದಲ್ಲಿ 1 ಪ್ರಶ್ನೆಗೆ ಎರಡು ಸರಿ ಉತ್ತರ ಅಂತ ಪರಿಗಣನೆ ಮಾಡಲಾಗಿದೆ ಎಂದು ತಿಳಿಸಿದರು.

ಸಿಇಟಿ ರ‍್ಯಾಂಕ್ ಡಿಟೇಲ್ಸ್:

ಒಟ್ಟು ಪರೀಕ್ಷೆಗೆ ಅರ್ಜಿ ಹಾಕಿದವರು– 3,30,787 ವಿದ್ಯಾರ್ಥಿಗಳು.

ಪರೀಕ್ಷೆ ಹಾಜರಾದವರು– 3,11,991 ವಿದ್ಯಾರ್ಥಿಗಳು.

ಸಿಇಟಿ ರ‍್ಯಾಂಕ್ ಪಡೆದವರು– 2,75,677 ವಿದ್ಯಾರ್ಥಿಗಳು.

ಎಂಜಿನಿಯರ್ ರ‍್ಯಾಂಕ್ ಪಡೆದವರು– 2,62,195 ವಿದ್ಯಾರ್ಥಿಗಳು

BNYS ರ‍್ಯಾಂಕ್ ಪಡೆದವರು– 1,98,679 ವಿದ್ಯಾರ್ಥಿಗಳು.

ಅಗ್ರಿಕಲ್ಚರ್ ರ‍್ಯಾಂಕ್ ಪಡೆದವರು– 2,14,588 ವಿದ್ಯಾರ್ಥಿಗಳು.

ವೆಟರ್ನರಿ ರ‍್ಯಾಂಕ್– 2,18,282 ವಿದ್ಯಾರ್ಥಿಗಳು.

ಬಿ ಫಾರ್ಮ್ ರ‍್ಯಾಂಕ್– 2,66,256 ವಿದ್ಯಾರ್ಥಿಗಳು.

ಫಾರ್ಮ್ ಆ ರ‍್ಯಾಂಕ್ ಪಡೆದವರು– 2,66,757 ವಿದ್ಯಾರ್ಥಿಗಳು.

ನರ್ಸಿಂಗ್ ರ‍್ಯಾಂಕ್ ಪಡೆದವರು– 2,08,171 ವಿದ್ಯಾರ್ಥಿಗಳು.

ಟಾಪ್ 3 ರ‍್ಯಾಂಕ್ ಪಡೆದ ವಿದ್ಯಾರ್ಥಿಗಳ ವಿವರ:

> ಎಂಜಿನಿಯರ್ ರ‍್ಯಾಂಕ್

1. ಭವೇಶ್ ಜಯಂತಿ– 99.06% ಚೈತನ್ಯ ಟೆಕ್ನೋ ಮಾರತ್ ಹಳ್ಳಿ.
2. ಸಾತ್ವಿಕ್ ಬಿರಾದರ್– 98.83% ಚೈತನ್ಯ ಟೆಕ್ನೊ ಉತ್ತರಹಳ್ಳಿ
3. ದಿನೇಶ್ ಗೋಮತಿ– 98.67% ಚೈತನ್ಯ ಟೆಕ್ನೋ ಮಾತರ್ ಹಳ್ಳಿ.

> ವೆಟರ್ನರಿ ರ‍್ಯಾಂಕ್

1. ಹರೀಶ್ ರಾಜ್– ನಾರಾಯಣ ಇ ಟೆಕ್ನೊ, ದೊಡ್ಡ ಬೆಟ್ಟಹಳ್ಳಿ
2. ಆತ್ರೇಯ ವೆಂಕಟಾಚಲಂ– ನ್ಯಾಷನಲ್ ಪಬ್ಲಿಕ್ ಸ್ಕೂಲ್, HSR ಲೇಔಟ್.
3. ಸಫಲ್ ಖ ಶೆಟ್ಟಿ– ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು.

> ಅಗ್ರಿಕಲ್ಚರ್ ರ‍್ಯಾಂಕ್

1. ಅಕ್ಷಯ್ ಒ ಹೆಗ್ಡೆ– ಆಳ್ವಾಸ್ ಪಿಯು ಕಾಲೇಜ್, ಮೂಡಬಿದಿರೆ.
2. ಸಾಯಿಶ್ ಶ್ರವಣ್ ಪಂಡಿತ್– ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು
3. ಸುಚಿತ್ ಪಿ ಪ್ರಸಾದ್– ಎಕ್ಸ್‌ಪರ್ಟ್ ಪಿಯು ಕಾಲೇಜು, ಮಂಗಳೂರು.

>BNYS ರ‍್ಯಾಂಕ್

1. ಹರೀಶ್ ರಾಜ್, ನಾರಾಯಣ ಇ ಟೆಕ್ನೊ ದೊಡ್ಡಬೆಟ್ಟಹಳ್ಳಿ
2. ಆತ್ರೇಯ ವೆಂಕಟಾಚಲಂ– ನ್ಯಾಷನಲ್ ಪಬ್ಲಿಕ್ ಸ್ಕೂಲ್, HSR ಲೇಔಟ್.
3. ಸಫಲ್ ಎಸ್ ಶೆಟ್ಟಿ– ಎಕ್ಸ್‌ಪರ್ಟ್

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಮೇ 28ರವರೆಗೆ ಭಾರೀ ಮಳೆ

ಅಲರ್ಟ್ ಘೋಷಿಸಲಾಗಿದೆ. ಬೆಳಗಾವಿ, ಹಾಸನ, ಧಾರವಾಡ, ಚಾಮರಾಜನಗರ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಉಳಿದ ಎಲ್ಲಾ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬೆಂಗಳೂರಿನಲ್ಲಿ ಭಾರೀ ಮಳೆಯ ಮುನ್ಸೂಚನೆ ನೀಡಿದೆ. ಮೇ28 ರವರೆಗೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಗುಡುಗು, ಸಹಿತ ಬಿರುಗಾಳಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ವಿಜ್ಞಾನಿ ಸಿಎಸ್ ಪಾಟೀಲ್ ತಿಳಿಸಿದ್ದಾರೆ.

# ಯಾವುದೇ ಗುರಿ ಅಸಾಧ್ಯವಲ್ಲ: ಪ್ರಧಾನಿ ಮೋದಿ

ಅನುಗುಣವಾಗಿ ಅಗತ್ಯ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಕನಿಷ್ಠ ಒಂದು ಪ್ರವಾಸಿ ತಾಣವನ್ನು ವಿಶ್ವದರ್ಜೆಯ ತಾಣವನ್ನಾಗಿ ಅಭಿವೃದ್ಧಿಪಡಿಸಬೇಕು. ಒಂದು ರಾಜ್ಯ, ಒಂದು ಜಾಗತಿಕ ತಾಣ. ಇದು ನೆರೆಯ ನಗರಗಳನ್ನು ಪ್ರವಾಸಿ ಸ್ಥಳಗಳಾಗಿ ಅಭಿವೃದ್ಧಿಪಡಿಸಲು ಸಹ ಕಾರಣವಾಗುತ್ತದೆ ಎಂದರು.

ಭಾರತ ವೇಗವಾಗಿ ನಗರೀಕರಣಗೊಳ್ಳುತ್ತಿದೆ. ಭವಿಷ್ಯಕ್ಕೆ ಸಿದ್ಧವಾಗಿರುವ ನಗರಗಳತ್ತ ನಾವು ಕೆಲಸ ಮಾಡಬೇಕು. ಬೆಳವಣಿಗೆ, ನಾವೀನ್ಯತೆ ಮತ್ತು ಸುಸ್ಥಿರತೆಯು ನಮ್ಮ ನಗರಗಳ ಅಭಿವೃದ್ಧಿಗೆ ಎಂಜಿನ್ ಆಗಿರಬೇಕು. ನಮ್ಮ ಕಾರ್ಯಪಡೆಯಲ್ಲಿ ಮಹಿಳೆಯರನ್ನು ಸೇರಿಸಿಕೊಳ್ಳುವ ನಿಟ್ಟಿನಲ್ಲಿ ನಾವು ಕೆಲಸ ಮಾಡಬೇಕು. ಅವರು ಕಾರ್ಯಪಡೆಯಲ್ಲಿ ಗೌರವಯುತವಾಗಿ ಸಂಯೋಜಿಸಲ್ಪಡುವಂತೆ ನಾವು ಕಾನೂನುಗಳು, ನೀತಿಗಳನ್ನು ರೂಪಿಸಬೇಕು ಎಂದು ತಿಳಿಸಿದರು.

ಸರ್ಕಾರ ಜಾರಿಗೆ ತಂದ ನೀತಿಗಳು ಸಾಮಾನ್ಯ ನಾಗರಿಕರ ಜೀವನದಲ್ಲಿ ಬದಲಾವಣೆ ತರುವ ರೀತಿಯಲ್ಲಿ ನಾವು ಕೆಲಸ ಮಾಡಬೇಕು. ಜನರು ಬದಲಾವಣೆಯನ್ನು ಅನುಭವಿಸಿದಾಗ ಮಾತ್ರ, ಅದು ಬದಲಾವಣೆಯನ್ನು ಬಲಪಡಿಸುತ್ತದೆ. ಬದಲಾವಣೆಯನ್ನು ಒಂದು ಚಳುವಳಿಯಾಗಿ ಪರಿವರ್ತಿಸುತ್ತದೆ. 140 ಕೋಟಿ ಜನರ ಆಕಾಂಕ್ಷೆಗಳನ್ನು ಈಡೇರಿಸಲು ನಮಗೆ ಒಂದು ತಂಡವಾಗಲು ಉತ್ತಮ ಅವಕಾಶವಿದೆ. 2047ರ ವೇಳೆಗೆ ಭಾರತವನ್ನು ವಿಕಸಿತ ಮಾಡುವುದು ನಮ್ಮ ಗುರಿಯಾಗಿದೆ. ಪ್ರತಿಯೊಂದು ರಾಜ್ಯ, ಪ್ರತಿಯೊಂದು ನಗರ, ಪ್ರತಿಯೊಂದು ನಗರ ಪಾಲಿಕೆ ಮತ್ತು ಪ್ರತಿಯೊಂದು ಗ್ರಾಮವನ್ನು ವಿಕಸಿತ ಮಾಡುವ ಗುರಿ ನಮಗಿರಬೇಕು. ನಾವು ಈ ಮಾರ್ಗಗಳಲ್ಲಿ ಕೆಲಸ ಮಾಡಿದರೆ, ವಿಕಸಿತ ಭಾರತ ಆಗಲು 2047ರವರೆಗೆ ಕಾಯಬೇಕಾಗಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪುದುಚೇರಿ ಸಿಎಂ ರಂಗಸ್ವಾಮಿ, ಕರ್ನಾಟಕ ಸಿಎಂ ಸಿದ್ಧರಾಮಯ್ಯ ಮತ್ತು ಕೇರಳದ ಮುಖ್ಯಮಂತ್ರಿ ಪಿಣರಾಯ್ ವಿಜಯನ್ ಸಭೆಗೆ ಗೈರುಹಾಜರಾಗಿದ್ದರು. ಆಂಧ್ರಪ್ರದೇಶ, ತಮಿಳುನಾಡು ಮತ್ತು ತೆಲಂಗಾಣ ಮುಖ್ಯಮಂತ್ರಿಗಳಾದ ಎನ್ ಚಂದ್ರಬಾಬು ನಾಯ್ಡು, ಎಂಕೆ ಸ್ಟಾಲಿನ್ ಮತ್ತು ರೇವಂತ್ ರೆಡ್ಡಿ ಉಪಸ್ಥಿತರಿದ್ದರು. ಜಮ್ಮು ಕಾಶ್ಮೀರದ ಸಿಎಂ ಒಮರ್ ಅಬ್ದುಲ್ಲಾ ಮತ್ತು ಹಿಮಾಚಲ ಪ್ರದೇಶದ ಸುಖವಿಂದರ್ ಸುಖು ಕೂಡ ಸಭೆಯಲ್ಲಿ ಭಾಗವಹಿಸಿದ್ದರು.

# ಕೇಸ್: ದಿನೇಶ್ ಗುಂಡೂರಾವ್

ಟೆಸ್ಟ್ ನಡೆಸುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಬಾಣಂತಿಯರು ಜನ ಹೆಚ್ಚಿರುವ ಕಡೆ ಮಾಸ್ಕ್ ಧರಿಸಲು ಸಲಹೆ ನೀಡಲಾಗಿದೆ. ಯಾರು ಭಯಪಡುವ ಅಗತ್ಯವಿಲ್ಲ. ಕೋವಿಡ್ ಬಂದಿದೆ ಎಂದು ಆತಂಕಪಡುವ ಅಗತ್ಯವಿಲ್ಲ. ಆರೋಗ್ಯ ಇಲಾಖೆಯ ಮಾರ್ಗಸೂಚನೆಯಂತೆ ಮುಂಜಾಗ್ರತೆ ವಹಿಸಿದರೆ ಸಾಕು. ತಕ್ಷಣಕ್ಕೆ ಮಾಸ್ಕ್ ಎಲ್ಲರಿಗೂ ಕಡ್ಡಾಯ ಮಾಡಿಲ್ಲ. ಬಾಣಂತಿಯರು, ಗರ್ಭಿಣಿಯರು ಧರಿಸಬೇಕು ಎಂದು ಸೂಚಿಸಲಾಗಿದೆ. ಸ್ವಚ್ಛತೆ ಕಾಪಾಡಿಕೊಂಡು ಸ್ಯಾನಿಟೈಸರ್ ಬಳಸುವುದು ಉತ್ತಮ. ಸಾರ್ವಜನಿಕರು ಪ್ರಯಾಣ ಮಾಡಲು ಯಾವುದೇ ಅಡ್ಡಿಯಿಲ್ಲ. ಎಲ್ಲರು ಸಹಜ ಜೀವನ ನಡೆಸಬಹುದು. ಮಾಧ್ಯಮಗಳು ಆತಂಕ ಸೃಷ್ಟಿಸುವುದು ಬೇಡ. ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಧ್ಯಮಗಳಿಂದ ಆಗಲಿ ಎಂದರು.

ಒಂದು ತಿಂಗಳಿಗಾಗುವಷ್ಟು ಟೆಸ್ಟಿಂಗ್ ಕಿಟ್‌ಗಳನ್ನ ತೆಗೆದಿಟ್ಟುಕೊಳ್ಳಲು ಸೂಚಿಸಲಾಗಿದೆ. ಅಗತವಿದ್ದಾಗ ಮಾತ್ರ ಟೆಸ್ಟ್ ಮಾಡಲಾಗುವುದು. ಬೆಂಗಳೂರಿನಲ್ಲಿ 32 ಕೋವಿಡ್ ಪಾಸಿಟಿವ್ ಪ್ರಕರಣಗಳಿದ್ದು, ಕಳೆದ ಒಂದು ವಾರದಲ್ಲಿ ಕೊಂಚ ಏರಿಕೆ ಕಂಡಿದೆ. ಎಲ್ಲವನ್ನು ಮಾನಿಟರ್ ಮಾಡಲಾಗುತ್ತಿದೆ. ಸದ್ಯಕ್ಕೆ ಕೋವಿಡ್ ವಿಚಾರದಲ್ಲಿ ಆತಂಕಪಡುವ ಸ್ಥಿತಿ ಇಲ್ಲ ಎಂದು ಹೇಳಿದರು.

# ಪ್ರದರ್ಶನ ಬೇಡ: ಸಿ.ಟಿ.ರವಿ

ನಿಮ್ಮ ದೌರ್ಜನ್ಯ ಮಾಡಿರುವುದು ಪ್ರಜಾಪ್ರಭುತ್ವದ ದೌರ್ಜನ್ಯಕ್ಕೆ ಸಮ ಎಂದು ಅವರು ತಿಳಿಸಿದರು.

ಸದಾಕಾಲ ಸಂವಿಧಾನದ ಬಗ್ಗೆ ಮಾತನಾಡುವ ಪ್ರಿಯಾಂಕ ಖರ್ಗೆ ರವರೇ, ಸಂವಿಧಾನವನ್ನು ಗೌರವಿಸುವ ನಡವಳಿಕೆ ಇದುವೇ ಎಂದು ಪ್ರಶ್ನಿಸಿದರು. ಘಟನೆ ನಡೆದ ನಂತರ ನೀವು ಪದ್ಮವಿಭೂಷಣ ಕೊಡಬೇಕಿತ್ತಾ; ಪದ್ಮಶ್ರೀ ನೀಡಬೇಕಿತ್ತಾ ಎಂದು ಉತ್ತರ ನೀಡುತ್ತೀರಿ. ಆ ಮೂಲಕ ಹಲ್ಲೆ ನೀವೇ ಮಾಡಿಸಿದ್ದು ಎಂದು ಸಮರ್ಥನೆ ಮಾಡುವ ಕೆಲಸವನ್ನು ಮಾಡಿದ್ದೀರಿ ಎಂದು ಆಕ್ಷೇಪಿಸಿದರು.

ಅಧಿಕಾರದಲ್ಲಿ ಇರುವವರಿಗೆ ಜಾಸ್ತಿ ಜವಾಬ್ದಾರಿ ಇರುತ್ತದೆ. ನಿಮ್ಮ ವರ್ತನೆಯು ಜವಾಬ್ದಾರಿಯುತ ವರ್ತನೆಯಾಗಲಿ. ನಿಮಗೆ ಸಹಜವಾಗಿ ಆಕ್ರೋಶವಿದ್ದರೆ, ನಿಮ್ಮ ತಂದೆಯವರು ಎಐಸಿಸಿ ಅಧ್ಯಕ್ಷರು, ಚುನಾವಣೆ ಸಂದರ್ಭದಲ್ಲಿ ಕೇರಳದ ವೈನಾಡಿನಲ್ಲಿ ನಾಮಪತ್ರ ಸಲ್ಲಿಸಲು ಹೋದಾಗ ಅವರನ್ನು ಹೊರಗಿಡುತ್ತಾರೆ. ಆವಾಗ ನೀವು ಆಕ್ರೋಶಗೊಳ್ಳಬೇಕಾಗಿತ್ತು ಎಂದು ತಿಳಿಸಿದರು. ಎಐಸಿಸಿ ಪಕ್ಷದ ಅಧ್ಯಕ್ಷರೆಂದರೆ ಆ ಪಕ್ಷದ ಸುಪ್ರೀಂ, ನಾಮಪತ್ರ ಸಲ್ಲಿಕೆಯ ಸಮಯದಲ್ಲಿ ಮಲ್ಲಿಕಾರ್ಜುನ ಖರ್ಗೆಯವರನ್ನು ಅಸಹಾಯಕರಾಗಿ ಹೊರಗೆ ನಿಲ್ಲಿಸಿದ್ದರು ಎಂದು ನೆನಪಿಸಿದರು.ಮಲ್ಲಿಕಾರ್ಜುನ ಖರ್ಗೆ ರವರ ರಾಜಕೀಯ ಹಿರಿತನ, ವಯೋಹಿರಿತನ ಎರಡಕ್ಕೂ ಕಾಂಗ್ರೆಸ್ ಪಕ್ಷವು ಗೌರವಕೊಟ್ಟಿಲ್ಲ ಎಂದು ನಾವು ಕಾಂಗ್ರೆಸ್ ಪಕ್ಷದವರಲ್ಲದಿದ್ದರೂ ದುಃಖವಾಯಿತು. ಪ್ರಿಯಾಂಕ ಖರ್ಗೆ ರವರು ಆ ಸಮಯದಲ್ಲಿ ಆಕ್ರೋಶವನ್ನು ತೋರಿಸಿದ್ದರೆ ಅದು ಸಹಜವಾದ ಆಕ್ರೋಶವಾಗುತ್ತಿತ್ತು. ನಿಮ್ಮ ಪಕ್ಷದ ಪ್ರಮುಖ ನಾಯಕ ನೋಡೋಣ, ನಾವು ಮುಂದೆ ಸಂವಿಧಾನವನ್ನು ಬದಲಾಯಿಸುತ್ತೇವೆ ಎಂದಾಗ ನೀವು ಆಕ್ರೋಶವನ್ನು ಹೊರಗೆ ಹಾಕಿದ್ದರೆ. ಅದು ಸಹಜ ಆಕ್ರೋಶವಾಗುತಿತ್ತು, ಸಂವಿಧಾನದ ಕಳಕಳಿಯ ಆಕ್ರೋಶವಾಗುತಿತ್ತು. ಆದರೆ ನಿಮ್ಮ ಬಾಯಿಯಲ್ಲಿ ಪದವೇ ಬರಲಿಲ್ಲ ಎಂದು ಟೀಕಿಸಿದರು.

ಈಗ ನೀವು ನಿಜಾಮಗಿರಿ ತೋರಿಸುವುದಕ್ಕೆ ಹೊರಟಿದ್ದೀರ ಎಂದು ಪ್ರಶ್ನಿಸಿದರು. ನಿಜಾಮ ಶಾಹಿ ನಡೆಯುವುದಿಲ್ಲ. ಪ್ರಸ್ತುತ ಇರುವುದು ಪ್ರಜಾಪ್ರಭುತ್ವ ಎಂದು ತಿಳಿಸಿದರು. ನಿಮ್ಮ ನಿಜಾಮ ಶಾಹಿಯ ವರ್ತನೆಯನ್ನು ಕಳಚಿಕೊಂಡರೆ ಪ್ರಜಾಪ್ರಭುತ್ವದಲ್ಲಿ ನಿಮ್ಮ ಬೆಳವಣಿಗೆ ಆಗುತ್ತದೆ. ನಿಜಾಮ ಶಾಹಿಯ ವರ್ತನೆಯನ್ನೇ ನೀವು ಮುಂದುವರೆಸಿದರೆ ನಿಮ್ಮ ಬೆಳವಣಿಗೆ ಆಗುವುದಿಲ್ಲ. ಉದಾಹರಣೆಗೆ ತುರ್ತು ಪರಿಸ್ಥಿತಿ ಹೇರಿದವರನ್ನು ಹೀನಾಯವಾಗಿ ಸೋಲಿಸಿತು ಮತ್ತು ದೇಶ ತುರ್ತು ಪರಿಸ್ಥಿತಿಗೆ ಉತ್ತರ ಕೊಟ್ಟಿದೆ. 1977 ರಾಯಬಾರಿ ಕ್ಷೇತ್ರದಲ್ಲಿ ಇಂದಿರಾ ಈಸ್ ಇಂಡಿಂ–ಯಾ ಎಂದು ಹೇಳಿಸಿಕೊಂಡವರು ಪ್ರಜಾಪ್ರಭುತ್ವದ ಹೊಡೆತಕ್ಕೆ ನೆಲಕಚ್ಚಿ ಹೋದರು. ಅದು ಜನ ಕೊಡುವುದು ತೀರ್ಪು. ನಿಮ್ಮ ಈ ಗೂಂಡಾಗಿರಿಗೂ ಕೂಡ ಜನ ಅಂತಹದೇ ತೀರ್ಪು ನೀಡುತ್ತಾರೆ. ನಿಮ್ಮ ವರ್ತನೆಯನ್ನು ಸುಧಾರಿಸಿಕೊಳ್ಳಿ ಎಂದು ಅವರು ತಿಳಿಸಿದರು.ವಿಧಾನ ಪರಿಷತ್ತಿನ ವಿಪಕ್ಷದ ನಾಯಕರು ಗಾದೆ ಮಾತನ್ನು ಹೇಳಿದ್ದು, ಅದು ಲೋಕ ನುಡಿಯಲ್ಲಿರುವ ಮಾತು; ಕಾರಣವಿಲ್ಲದೆ ಟೀಕೆ ಮಾಡಿದರೆ ಬಳಸುವ ಮಾತದು. ಕಾರಣವಿದ್ದು ಟೀಕೆ ಮಾಡುವುದು ಬೇರೆ, ಕಾರಣವಿಲ್ಲದೆ ಟೀಕೆ ಮಾಡುವುದು ಬೇರೆ ಎಂದು ಅವರು ತಿಳಿಸಿದರು.

ಭಾರತದ ಸಂಸ್ಕೃತಿಯಲ್ಲಿ ನಾಯಿಗೆ ವಿಶೇಷವಾದ ಸ್ಥಾನವಿದೆ. ನಿಯತ್ತಿಗೆ ಹೆಸರಾಗಿರುವುದು. ದೇಶದ ವಿಷಯದಲ್ಲೂ ಟೀಕೆ ಮಾಡುವವರನ್ನು ನಾನು ನಿಯತ್ತಿನವರು ಎಂದು ನಾನು ಭಾವಿಸುವುದಿಲ್ಲ ಅಥವಾ ಯಾರಿಗೆ ನಿಯತ್ತು ಇದೆ ಎಂಬುದು ಒಂದು ಪ್ರಶ್ನಾರ್ಥಕ ಚಿಹ್ನೆ ಎಂದು ತಿಳಿಸಿದರು.ಕಲಬುರ್ಗಿಯನ್ನು ರಿಪಬ್ಲಿಕ್ ಆಫ್ ಕಲಬುರ್ಗಿಯನ್ನಾಗಿ ಮಾಡುತ್ತೇವೆ ಎಂದು ಯಾರಾದರೂ ಭಾವಿಸಿದ್ದರೆ ಅದು ನಡೆಯದು. ಈ ಕಲಬುರ್ಗಿಯ ಜನ ರಜಾಕಾರರ ವಿರುದ್ಧ ಹೋರಾಟ ಮಾಡಿದವರು. ಇಸ್ಲಾಂ ರಿಪಬ್ಲಿಕ್ ಮಾಡುವುದಕ್ಕೆ ಹೊರಟವರನ್ನೇ ಮಣ್ಣು ಮುಕ್ಕಿಸಿದ ಗಂಡು ಮೆಟ್ಟಿದ ನೆಲವಿದು. ರಿಪಬ್ಲಿಕ್ ಆಫ್ ಕಲಬುರ್ಗಿಯನ್ನಾಗಿ ಮಾಡಿ ಇದನ್ನು ನಾವೆಲ್ಲಾ ಕುಟುಂಬದ ಆಸ್ತಿ ಎಂದು ಮಾಡಿಕೊಳ್ಳುತ್ತೇವೆ ಎಂದು ಯಾರಾದರು ಭಾವಿಸಿದ್ದರೆ ಅದಕ್ಕೆ ಕಲಬುರ್ಗಿಯ ಜನ ಅವಕಾಶ ಕೊಡುವುದಿಲ್ಲ. ಇನ್ನು ಇಲ್ಲಿ ಹೋರಾಟದ ಕಿಚ್ಚು ಉಳಿದಿದೆ ಎಂದು ಜ್ಞಾಪಿಸಿದರು.

ಅಧಿಕಾರ ದುರುಪಯೋಗಮಾಡಿಕೊಂಡು ಹೋರಾಟಗಾರರನೆಲ್ಲಾ ಮುಗಿಸಬಹುದು ಎಂದು ಯಾರಾದರೂ ಭಾವಿಸಿದ್ದರೆ. ನಿಮ್ಮ ಅಧಿಕಾರ ಎಷ್ಟು ದಿನ ಇರುತ್ತದೆ, ಎಷ್ಟು ದಿನ ಅಧಿಕಾರದಲ್ಲಿ ಇರುತ್ತೀರಿ. ಅಧಿಕಾರವು ಶಾಶ್ವತವೇ ಎಂದು ಪ್ರಶ್ನಿಸಿದರು. ನಾವೇ ಅಧಿಕಾರದಲ್ಲಿ ಇರುತ್ತೇವೆ ಎಂದವರು ಮಣ್ಣಿನಲ್ಲಿ ಮಣ್ಣಾಗಿ ಹೋಗಿದ್ದಾರೆ. ಅಧಿಕಾರ ಯಾರಿಗೂ ಶಾಶ್ವತವಲ್ಲ. ಜನ ಅಧಿಕಾರವನ್ನು ಕೊಡುವುದು ಒಳ್ಳೆಯ ಕೆಲಸ ಮಾಡುವುದಕ್ಕೆ, ಒಳ್ಳೆ ಕೆಲಸಗಳ ಹೆಜ್ಜೆ ಗುರುತುಗಳನ್ನು ಬಿಟ್ಟು ಹೋಗಲು ಅಧಿಕಾರ ಕೊಡುವುದು. ಅಹಂಕಾರದಲ್ಲಿ ಮೆರೆಯುವುದಕ್ಕಲ್ಲ ದರ್ಪ ತೋರಿಸುವುದಕ್ಕಲ್ಲ, ನಿಜಾಮರ ಪ್ರತಿರೂಪವೆಂದು ಹೇಳಿ ಪರಿಭಾವಿಸವುದಕ್ಕಲ್ಲ ಜನರು ಅಧಿಕಾರ ಕೊಡುವುದು ಎಂದು ಟೀಕಿಸಿದರು.

ಪ್ರಿಯಾಂಕ ಖರ್ಗೆ ರವರು ಜವಾಬ್ದಾರಿಯಿಂದ ವರ್ತನೆ ಮಾಡಬೇಕು, ಗೂಂಡಾಗಿರಿಯನ್ನು ಯಾರೂ ಕೂಡ ಸಹಿಸುವುದಿಲ್ಲ, ಒಪ್ಪಿಕೊಳ್ಳುವುದಿಲ್ಲ. ಅಧಿಕಾರ ದರ್ಪ ತೋರಿಸುವುದನ್ನು ಬಿಡಿ. ಅಧಿಕಾರವನ್ನ ಸದ್ಬಳಕೆ ಮಾಡಿ ಒಳ್ಳೆ ಕೆಲಸ ಮಾಡಿ ಎಂದು ಅವರು ತಿಳಿಸಿದರು.

# ಅಳುತ್ತಿದ್ದಾರೆ:ಪ್ರಿಯಾಂಕ್ ಖರ್ಗೆ

ಖರ್ಗೆ ವಿರುದ್ಧವೇ ಪ್ರತಿಭಟನೆ ಮಾಡಲು ಬಂದಿದ್ದಾರೆ. ನೀವಿಲ್ಲಿ ರಾಜಕೀಯ ಮಾಡೋಕೆ ಬಂದಿದ್ರೆ ನಿಮಗೆ, ಮುಖಭಂಗಾನೆ, ಹಾಲಿನ ಪೌಡರ್ ಕದ್ದು ಶಿಕ್ಷೆ ಆದಂತಹ ವ್ಯಕ್ತಿ ಪರ ಬಂದಿದ್ರು. ಅವ್ರನ್ನ ಮರ್ಡರ್ ಮಾಡಲು ಪ್ರಯತ್ನ ಆಗಿದೆ ಅಂತಾ ಆರೋಪ ಮಾಡಿದ್ರು. ಆದ್ರೆ ಅವರವರೇ ಕುಡಿದು ಗಲಾಟೆ ಮಾಡಿಕೊಂಡಿದ್ರು ಅಂತಾ ವರದಿ ಬಂತು. ಲೋಕಲ್ ಲೀಡರ್ ಶಿಪ್ ನಂಬಿಕೊಂಡು ಬಂದರಲ್ಲಾ ಏನಾಯ್ತು..? ಅಕ್ಕಿ ಕಳ್ಳನಿಗೆ ಟಿಕೆಟ್ ಕೊಟ್ಟು ಅವನ ಪರವಾಗಿ ಬಂದ್ರಲ್ಲಾ ಏನಾಯ್ತು..? ಸ್ವಲ್ಪನಾದರು ಕಾಮನ್ ಸೆನ್ಸ್ ಯೂಸ್ ಮಾಡಿದ್ರೆ ಗೊತ್ತಾಗುತ್ತೆ ಅಲ್ವಾ ಅಂತ ಲೇವಡಿ ಮಾಡಿದರು.

ಮೈಸೂರು ಸ್ಯಾಂಡಲ್ ಸೋಪ್ ರಾಯಭಾರಿಯಾಗಿ ನಟಿ ತಮನ್ನಾ ಭಾಟಿಯಾ ಅವರ ಆಯ್ಕೆಯನ್ನ ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡರು.

ಸ್ಯಾಂಡಲ್ ಸೋಪ್‌ಗೆ ತಮ್ಮನ್ನಾ ಆಯ್ಕೆ ಕುರಿತು ಸಮರ್ಥನೆ ನೀಡಿದರು. ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆಯಲ್ಲಿ ನಾವು 437 ಕೋಟಿ ಲಾಭ ಮಾಡಿದ್ದೇವೆ. ಅದನ್ನ ಸಾವಿರ ಕೋಟಿ ಮಾಡಬೇಕು. ಅದ–ಕ್ಕೆ ಎಲ್ಲರ ಸಹಕಾರ ಮುಖ್ಯ. ನಮ್ಮ ಮಾರ್ಕೆಟಿಂಗ್ ಹೆಚ್ಚಾಗುತ್ತಲ್ಲ, ಹಾಕಿರುವ ಬಂಡವಾಳವೂ ಬರಬೇಕು, ಉದ್ಯೋಗ ಸೃಷ್ಟಿಯೂ ಆಗಬೇಕು. ಅದಕ್ಕೆ ಯಾರಾದರೇನು? ಇನ್ವೆಸ್ಟ್ ಕರ್ನಾಟಕದಲ್ಲಿ 15.20 ಸಾವಿರ ಕೋಟಿ ರಾಜ್ಯಕ್ಕೆ ಬಂತಲ್ಲ, ಬಂಡವಾಳ ಹರಿದು ಬಂದಿದೆಯಲ್ಲ ಅಂತ ಸಮರ್ಥನೆ ನೀಡಿದರು.

# 2,75,677 ವಿದ್ಯಾರ್ಥಿಗಳಿಗೆ ರ‍್ಯಾಂಕ್

ಪಿಯು ಕಾಲೇಜು, ಮಂಗಳೂರು.> ನರ್ಸಿಂಗ್ ರ‍್ಯಾಂಕ್1. ಹರೀಶ್ ರಾಜ್, ನಾರಾಯಣ ಇ ಟೆಕ್ನೊ ದೊಡ್ಡಬೆಟ್ಟಹಳ್ಳಿ2. ಆತ್ರೇಯ ವೆಂಕಟಾಚಲಂ– ನ್ಯಾಷನಲ್ ಪಬ್ಲಿಕ್ ಸ್ಕೂಲ್, ಊಖಖ ಲೇಔಟ್.3. ಸಫಲ್ ಎಸ್ ಶೆಟ್ಟಿ– ಎಕ್ಸ್‌ಪರ್ಟ್ ಪಿಯು ಕಾಲೇಜು, ಮಂಗಳೂರು.> ಫಾರ್ಮ್ ಆ ರ‍್ಯಾಂಕ್1. ಆತ್ರೇಯ ವೆಂಕಟಾಚಲಂ– ನ್ಯಾಷನಲ್ ಪಬ್ಲಿಕ್ ಸ್ಕೂಲ್, ಊಖಖ ಲೇಔಟ್.2. ಭವೇಶ್ ಜಯಂತಿ– ಚೈತನ್ಯ ಟೆಕ್ನೊ, ಮಾರತ್ ಹಳ್ಳಿ.3. ಹರೀಶ್ ರಾಜ್, ನಾರಾಯಣ ಇ ಟೆಕ್ನೊ ದೊಡ್ಡಬೆಟ್ಟಹಳ್ಳಿ> ಃ ಫಾರ್ಮ್ ರ‍್ಯಾಂಕ್1. ಆತ್ರೇಯ ವೆಂಕಟಾಚಲಂ– ನ್ಯಾಷನಲ್ ಪಬ್ಲಿಕ್ ಸ್ಕೂಲ್, HSR ಲೇಔಟ್.2. ಭವೇಶ್ ಜಯಂತಿ– ಚೈತನ್ಯ ಟೆಕ್ನೊ, ಮಾರತ್ ಹಳ್ಳಿ.3. ಹರೀಶ್ ರಾಜ್, ನಾರಾಯಣ ಇ ಟೆಕ್ನೊ,ದೊಡ್ಡಬೆಟ್ಟಹಳ್ಳಿ ಯಲಹಂಕ.> ವೆಟರ್ನರಿ ಪ್ರಾಕ್ಟಿಕಲ್ ರಾಂಕ್1. ರಕ್ಷಿತಾ– ಊಒಖ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಕಲ್ಯಾಣ ನಗರ2. ನಂದನ್ ಟಿ.ಎಸ್– ಖಿಏ ವಿಷನ್ ಪಿಯು ಕಾಲೇಜ್, ಚಿಕ್ಕಬಳ್ಳಾಪುರ3. ಭುವನೇಶ್ವರಿ– ಶ್ರೀ ಉಮಾಮಹೇಶ್ವರಿ ಪಿಯು ಕಾಲೇಜ್, ರಾಯಚೂರು.ಅಗ್ರಿಕಲ್ಚರ್ ಪ್ರಾಕ್ಟಿಕಲ್ ರಾಂಕ್1. ಕೀರ್ತನಾ– ಶಾರದಾಂಬ ಪಿಯುಕಾಲೇಜ್,ತುಮಕೂರು2. ರಕ್ಷಿತಾ–HMRನ್ಯಾಷನಲ್ ಪಿಯು ಕಾಲೇಜ್, ಕಲ್ಯಾಣ ನಗರ3. ಅಶ್ವಿನಿ ಯಕ್ಕುಂಡಿ– ಎಕ್ಸಲೆನ್ಸ್ ಸೈನ್ಸ್ ಪಿಯು ಕಾಲೇಜ್, ವಿಜಯಪುರ.

# ಖಂಡಿಸಿ ಹೋರಾಟ: ರವಿಕುಮಾರ್

ಮಾಡಿದ್ದೀರಿ? ಅಧಿಕಾರದಲ್ಲಿದ್ದಾಗ ದೌಲತ್ತು ತೋರಿಸೋದು, ಅಧಿಕಾರದಲ್ಲಿ ಇಲ್ಲದಿರುವಾಗ ಪ್ರಶ್ನೆ ಕೇಳೋದಾ? ಎಂದು ಪ್ರಿಯಾಂಕ್ ವಿರುದ್ಧ ಗುಡುಗಿದರು.

ಪ್ರಿಯಾಂಕ್ ಅವರ ಸೂಚನೆ ಮೇರೆಗೆ ಪೊಲೀಸರು ಚಲವಾದಿ ಅವರಿಗೆ ಕಿರುಕುಳ ಕೊಟ್ಟಿದ್ದಾರೆ. ತಮ್ಮ ಪುತ್ರ ಏನೆಲ್ಲಾ ತಪ್ಪುಗಳನ್ನು ಮಾಡುತ್ತಿದ್ದಾರೆ ಎಂಬುದನ್ನು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಸ್ವಲ್ಪ ಗಮನ ಹರಿಸಬೇಕು. ಈಗಲೂ ಕಾಲ ಮಿಂಚಿಲ್ಲ. ಸಚಿವ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆ ಪಡೆಯಬೇಕೆಂದು ತಾಕೀತು ಮಾಡಿದರು.

# ಅಧಿಕಾರ ಶಾಶ್ವತವಲ್ಲ

ಮಲ್ಲಿಕಾರ್ಜುನ ಖರ್ಗೆಯವರ ಸುಪುತ್ರ ಪ್ರಿಯಾಂಕ್ ಖರ್ಗೆಯವರು, ಇಂಥ ಕೀಳು ಮಟ್ಟಕ್ಕೆ ಇಳಿದರಲ್ಲವೇ ಎಂದು ಮರುಕ ಹುಟ್ಟಿದೆ ಎಂದು ವಿಶ್ಲೇಷಿಸಿದರು.ಎಸ್ಸೆಸ್ಸೆಲ್ಸಿ– ಮೊದಲ ಸ್ಥಾನಕ್ಕೆ ತಂದಿದ್ದರೆ.ಶಾಸಕರಾಗಿ, ಸಚಿವರಾಗಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಮಾಡಿದ್ದರೆ ಪ್ರಿಯಾಂಕ್ ಖರ್ಗೆಯವರನ್ನು ನಾನು ಮೆಚ್ಚಿಕೊಳ್ಳುತ್ತಿದ್ದೆ. ಈ ಭಾಗದ ಜನರೂ ಮೆಚ್ಚಿಕೊಳ್ಳುತ್ತಿದ್ದರು. ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಘೋಷಣೆ ಆದಾಗ ಗುಲ್ಬರ್ಗ ಜಿಲ್ಲೆಗೆ ಕೊನೆಯ ಸ್ಥಾನ ಲಭಿಸಿತ್ತು. ಕಲಬುರಗಿಯನ್ನು ಮೊದಲ ಸ್ಥಾನಕ್ಕೆ ತಂದಿದ್ದರೆ ಪ್ರಿಯಾಂಕ್ ಖರ್ಗೆಯವರ ಸುದೀರ್ಘ ಆಡಳಿತವನ್ನು, ತಾಕತ್ತನ್ನು ಮೆಚ್ಚಿಕೊಳ್ಳುತ್ತಿದ್ದೆ ಎಂದು ನುಡಿದರು.ಕಳೆದ 2 ವರ್ಷಗಳಲ್ಲಿ ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದ ಬಳಿಕ ಎಷ್ಟು ಸಾವಿರ ಕೋಟಿ ಅನುದಾನವನ್ನು ಜಿಲ್ಲೆಗೆ ತಂದಿದ್ದೀರಿ ಪ್ರಿಯಾಂಕ್ ಅವರೇ ಎಂದು ಕೇಳಿದರು. ಉತ್ತರ ಕೊಡಿ ನೀವು ಎಂದರು. ಕಾಂಗ್ರೆಸ್ ಸರಕಾರವು ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಕೆಲಸ ಮಾಡಿಲ್ಲ ಎಂದು ಟೀಕಿಸಿದ ಅವರು, ಇವತ್ತಿಗೂ 15 ಸಾವಿರ ಉಪನ್ಯಾಸಕರನ್ನು ಆಯ್ಕೆ ಮಾಡುವ ಯೋಗ್ಯತೆ ಕಾಂಗ್ರೆಸ್ಸಿನವರಿಗೆ ಇಲ್ಲಎಂದು ಆಕ್ಷೇಪಿಸಿದರು.ಬಾಬಾಸಾಹೇಬರ ಹೆಸರು ಹೇಳಿಕೊಂಡು ಬೇಳೆ ಬೇಯಿಸಿಕೊಳ್ಳುವವರು.ಛಲವಾದಿಯವರ ಮೇಲೆ ದಬ್ಬಾಳಿಕೆ ಮಾಡಿಸಿದ್ದೀರಲ್ಲವೇ? ಅವರು ಬಡ ಕುಟುಂಬದವರೆಂದು ದಬ್ಬಾಳಿಕೆ ಮಾಡಿದ್ದೀರಾ? ಬಿಜೆಪಿ,ಅಂಬೇಡ್ಕರರ ಹೆಸರು ಹೇಳಿಕೊಂಡು ರಾಜಕೀಯ ಮಾಡುತ್ತಿಲ್ಲ; ಬಾಬಾಸಾಹೇಬರ ಹೆಸರು ಹೇಳಿಕೊಂಡು ಬೇಳೆ ಬೇಯಿಸಿಕೊಳ್ಳುವವರು ಕಾಂಗ್ರೆಸ್ಸಿಗರೇ ಹೊರತು ಬಿಜೆಪಿಯವರಲ್ಲ ಎಂದು ಸ್ಪಷ್ಟಪಡಿಸಿದರು.ವೀರ ಯೋಧರ ನೈತಿಕ ಸ್ಥೈರ್ಯ ಅಪಮಾನಿಸುವ ಕೆಲಸಪೆಹಲ್ಗಾಂನಲ್ಲಿ ಉಗ್ರರು 26 ಭಾರತೀಯರ ಹತ್ಯೆ ಮಾಡಿದ್ದರು. ಬಿಗಿ ಕ್ರಮದ ಆಶಯ ಎಲ್ಲ ಭಾರತೀಯರದ್ದಾಗಿತ್ತು. ಆಗ, ಆಪರೇಷನ್ ಸಿಂದೂರದ ಮೂಲಕ ನಮ್ಮ ವೀರ ಯೋಧರು ವೈಮಾನಿಕ ದಾಳಿ ಮಾಡಿದ್ದಾರೆ. ಉಗ್ರರಅಡಗುತಾಣಗಳನ್ನು ಮಟ್ಟ ಹಾಕಿದ್ದಾರೆ. ಇಡೀ ದೇಶ, ಜಗತ್ತು ಆಶ್ಚರ್ಯ ಪಟ್ಟಿತು. ದೇಶ–ರಾಜ್ಯದ ಅಯೋಗ್ಯ ಕಾಂಗ್ರೆಸ್ಸಿಗರು ಪ್ರಶ್ನೆ ಮಾಡಿದರು. ವೀರ ಯೋಧರ ನೈತಿಕ ಸ್ಥೈರ್ಯವನ್ನು ಅಪಮಾನ ಮಾಡುವ ಕೆಲಸಮಾಡಿದ್ದಾರೆ ಎಂದು ಟೀಕಿಸಿದರು.ನಮ್ಮ ಪಾಕಿಸ್ತಾನದವರು ಎಂದಿದ್ದ ಮಲ್ಲಿಕಾರ್ಜುನ ಖರ್ಗೆಯವರನ್ನು ಪ್ರಶ್ನಿಸಿದ್ದಕ್ಕೆ ಈ ರೀತಿ ದಬ್ಬಾಳಿಕೆಯೇ ಎಂದು ಕೇಳಿದರು. ಆರ್ಟಿಕಲ್ 370ರಿಂದ ಕಾಶ್ಮೀರದಲ್ಲಿ ಸಾವಿರಾರು ಹಿಂದೂ ಕುಟುಂಬಗಳು ನಾಶ ಆಗಿವೆ. ಅದನ್ನು ಕಾಂಗ್ರೆಸ್ ರದ್ದು ಮಾಡಲಿಲ್ಲ. ಬಿಜೆಪಿ, ಈ ದೇಶದ ಹೆಮ್ಮೆಯ ಪ್ರಧಾನಿ ಮೋದಿಜೀ ಅವರ ದಿಟ್ಟ ನಾಯಕತ್ವದಲ್ಲಿ, ಉಕ್ಕಿನ ಮನುಷ್ಯ ಖ್ಯಾತಿಯ ಅಮಿತ್ ಶಾ ಅವರ ದಿಟ್ಟ ನಿರ್ಧಾರದಿಂದ ಆರ್ಟಿಕಲ್ 370 ಕಿತ್ತು ಹಾಕಲಾಗಿದೆ ಎಂದು ವಿವರಿಸಿದರು. ಇಂಥ ದಿಟ್ಟ ನಿರ್ಧಾರ ಮಾಡಿದ ಮೋದಿಜೀ ಅವರ ಕುರಿತು ಕಾಂಗ್ರೆಸ್ಸಿನವರು ಪ್ರಶ್ನಿಸುತ್ತಾರೆ ಎಂದು ಆಕ್ಷೇಪಿಸಿದರು.ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಬಿ.ಶ್ರೀರಾಮುಲು, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ಮಾಜಿ ಸಂಸದ ಮುನಿಸ್ವಾಮಿ, ಎಸ್.ಸಿ. ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಸಿಮೆಂಟ್ ಮಂಜುನಾಥ್, ಸ್ಥಳೀಯ ಶಾಸಕರು, ವಿಧಾನಪರಿಷತ್ ಸದಸ್ಯರು ಮತ್ತು ಪ್ರಮುಖರು ಉಪಸ್ಥಿತರಿದ್ದರು.

# ನಿರಾಟೆಯವರಿಗೆ ವಿವಿಧ ದಲಿತ ಸಂಘಟನೆಗಳ ಮುಖಂಡರಿಂದ ಸನ್ಮಾನ



ಬೀದರ. ಮೇ. 24 : ಇತ್ತೀಚೆಗೆ ಬೀದರ ಜಿಲ್ಲಾ ಕಾಂಗ್ರೇಸ್ ಪಕ್ಷದ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾ ಕಾರ್ಯದರ್ಶಿಯಾಗಿ ಶ್ರೀ ಚಂದ್ರಕಾಂತ ಆರ್. ನಿರಾಟೆ ಅವರನ್ನುನೇಮಕಮಾಡಲಾಗಿದೆ. ಕರ್ನಾಟಕ ಪ್ರದೇಶ ಕಾಂಗ್ರೇಸ್ ಸಮಿತಿ ರಾಜ್ಯ ಅಧ್ಯಕ್ಷರಾದ ಆರ್. ಧರ್ಮಸೇನಾ ಅವರ ಒಪ್ಪಿಗೆಯಂತೆ ಬೀದರ ಜಿಲ್ಲಾ ಕಾಂಗ್ರೇಸ್ ಸಮಿತಿ (ಪರಿಶಿಷ್ಟ ವಿಭಾಗದ) ಜಿಲ್ಲಾ ಅಧ್ಯಕ್ಷರಾದ ಸಂಜುಕುಮಾರ ಡಿ. ಕುರನಳ್ಳಿಕರ್ ಅವರ ಅನುಮೋದನೆ ಅನ್ವಯ ಶ್ರೀ ಚಂದ್ರಕಾಂತ ಆರ್. ನಿರಾಟೆ ಅವರನ್ನು ಕಾಂಗ್ರೇಸ್ ಕಮಿಟಿಯ ಪರಿಶಿಷ್ಟ ವಿಭಾಗದ ಬೀದರ ಜಿಲ್ಲಾ ಕಾರ್ಯದರ್ಶಿ ಎಂದು ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ. ಕಾಂಗ್ರೇಸ್ ಪಕ್ಷದ ತತ್ವ, ಸಿದ್ಧಾಂತ ಮತ್ತು ಶಿಸ್ತಿಗೆ ಒಳಪಟ್ಟು,ಕಾರ್ಯನಿರ್ವಹಿಸಲು ಸೂಚಿಸಲಾದ ಹಿನ್ನೆಲೆಯಲ್ಲಿ ವಿವಿಧ ದಲಿತ ಸಂಘಟನೆಗಳು ಹಾಗೂ ಕನ್ನಡಪರ ಸಂಘಟನೆಗಳ ಹಿರಿಯ ಮುಖಂಡರುಗಳಿಂದ ಬೀದರ ನಗರದ ಡಾ. ಬಿ.ಆರ್. ಅಂಬೇಡ್ಕರ ವೃತ್ತದ ಹತ್ತಿರದ ಅತಿಥಿ ಗೃಹದಲ್ಲಿ ಶ್ರೀ ನಿರಾಟೆ ಅವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಹಾಗೂ ಡಾ. ಬಿ.ಆರ್. ಅಂಬೇಡ್ಕರ ವೃತ್ತಕ್ಕೆ ತೆರಳಿ ಅಂಬೇಡ್ಕರ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಶ್ರೀ ನಿರಾಟೆಯವರು ಮಾತನಾಡಿ, ಸನ್ಮಾನ ಮಾಡಿದ ಎಲ್ಲಾ ದಲಿತ ಸಂಘಟನೆಗಳ ಮುಖಂಡರಿಗೂ ಹಾಗೂ ಕಾಂಗ್ರೇಸ್ ಪಕ್ಷದ ಹಿರಿಯ ಜನಪ್ರೀಯ ನಾಯಕರಾದ ಅರಣ್ಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಆದ ಸನ್ಮಾನ್ಯ ಶ್ರೀ ಈಶ್ವರ ಬಿ. ಖಂಡ್ರೆ ಅವರಿಗೂ, ಎಂ.ಪಿ. ಸಾಗರ ಖಂಡ್ರೆಯವರಿಗೂ, ಪೌರಾಡಳಿತ ಮತ್ತು ಹಜ್ ಸಚಿವರಾದ ಸನ್ಮಾನ್ಯ ಶ್ರೀ ರಹೀಂ ಖಾನ್ ಅವರಿಗೂ, ದಕ್ಷಿಣ ಕ್ಷೇತ್ರದ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಅವರಿಗೂ,ಎಸ್.ಸಿ.ಮೋರ್ಚಾ ರಾಜ್ಯಾಧ್ಯಕ್ಷರಾದ ಆರ್. ಧರ್ಮಸೇನಾ ಅವರಿಗೂ, ಡಿ.ಸಿ.ಸಿ. ಜಿಲ್ಲಾಧ್ಯಕ್ಷರಾದ

ಶ್ರೀ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಕಾರ್ಯದರ್ಶಿ ಶ್ರೀ ವಿನೋದ ಅಪ್ಪೆ ಹಾಗೂ ಎಸ್.ಸಿ. ಮೋರ್ಚಾದ ಜಿಲ್ಲಾಧ್ಯಕ್ಷರಾದ ಶ್ರೀ ಸಂಜುಕುಮಾರ ಡಿ. ಕುರನಳ್ಳಿಕರ್ ಹಾಗೂ ಪಕ್ಷದ ಎಲ್ಲಾ ಮುಖಂಡರಿಗೂ ಈ ಸಂದರ್ಭದಲ್ಲಿ ಅಭಿನಂದನೆಗಳನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ವಿವಿಧ ದಲಿತ ಸಂಘಟನೆಗಳ ಮುಖಂಡರುಗಳಾದ ಶ್ರೀ ರಾಜಕುಮಾರ ಮೂಲಭಾರತಿ, ರಾಜಕುಮಾರ ಗೂನಳ್ಳಿ,ನರಸಿಂಗ ಸಾಮ್ರಾಟ್, ರಾಘವೇಂದ್ರ ಮೀನಕೇರಾ, ಶಿವಕುಮಾರ ತುಂಗಾ, ಅಂಬೇಡ್ಕರ ಪಿ. ಬೌದ್ಧೆ, ಜಗನ್ನಾಥ ಹೊನ್ನಾ, ಪ್ರಭಾಕರ ಎಕಂಬೇಕರ್,ದಿಲಿಪ ವರ್ಮಾ,ನಾಗೇಶ ಜನವಾಡಾ, ಶಿವಕಾಂತ ಹಾವೆ, ರಮೇಶ ಗೌಡ ಮಂದಕನಳ್ಳಿ, ಕಂಟೆಪ್ಪಾ ಗುಮ್ಮೆ,ದಯಾನಂದ ನವಲೆ, ಬೀರುಸಿಂಗ್, ಶಿವಕುಮಾರ ಗೂನಳ್ಳಿ,ಬಸವರಾಜ ಭಾವಿದೊಡ್ಡಿ, ಝುರೆಪ್ಪಾ ರಾಂಪೂರೆ,ಲಕ್ಷ ??ಣ ಶೇರಿಕಾರ ಮುಂತಾದ ದಲಿತ ಮುಖಂಡರು ಉಪಸ್ಥಿತರಿದ್ದರು.

# ಹತ್ತು ದಿವಸಗಳ ಬೇಸಿಗೆ ಶಿಬಿರದ ಸಮಾರೋಪ



ಮಲ್ಲಮ್ಮ ನುಡಿ ವಾರ್ತೆ ಬೀದರ:ಮೇ.24:ಜಿಲ್ಲಾಡಳಿತ, ಬೀದರ, ಶಾಲಾ ಶಿಕ್ಷಣ ಇಲಾಖೆ,ಪ್ರಾದೇಶಿಕ ವಿಜ್ಞಾನ ಕೇಂದ್ರ ಬೀದರ ಹಾಗೂ ಅಗಸ್ತ್ಯ ಕೋರ್ ವಿಜ್ಞಾನ ಕೇಂದ್ರ ಬೀದರ ಆಶ್ರಯದಲ್ಲಿಂದು ಮೇ.15 ರಿಂದ 24 ರವರೆಗೆ ಹಮ್ಮಿಕೊಂಡಿದ್ದ 10 ದಿವಸಗಳ ಕಾಲ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಭಾಗವಹಿಸಿ ಶಿಬಿರದಲ್ಲಿ ಮಕ್ಕಳಿಂದ ಎಲ್ಲಾ ಚಟುವಟಿಕೆಗಳ ಬಗ್ಗೆ ಅವಲೋಕನ ಮಾಡಿದರು.

ಕೆಲವು ಮಕ್ಕಳು ಖುಷಿಯಿಂದ ಆನಂದವಾಗಿ ಕಳೆದೆವು ಎಂದು ತಿಳಿಸಿದರು ಮಕ್ಕಳಿಗೆ ಮೇಡಂ ಅವರು ಬೇಸಿಗೆಯಲ್ಲಿ ಪಠ್ಯ ವಿಷಯ ಹೊರತುಪಡಿಸಿ ಹೊಸದಾಗಿ ವೈಜ್ಞಾನಿಕ ಚಿಂತನೆ, ಹೊಸ ಹೊಸ ತಂತ್ರಜ್ಞಾನಗಳ ಕುರಿತು, ವಿಚಾರ ಹೊಂದಲು, ನಿತ್ಯ ಜೀವನದಲ್ಲಿ ಪ್ರಾಯೋಗಿಕವಾಗಿ ಸಿದ್ಧಾಂತಗಳನ್ನು ಅರಿತುಕೊಳ್ಳಲು ತಿಳಿಸಿದರು.

ಈ ಕಾರ್ಯಕ್ರಮವು ಏಳನೇ ತರಗತಿಯಿಂದ 10ನೇ ತರಗತಿ ವರೆಗಿನ 80 ವಿದ್ಯಾರ್ಥಿಗಳು ಈ ಬೇಸಿಗೆ ಶಿಬಿರದಲ್ಲಿ ಭಾಗಿಯಾಗಿದ್ದರು. ಈ ಬೇಸಿಗೆ ಶಿಬಿರದಲ್ಲಿ ಚಿತ್ರಕಲೆ, ನೃತ್ಯ, ಸಂಗೀತ ವಾದ್ಯ, ಹಿಂದುಸ್ತಾನಿ ಸಂಗೀತ, ರಾಕೆಟ್ ಉಡಾವಣೆ, ಖಗೋಳ ಶಾಸ್ತ್ರ ಚಟುವಟಿಕೆ ಮತ್ತು ಕೊಳಲು ವಾದ್ಯ ಹೀಗೆ ಹಲವಾರು ವಿಷಯಗಳನ್ನು ಕಲಿಸಿಕೊಡಲಾಯಿತು. ಇಲ್ಲಿನ ಕಲಿಕೆಯು ಅತ್ಯಂತ ಸರಳ ಮತ್ತು ವಿಶೇಷವಾಗಿರುವುದರ ಜೊತೆಗೆ ಸಂತೋಷಭರಿತವಾಗಿತ್ತು ಮತ್ತು ವಿದ್ಯಾರ್ಥಿಗಳು ಅತ್ಯಂತ ಸರಳ ರೀತಿಯಲ್ಲಿ ಈ ಬೇಸಿಗೆ ಶಿಬಿರದ ಕಾರ್ಯಕ್ರಮದಲ್ಲಿ ಸಂಭ್ರಮಿಸಿದರು.

ನೋಡಲ್ ಅಧಿಕಾರಿಗಳಾದ ಧನರಾಜ್ ಗುಡಮೆ (ಬಿ.ಆರ್.ಸಿ) ಬೀದರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳು 10 ದಿನದ ಬದಲಾಗಿ ಇನ್ನೂ ಹೆಚ್ಚು ದಿವಸಗಳ ಕಾರ್ಯಕ್ರಮ ಏರ್ಪಡಿಸಲು ಕೋರಿದರು. ಜಿಲ್ಲಾಧಿಕಾರಿಗಳು ಶಿಬಿರದ ಮಕ್ಕಳಿಗೆ ಪ್ರಶಸ್ತಿ ಪತ್ರವನ್ನು ನೀಡಿ ಸಂತೋಷದಿಂದ ಶುಭ ಹಾರೈಸಿದರು. ರಾಕೆಟ್ ಉಡಾವಣೆಯ ಕುರಿತು ಖಖಖ ಖಖಖಂಅ ಓಇಫಖಿಔಟ ರ ಮೂರು ನಿಯಮಗಳ ಬಗ್ಗೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸಂಪನ್ಮೂಲ ಶಿಕ್ಷಕರಾಗಿ ಸಾಯಿನಾಥ ಪ್ರಾದೇಶಿಕ ವಿಜ್ಞಾನ ಕೇಂದ್ರ ಬೀದರ, ಮಹೇಶ ಧುಪೆ, ವಿಶ್ವನಾಥ ಚಿತ್ರಕಲ್ಲಾ ಶಿಕ್ಷಕರು, ಹುಡುಗೆ ಗುಂಡಪ್ಪ ಹಾಗೂ ಅಗಸ್ತ್ಯ ವಿಜ್ಞಾನ ಕೇಂದ್ರದ ಸಿಬ್ಬಂಧಿಯವರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿರಿದ್ದರು.

# ವೈಭವದ ವಚನ ವಿಜಯೋತ್ಸವ ಪಥ ಸಂಚಲನ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 24 : ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವ ನಿಮಿತ್ತ ಲಿಂಗಾಯತ ಮಹಾ ಮಠದ ವತಿಯಿಂದ ನಗರದಲ್ಲಿ ಶನಿವಾರ ವಚನ ವಿಜಯೋತ್ಸವ ಪಥ ಸಂಚಲನ ವೈಭವದಿಂದ ನಡೆಯಿತು.

ಪಾಪನಾಶ ಗೇಟ್‌ನಿಂದ ಆರಂಭಗೊಂಡ ಪಥಸಂಚಲನವು ಪಾಪನಾಶ ದೇಗುಲದ ಮೂಲಕ ಹಾಯ್ದು ಬಸವಗಿರಿಗೆ ತಲುಪಿ ಸಮಾರೋಪಗೊಂಡಿತು.

ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಅವರ ನೇತೃತ್ವದಲ್ಲಿ ಸಹಸ್ರಾರು ಶರಣ–ಶರಣೆಯರು ತಲೆ ಮೇಲೆ ವಚನ ಸಾಹಿತ್ಯ ಹೊತ್ತು ಶ್ರದ್ಧೆ, ಭಕ್ತಿಯಿಂದ ಸಾಗಿದರು.

ಅಲಂಕೃತ 10 ಆಟೊಗಳ ಮೇಲೆ ಬಸವಣ್ಣ,ಅಕ್ಕಮಹಾದೇವಿ, ಅಕ್ಕ ಅನ್ನಪೂರ್ಣತಾಯಿ, ಮಡಿವಾಳ ಮಾಚಿದೇವ, ಅಲ್ಲಮಪ್ರಭು ದೇವರು, ಮೋಳಿಗೆ ಮಾರಯ್ಯ,ಹರಳಯ್ಯ, ಕಲ್ಯಾಣಮ್ಮ, ನೂಲಿಯ ಚಂದಯ್ಯ ಮೊದಲಾದವರ ಭಾವಚಿತ್ರಗಳನ್ನು ಇಡಲಾಗಿತ್ತು.

ಪ್ರಭುದೇವ ಸ್ವಾಮೀಜಿ ಸ್ವತಃ ತಲೆ ಮೇಲೆ ಲಿಂಗಾಯತ ಧರ್ಮಗ್ರಂಥ ಗುರುವಚನ ಹೊತ್ತು ಮುಂಚೂಣಿಯಲ್ಲಿ ಸಾಗಿದ್ದು ನೆರೆದವರ ಉತ್ಸಾಹ ಇಮ್ಮಡಿಗೊಳಿಸಿತು. ಷಟಸ್ಥಲ ಧ್ವಜಗಳು, ಛತ್ರಿ, ಚಾಮರಗಳು ಮೆರವಣಿಗೆ ಮೆರುಗು ಹೆಚ್ಚಿಸಿದವು. ವಿಶ್ವಗುರು ಬಸವಣ್ಣನವರಿಗೆ ಜಯವಾಗಲಿ, ಅಕ್ಕ ಅನ್ನಪೂರ್ಣತಾಯಿ ಅವರಿಗೆ ಜಯವಾಗಲಿ ಎಂಬ ಘೋಷಣೆಗಳು ಮೊಳಗಿದವು.

ಪಥಸಂಚಲನಕ್ಕೆ ಧಾರವಾಡದ ಡಾ. ಬಸವಾನಂದ ಸ್ವಾಮೀಜಿ ವಚನ ಓದಿಸುವ ಮೂಲಕ ಚಾಲನೆ ನೀಡಿದರು. ಪಥ ಸಂಚಲನವು ಹನ್ನೆರಡನೆಯ ಶತಮಾನದಲ್ಲಿ ವಚನ ಸಾಹಿತ್ಯ ರಕ್ಷಣೆಗೆ ಶರಣರು ಕಾಡಿನಲ್ಲಿ ಸಂಚರಿಸಿದಂತಹ ಅನುಭವ ನೀಡಿತ್ತು

# ನೆರೆಹಾವಳಿ, ಪ್ರವಾಹ ಎದುರಾದರೆ ತುರ್ತಾಗಿ ಪರಿಹಾರ ನೀಡಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.24-ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾದಾಗ ನೆರೆಹಾವಳಿ, ಪ್ರವಾಹ, ಹಾಗೂ ಮನೆಹಾನಿಯಾದ ಸಂದರ್ಭದಲ್ಲಿ ಅಧಿಕಾರಿಗಳು ತುರ್ತಾಗಿ ಪರಿಹಾರ ನೀಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಶುಕ್ರವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯಲ್ಲಿ 2025-26 ನೇ ಸಾಲಿನ ಪೂರ್ವ /ಮುಂಗಾರು ಮಳೆ ಅವಧಿಯ ಪೂರ್ವ ಸಿದ್ಧತೆ ಹಾಗೂ ಮುಂಜಾಗ್ರತೆ ಕ್ರಮಗಳು ಕೈಗೊಳ್ಳುವ ಬಗ್ಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಕೃತಿ ವಿಕೋಪಗಳು ಸಂಭಾವಿಸಿದ್ದ ಸಂದರ್ಭದಲ್ಲಿ ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್ ನವರು ತ್ವರಿತವಾಗಿ ಸಾರ್ವಜನಿಕರಕ್ಷಣೆಗಾಗಿ ಧಾವಿಸಬೇಕು ಎಂದರು.

ಭೀಮಾನದಿಯ ಉಜಯನಿ ಡ್ಯಾಂ ನಿಂದ ನೀರು ಬಿಟ್ಟಾಗಿ ಹೆಚ್ಚಿನ ಪ್ರಮಾಣ ಒಳಹರಿವು ಉಂಟಾಗುತ್ತದೆ ಅಧಿಕಾರಿಗಳು ಎಚ್ಚತ್ತುಗೊಂಡು ಕೆಲಸ ನಿರ್ವಹಿಸಬೇಕು ಪ್ರತಿದಿನ ನೀರಿನ ಪ್ರಮಾಣವನ್ನು ಚಕ್ ಮಾಡಿ ಏನೆ ತೊಂದರೆಗಳು ಇದ್ದರೆ ಅದನ್ನು ಸರಿಪಡಿಸಲು ಸೂಚನೆ ನೀಡಿದರು.

153 ಹಳ್ಳಿಗಳಿಗೆ ಸಮಸ್ಯೆಯಾಗುವ ಸಂಭವ ಇರುತ್ತದೆ ಇದಕ್ಕಾಗಿ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ತುರ್ತು ಅಗತ್ಯ ಸೇವೆಗಳ ಮಾಹಿತಿ ನೀಡಲು ಸಹಾಯವಾಣಿ ಸಂಖ್ಯೆಯನ್ನು ಪ್ರತಿಯೊಂದು ಗ್ರಾಮ ಪಂಚಾಯತಿಗೆ ನೀಡಬೇಕೆಂದು ಹೇಳಿದರು.

ಜಾಕ್‌ವೆಲ್‌ಗಳನ್ನು ಪರಿಶೀಲಿಸಬೇಕು ಹಾಗೂ ಕೆರೆ ನೀರಿನ ಏರು ಇಳಿತವನ್ನು ಪರೀಕ್ಷೆ ಮಾಡಬೇಕು ಯಾವುದೇ ಸಾರ್ವಜನಿಕರಿಗೆ ಹಾನಿಯಾಗದಂತೆ ಕ್ರಮಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಳೆಗಾಲ ಕಾರಣದಿಂದ ಭೀಮಾನದಿಯ ಒಳಹರಿವಿನ ಹೆಚ್ಚಳವಿರುವ ಕಾರಣದಿಂದ ಯಾವುದೇ ಅನಾಹುತ ಸಂಭವಿಸಿದಂತೆ ತಾಲೂಕಕ್ಕೆ ಒಬ್ಬ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಮತ್ತು ನಾಲ್ಕು ದಿನಗಳಲ್ಲಿ ತಾಲೂಕು ಟಾಸ್ಕಫೋರ್ಸ ಸಭೆಯನ್ನು ಮಾಡಿ ಮುಂದೆ ಸಂಭವಿಸಬಹುದಾದ ಅನಾಹುತಗಳ ಮುಂಜಾಗ್ರತ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿಗಳ ಕಚೇರಿಗೆ ಮಾಹಿತಿಯನ್ನು ನೀಡಬೇಕೆಂದರು

ಮಳೆಗಾಲದಲ್ಲಿ ನದಿ ತಟದಲ್ಲಿರುವ ಗ್ರಾಮಗಳಿಗೆ ವಿಶೇಷ ಗಮನಹರಿಸಬೇಕು ಸಾರ್ವಜನಿಕರಿಗೆ ಅರಿವು ಮೂಡಿಸಲು ಡಂಗುರ ಹಾಗೂ ಜಾಗೃತಿ ಮೂಡಿಸುವ ಕೆಲಸಗಳನ್ನು ಮಾಡಬೇಕು. ನೀರಿನ ಅಭಾವ ಆಗದಂತೆ ನೋಡಿಕೊಳ್ಳಬೇಕು ಎಂದರು.

ವಿಶೇಷವಾಗಿ ಮಳೆಗಾಲದಲ್ಲಿ ನೀರು ಕಲುಷಿತಗೊಳ್ಳುವುದರಿಂದ ಹಲವಾರು ಸಾಂಕ್ರಾಮಿಕರೋಗಗಳಾದ ಟೈಫಡ್, ಮಲೇರಿಯಾ ಡೆಂಗ್ಯೂ ಪ್ರಕರಣಗಳು ಹೆಚ್ಚಿನ ಸಂಕ್ರಾಮಿಕ ರೋಗಗಳು ಹರಡುವ ಸಂಭವಿರುವ ಕಾರಣದಿಂದ ಆರೋಗ್ಯ ಇಲಾಖೆ ಹೆಚ್ಚಿನ ಗಮನ ಹರಿಸಿ ಕ್ರಮಕೈಗೊಳ್ಳಬೇಕು. ಎಂದು ಜಿಲ್ಲಾ ಅರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಖ್ಯಾತನಾಳ ಅವರಿಗೆ ಸೂಚನೆ ನೀಡಿದರು.

ಡೆಂಗ್ಯೂ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡಲು ರೋಗಿಗಳಿಗೆ ಸಮಯಕ್ಕೆ ಸರಿಯಾದ ಚಿಕಿತ್ಸೆ ನೀಡಲು ಸರ್ಕಾರಿ ಆಸ್ಪತ್ರೆಗಳಲ್ಲಿ ಬೆಡ್‌ಗಳು ಕಾಯ್ದಿರಿಸಬೇಕು ಸಕಾಲಕ್ಕೆ ಚಿಕಿತ್ಸೆ ನೀಡಲು ಸೂಚಿಸಿದರು.

ರೈತರಿಗೆ ಮಳೆಗಾಲವಿರುವ ಕಾರಣದಿಂದ ಕೃಷಿ ಚಟುವಟಿಕೆ ಅಗತ್ಯವಿರುವ ಕಾರಣದಿಂದ ಬಿತ್ತನೆ ಬೇಕಾದ ಬೀಜ ರಸಗೊಬ್ಬರಗಳು ಕೃಷಿ ಉಪಕರಣಗಳು ಮತ್ತು ಕೀಟನಾಶಕಗಳನ್ನು ಪರಿಶೀಲಿಸಿ ಕ್ರಮಕೈಗೊಂಡು ರೈತರಿಗೆ ಸುಲಭ ದರದಲ್ಲಿ ಸಿಗುವಂತೆ ನೀಡಬೇಕೆಂದರು.

ಕಲಬುರಗಿ ಕೆಲವೊಂದು ವಾರ್ಡಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ವ್ಯತ್ಯಯ ಸಂಭವಿಸುತ್ತಿದ್ದು, ಸಾರ್ವಜನಿಕ ಸಹಾಯವಾಣಿಗೆ ಕಂಟ್ರೋಲ್ ರೂಂ ಸ್ಥಾಪಿಸಿ ಸಂಬಂಧಪಟ್ಟ ಅಧಿಕಾರಿಗಳು ಸಾರ್ವಜನಿಕರು ಸಹಾಯವಾಣಿಯ ಸಂಖ್ಯೆಯನ್ನು ನೀಡಿ ಸಾರ್ವಜನಿಕರ ಸಮಸ್ಯಗಳಿಗೆ ತಕ್ಷಣವಾಗಿ ಸ್ಪಂಧಿಸಬೇಕು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಜೂನ್ ತಿಂಗಳಲ್ಲಿ ಶಾಲಾ ಕಾಲೇಜುಗಳು ಆರಂಭವಾಗುವುದರಿಂದ ಹೆಚ್ಚಿನ ಮಳೆಯಾಗುವ ಸಂಭವ ಇರುವುದರಿಂದ ಇಲ್ಲವಾದಲ್ಲಿ ಪರ್ಯಾಯ ವ್ಯವಸ್ಥೆ ಮಾಡುವ ಮುಖಾಂತರ ಸಂಭವಿಸುವ ಅನಾಹುತಗಳನ್ನು ತಪ್ಪಿಸಬೇಕು. ಶಾಲಾ ಕಾಲೇಜ್ ಮೇಲ್ಛಾವಣೆ ಮತ್ತು ಅಂಗನವಾಡಿ ಕಟ್ಟಡಗಳ ಮೇಲ್ಛಾವಣೆ ಕುಸಿಯುವ ಸಂಭವ ಇರುವುದರಿಂದ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತೆ ಕ್ರಮವಾಗಿ ಕಟ್ಟಡಗಳ ಸ್ಥಳಾಂತರ ಮಾಡಲು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶ ಸೂರ್ಯಕಾಂತ ಮದಾನೆ ಅವರಿಗೆ ಸೂಚನೆ ನೀಡಿದರು.

ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ ಅವರನ್ನು ಶಾಲೆ ಕರೆತರಲು ಬಾಲಕಾರ್ಮಿಕ ಅಧಿಕಾರಿಯನ್ನು ಸೂಚನೆ ನೀಡಿದರು. ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ವಿದ್ಯಾರ್ಥಿಗಳನ್ನು ವಿದ್ಯಾರ್ಥಿಗಳಿಗೆ ಶಿಕ್ಷಣದ ಅರಿವನ್ನು ಮೂಡಿಸುವುದರ ಮುಖಾಂತರ ಶಾಲೆಗೆ ಬರುವಂತೆ ಎಲ್ಲಾ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಹೇಶ ಮೇಗಣ್ಣನವರ್ ಮತ್ತು ಕೃಷಿ ಇಲಾಖೆ ಜಂಟಿ ನಿರ್ದೇಶಕ ಸಮದ್ ಪಟೇಲ್, ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ವಾರ ದೌಲಾ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಸಂತೋಷ ಇನಾಂದಾರ, ಡಿ.ಹೆಚ್.ಓ. ಡಾ. ಶರಣಬಸಪ್ಪ ಖ್ಯಾತನಾಳ, ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಗಳು ಉಪಸ್ಥಿತರಿದ್ದರು.

# ಮೊಳಕೇರಾ ಗ್ರಾಮದಲ್ಲಿ ಸ್ಫೋಟಕ ಶಬ್ದ:ಭಯಭೀತಿಯಲ್ಲಿ ಗ್ರಾಮಸ್ಥರು



ಮೊಳಕೇರಾದಲ್ಲಿ ಸ್ಫೂಟ ಶಬ್ದವಾಗುತ್ತಿರುವುದು ಏನು ಎಂಬುವುದನ್ನು ಗ್ರಾಮಸ್ಥರಿಗೆ ಗೊತ್ತಾಗುತ್ತಿಲ್ಲ, ಊರಿನ ಗ್ರಾಮಸ್ಥರು ಎಲ್ಲಿಗೆ ಹೋಗಬೇಕು ಎಂದು ಚಿಂತೆಯಲ್ಲಿ ಕೂಳಿತುಕೊಳ್ಳುತ್ತಿದ್ದಾರೆ,
ಶೀಘ್ರವೇ ಸಂಬಂಧಪಟ್ಟ ಅಧಿಕಾರಿಗಳು ಸ್ಫೂಟಗೊಂಡ ಸ್ಥಳಕ್ಕೆ ಬೇಟಿ ನೀಡಿ ಪರಿಶೀಲಿಸಿ ಗ್ರಾಮಸ್ಥರ ನೆರವಿಗೆ ಬರಬೇಕು ಎಂದು ಪ್ರಭಾರಿ ತಹಸೀಲ್ದಾರರಿಗೆ ಮನವಿ ಪತ್ರ ಸಲ್ಲಿಸಿದ್ದೇವೆ.
-ಅರವಿಂದ ಜೋಗಿರೆ ಮೋಳಕೇರಾ
ವಿದ್ಯಾರ್ಥಿ ಘಟಕದ ತಾಲ್ಲೂಕು ಅಧ್ಯಕ್ಷ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಬೀದರ ಜಿಲ್ಲೆಯ ಹುಮನಾಬಾದ ತಾಲ್ಲೂಕಿನ ಮೊಳಕೇರಾ ಗ್ರಾಮದಲ್ಲಿ ಏಪ್ರೀಲ್.28 ರಂದು ಮೊಳಕೇರಾ ಗ್ರಾಮದ 04 ವರ್ಷದ ಬಾಲಕನ ಕಾಲಿನಲ್ಲಿ ಇದ್ದ ಚಪ್ಪಲಿಯಲ್ಲಿ ಇದ್ದಕ್ಕಿದ್ದಂತೆ ಸ್ಫೂಟಗೊಂಡು ಬಾಲಕನ ಕಾಲು ಗಂಭೀರವಾಗಿ ಚಿದ್ರ-ಚಿದ್ರವಾಗಿ ಅಲ್ಲಲ್ಲಿ ರಸ್ತೆಯ ಮೇಲೆ ಬಿದ್ದು ಗಾಯಗೊಂಡ ಘಟನೆ ಸಂಭವಿಸಿತ್ತು. ಆದರೆ ಆ ಸಮಯದಲ್ಲಿ ಮೊಳಕೇರಾ ಗ್ರಾಮದವರು ಏನೋ ಆಗಿರಬಹುದೆಂದು ಗಂಭೀರವಾಗಿ ಪರಿಗಣಿಸಿರುವುದಿಲ್ಲ, ಆದರೆ ಮತ್ತೆ ಮೇ.20 ರಂದು ಪುನಃ ಮೊಳಕೇರಾ ಗ್ರಾಮದ ಈ ಹಿಂದೆ ಸ್ಫೂಟಗೊಂಡ ಸ್ಥಳದ ಸ್ವಲ್ಪ ಮುಂಭಾಗದಲ್ಲಿ ಮತ್ತೆ ಭೂಮಿಯನ್ನು ಸ್ಫೂಟಗೊಂಡಿದೆ ಎಂದು ಮೊಳಕೇರಾ ಗ್ರಾಮಸ್ಥರು ಅಂಜಿಕೊಂಡು ಗಾಬರಿಯಾಗಿ ಭಯಪಟ್ಟಿದ್ದಾರೆ. ಹೀಗಾಗಿ ಮತ್ತೆ ಸ್ಫೂಟ ಶಬ್ದಗೊಳ್ಳುತ್ತದೆ ಎಂಬ ಭಯ ಗ್ರಾಮಸ್ಥರದಾಗಿದೆ. ಆದ್ದರಿಂದ ಗ್ರಾಮದ ಜನರು ನಮಗೇನಾದರೂ ಆಗಬಹುದು ಎಂದು ಭಯಪಟ್ಟಿ ಸಂಬಂಧಿಕರ ಮನೆಗೆ ತೆರಳುತ್ತಿದ್ದಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಮೊಳಕೇರಾ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿ ಗ್ರಾಮಸ್ಥರ ನೆರವಿಗೆ ಬರಬೇಕೆಂದು ಪ್ರಭಾರಿ ತಹಸೀಲ್ದಾರ್ ರವರಿಗೆ ಗ್ರಾಮದ ಮಾಜಿ ಗ್ರಾ.ಪಂ. ಸದಸ್ಯ ಮಹಾದೇವ, ವಿದ್ಯಾರ್ಥಿ ಘಟಕದ ತಾಲ್ಲೂಕಾಧ್ಯಕ್ಷ ಅರವಿಂದ ಜೋಗಿರೆ, ಮಲ್ಲಿಕಾರ್ಜುನ ಹುಮನಾಬಾದೆ, ಮಾಜಿ ಗ್ರಾ.ಪಂ. ಉಪಾಧ್ಯಕ್ಷ ಸಾಯಿಕಿರಣ ಬಯನೋರ, ಶಿವಕುಮಾರ ಶಿಂಧೆ, ಅನೀಶ ಬಿರಾದಾರ, ಕರಣ ಪಾಂಡು, ಗ್ರಾ.ಪಂ. ಸದಸ್ಯ ರವಿ ಆರ್ಯ, ಸುನೀಲ ಆರ್ಯ ಇವರುಗಳು ಮನವಿ ಪತ್ರದಲ್ಲಿ ವಿನಂತಿಸಿದ್ದಾರೆ.



ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಮತ್ತು ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ಎಪಿಎಂಸಿ ಆವರಣದಲ್ಲಿ ಶನಿವಾರ ಏರ್ಪಡಿಸಿದ್ದ ಉಚಿತ ಹೃದಯ ತಪಾಸಣಾ ಶಿಬಿರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಬಸವಕಲ್ಯಾಣ :- ಆಪರೇಷನ್ ಸಿಂದೂರ ಕಾರ್ಯಾಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ನಗರದಲ್ಲಿ ಜರುಗಿದ ಬೃಹತ್ ತಿರಂಗಾ ಯಾತ್ರೆಗೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಹಿರನಾಗಾಂವ ಪೂಜ್ಯ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಜಿ. ಮುಚಳಂಬದ ಪೂಜ್ಯ ಶ್ರೀ ಪ್ರಣವಾನಂದ ಮಹಾಸ್ವಾಮಿಗಳು. ತಿಪುರಾಂತಿನ ಪೂಜ್ಯ ಶ್ರೀ ಅಭಿನವಘನಲಿಂಗ ರುದ್ರಮುನಿ ಶಿವಾಚಾರ್ಯರು. ಪೂಜ್ಯರು ಸೇರಿದಂತೆ ಶಾಸಕರಾದ ಶರಣು ಸಲಗರ ಮತ್ತು ನಾಗರಿಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆಗೆ ಮರ-ಗಿಡ ಬೆಳೆಸಿ:- ಹುಸಾಮುದ್ದೀನ್




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮಹಿಳೆಯರು ಕಡ್ಡಾಯವಾಗಿ ಮರ ಗಿಡಗಳು ಬೆಳೆಸಿ ಪರಿಸರ ಸಂರಕ್ಷಣೆಗೆ ಸಹಾಯ ಮಾಡಬೇಕೆಂದು ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಪಟ್ಟಣದ ಭಾಸ್ಕರ್ ನಗರದಲ್ಲಿ ಅಮೃತ ಮಿತ್ರ ಯೋಜನೆ ಅಡ್ಡಿಯಲ್ಲಿ ಪುರಸಭೆ ಸ್ವ ಸಹಾಯ ಸಂಘದ ಮಹಿಳೆಯರಿಂದ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ರೋಜಮ್ಮಾ, ಸದಸ್ಯೆ ಶೋಭಾ ಕುಂಬಾರ್, ಯೋಜನೆಯ ನೋಡಲ್ ಅಧಿಕಾರಿ ರಾಮಚಂದ್ರ ಚಾವರೆ, ಸಿ.ಆರ್.ಪಿ. ಅಶ್ವಿನಿ ರಾಜಕುಮಾರ, ಮಂಜುಳಾ ವಿನೋದ್ ಸೇರಿದಂತೆ ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು. ಸ್ವ ಸಹಾಯ ಸಂಘದ ಸದಸ್ಯರಿಗೆ ಕಿಟ್ ಸಾಮಗ್ರಿಗಳು ನೀಡಿದರು.

**ಕೆ.ಆರ್.ನಗರ ವಿಧಾನಸಭಾ ವ್ಯಾಪ್ತಿಯಲ್ಲಿ 513 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳಿಗೆ ಮುಖ್ಯಮಂತ್ರಿಗಳಿಂದ ಉದ್ಘಾಟನೆ ಮತ್ತು ಶಂಕುಸ್ಥಾಪನೆ**

# ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನರೇ ಮಾಲೀಕರು ಮುಖ್ಯಮಂತ್ರಿ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಕೆ.ಆರ್.ನಗರ /ಬೆಂಗಳೂರು,ಮೇ 24-ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನರೇ ಮಾಲೀಕರು. ಕ್ಷೇತ್ರಗಳ ಅಭಿವೃದ್ಧಿ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದು ಸರ್ಕಾರದ ಹಾಗೂ ಶಾಸಕರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಕೆ.ಆರ್. ನಗರ ವಿಧಾನಸಭಾ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಕೆ.ಆರ್. ನಗರ ವಿಧಾನಸಭಾ ಕ್ಷೇತ್ರಕ್ಕೆ 404 ಕೋಟಿ ರೂ.ಗಳ ಶಂಕುಸ್ಥಾಪನೆ, 109 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಸೇರಿ ಒಟ್ಟು 513 ಕೋಟಿ ರೂ. ಗಳ ವೆಚ್ಚದ ಕಾಮಗಾರಿಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿದ್ದು, ಇದಕ್ಕೆ ಸ್ಥಳೀಯ ಶಾಸಕರಾದ ರವಿಶಂಕರ್ ಕಾರಣ ಎಂದು ತಿಳಿಸಿದರು.

ಸಣ್ಣ ನೀರಾವರಿ ಸಚಿವರು 197 ಕೋಟಿ ರೂ.ಗಳ ವೆಚ್ಚದ ಶಂಕುಸ್ಥಾಪನೆ ಮತ್ತು ಉದ್ಘಾಟನೆಯನ್ನು ತಮ್ಮ ಇಲಾಖೆಯೊಂದರಲ್ಲಿಯೇ ಮಾಡಿದ್ದಾರೆ. ಆರೋಗ್ಯ ಇಲಾಖೆಯಡಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟನೆ ನೆರವೇರಿದೆ ಎಂದರು.

ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದರಿಂದ ಅಭಿವೃದ್ಧಿ ಕಾರ್ಯಗಳಿಗೆ ಈ ಸರ್ಕಾರದ ಬಳಿ ಹಣವಿಲ್ಲ ಎಂದು ವಿರೋಧ ಪಕ್ಷದವರು ಟೀಕಿಸುತ್ತಾರೆ. ಹಣ ಇಲ್ಲದಿದ್ದರೆ ಸರ್ಕಾರವು 513 ಕೋಟಿ ರೂ.ಗಳ ಕಾಮಗಾರಿಗಳನ್ನು ಇಲ್ಲಿ ಕೈಗೊಳ್ಳಲು ಸಾಧ್ಯವಾಗುತ್ತಿತ್ತೇ ಎಂದು ಪ್ರಶ್ನಿಸಿದರು.

ಪಂಚಗ್ಯಾರಂಟಿಯೋಜನೆಗಳನ್ನು ನಮ್ಮ ಸರ್ಕಾರ ಜಾರಿ ಮಾಡಿದೆ. ಜನರು ಈ ಯೋಜನೆಗಳ ಸದ ುಪಯೋಗಪಡಿಸಿಕೊಳ್ಳುತ್ತಿರುವ ಾಗ ಸುಳ್ಳು ಎಂದು ವಿರೋಧ ಪಕ್ಷದವರು ಹೇಗೆ ಹೇಳುತ್ತಾರೆ ಎಂದರು.

ರಾಜ್ಯದ 3.50 ಕೋಟಿ ಮಹಿಳೆಯರು ಯಾವುದೇ ಬೇಧ ಭಾವವಿಲ್ಲದೇ ಶಕ್ತಿಯೋಜನೆಯನ್ನು ಬಳಸಿಕೊಂಡಿದ್ದಾರೆ. ಈವರೆಗೆ 500 ಕೋಟಿ ಮಹಿಳೆಯರು ಉಚಿತವಾಗಿ ಓಡಾಡಿದ್ದಾರೆ. ಪ್ರತಿ ದಿನ 50-60 ಲಕ್ಷ ಮಹಿಳೆಯರು ಇದರ ಪ್ರಯೋಜನ ಪಡೆ-ಯುತ್ತಿದ್ದಾರೆ ಎಂದರು.

ಜಿಎಸ್ ಟಿ ಸಂಗ್ರಹಣೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷ ನಾವು ಮೊದಲ ಸ್ಥಾನಕ್ಕೆ ಬರುವ ಪ್ರಯತ್ನ ಮಾಡುತ್ತೇವೆ ಎಂದ ಮುಖ್ಯಮಂತ್ರಿಗಳು, ಕಬಿನಿ ಸೇತುವೆಗೆ 25 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯನ್ನು 40 ವರ್ಷಗಳ ಅವಧಿಗೆ ಗುತ್ತಿಗೆ ನೀಡಲಾಗಿದೆ. ಸಾಗರಕಟ್ಟೆ ಸೇತುವೆ, ರಸ್ತೆ ಅಗಲೀಕರಣ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆ. ಎಲ್ಲರೂ ಒಂದೇ ತಾಯಿಯ ಮಕ್ಕಳಂತೆ ಇರಬೇಕೆಂಬುದು ಸರ್ಕಾರದ ಆಶಯ ಎಂದರು.

ಶಕ್ತಿಯೋಜನೆಯಿಂದ ಧರ್ಮಸ್ಥಳ ಕ್ಷೇತ್ರಕ್ಕೆ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿರುವುದನ್ನು ಪ್ರಶಂಸಿಸಿ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಪತ್ರ ಬರೆದಿದ್ದರು. ಗ್ಯಾರಂಟಿ ಯೋಜನೆಗಳು ಜನರ ಮೆಚ್ಚುಗೆಗೆ ಪಾತ್ರವಾಗಿದೆ.

ಇತ್ತೀಚೆಗೆ ಹೊಸಪೇಟೆಯಲ್ಲಿ ನಡೆದ ಸರ್ಕಾರದ ಎರಡು ವರ್ಷದ ಕಾರ್ಯಕ್ರಮ ಯಶಸ್ವಿಯಾಗಿ ನಡೆದು, ಸುಮಾರು 3 ರಿಂದ 4 ಲಕ್ಷ ಜನ ಆಗಮಿಸಿದ್ದರು. ಆದರೆ ವಿರೋಧ ಪಕ್ಷದವರು ಜನಾಕ್ರೋಶ ಕಾರ್ಯಕ್ರಮ ಮಾಡಿ, ಅಭಿವೃದ್ಧಿ ನಡೆಯುತ್ತಿಲ್ಲ, ಬೆಲೆ ಏರಿಕೆಯಾಗಿದೆ ಎಂಬ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ವಿರೋಧ ಪಕ್ಷದವರು ತಮ್ಮ ಅಧಿಕಾರಾವಧಿಯಲ್ಲಿ ಯಾವ ಕೆಲಸವನ್ನೂ ಮಾಡದೇ, ನಮ್ಮ ಸರ್ಕಾರದ ಯಶಸ್ಸಿಗೆ ಮರುಗುತ್ತಿದ್ದಾರೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಶಕ್ತಿ ಯೋಜನೆ, ನಂತರ ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಗೃಹಲಕ್ಷ್ಮಿ ಯೋಜನೆಗಳನ್ನು ಜಾರಿಗೆ ತರಲಾಯಿತು. ತದನಂತರ ಜನವರಿ 2024 ರಲ್ಲಿ ಯುವನಿಧಿಯನ್ನು ಜಾರಿಗೊಳಿಸಲಾಗಿದ್ದು, ಇದಕ್ಕಾಗಿ 52000 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ ಎಂದರು.

ನುಡಿದಂತೆ ನಡೆದ ಸರ್ಕಾರದ ಮೇಲೆ ಜನರ ವಿಶ್ವಾಸ:

ಇದುವರೆಗೆ ಗ್ಯಾರಂಟಿಗಳಿಗೆ 90 ಸಾವಿರ ಕೋಟಿ ರೂ.ಗಳು ವೆಚ್ಚವಾಗಿದೆ. 60 ಸಾವಿರ ಕೋಟಿ ರೂ.ಗಳಿಗೆ ವಿವಿಧ ಪಿಂಚಣಿಗಳು, 7 ನೇ ವೇತನ ಆಯೋಗ, ವಿದ್ಯುತ್ ಸಬ್ಸಿಡಿ ಸೇರಿದಂತೆ ವಿವಿಧ ಜನೋಪಯೋಗಿ ಯೋಜನೆಗಳಿಗೆ ಒಟ್ಟು 1.12 ಲಕ್ಷ ಕೋಟಿಗಳನ್ನು ವೆಚ್ಚಮಾಡಲಾಗಿದೆ. ರೂ.2.06 ಲಕ್ಷ ಕೋಟಿಗಳ ಸವಲತ್ತುಗಳನ್ನು ಕೃಷಿಯ ವಿವಿಧ ಯೋಜನೆಗಳಿಗೆ ನೀಡಲಾಗಿದೆ. ಮೈಸೂರು ಭಾಗದ ಕೃಷಿಕರು ಕೃಷಿಯನ್ನು ವೈಜ್ಞಾನಿಕವಾಗಿ ಮಾಡಬೇಕು. ಉತ್ತಮ ಯಂತ್ರೋಪಕರಣ, ಬೀಜ ಗೊಬ್ಬರ ನೀಡಲಾಗುತ್ತಿದೆ. ರೈತರು ಯಂತ್ರೋಪಕರಣ ಬಳಸಿ, ಉತ್ತಮ ರೀತಿಯಲ್ಲಿ ಬೆಳೆ ಬೆಳೆಯಬೇಕು. ಜನಾಕ್ರೋಶ ಕೇವಲ ರಾಜಕೀಯವಾಗಿಯೇ ಹೊರತು, ಜನರಲ್ಲಿ ಆಕ್ರೋಶ ಇಲ್ಲ. ನುಡಿದಂತೆ ನಡೆಯುವ ನಮ್ಮ ಸರ್ಕಾರದ ಮೇಲೆ ಜನರು ತಮ್ಮ ವಿಶ್ವಾಸವನ್ನು ತೋರಿದ್ದಾರೆ ಎಂದರು.

ಹಿಂದೆ ನಮ್ಮ ಸರ್ಕಾರ ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದೇವೆ. ಪ್ರಸ್ತುತ ನಮ್ಮ ಸರ್ಕಾರ 593 ಕಾರ್ಯಕ್ರಮಗಳನ್ನು ಪ್ರಣಾಳಿಕೆಯಲ್ಲಿ ತಿಳಿಸಿದ್ದು, 242 ಭರವಸೆಗಳನ್ನು ಈಡೇರಿಸಿದ್ದೇವೆ. ನಮ್ಮ ಸರ್ಕಾರ ಇನ್ನುಳಿದ ವರ್ಷಗಳಲ್ಲಿ ಉಳಿದ ಎಲ್ಲ ಭರವಸೆಗಳನ್ನೂ ಈಡೇರಿಸಲಿದೆ ಎಂದರು.

ಕೆ.ಆರ್.ನಗರದ ಶಾಸಕರು ಪ್ರಾಮಾಣಿಕರಾಗಿದ್ದು, ಕ್ಷೇತ್ರದ ಒಳಿತಿಗೆ ಶ್ರಮಿಸುತ್ತಿದ್ದಾರೆ. ಅವರನ್ನು ಮುಂದಿನ ಚುನಾವಣೆಯಲ್ಲಿ ಬೆಂಬಲಿಸಿ ಎಂದು ಜನರಲ್ಲಿ ಮುಖ್ಯಮಂತ್ರಿಗಳು ಮನವಿ ಮಾಡಿದರು. ಹಾಲಿನ ದರ ಏರಿಕೆಯಾಗಿದ್ದು, ಹೆಚ್ಚಿನ ಮೊತ್ತ ರೈತರಿಗೆ ತಲುಪುತ್ತಿದೆಯೇ ಹೊರತು, ಸರ್ಕಾರದ ಬೊಕ್ಕಸಕ್ಕೆ ಬರುತ್ತಿಲ್ಲ. ನೆರೆರಾಜ್ಯಗಳಿಗೆ ಹೋಲಿಸಿದರೆ, ಕರ್ನಾಟಕದಲ್ಲಿ ಹಾಲಿನ ದರ ಕಡಿಮೆಯಿದೆ. ವಿರೋಧ ಪಕ್ಷದವರು ಕೇಂದ್ರದಲ್ಲಿ ಹೆಚ್ಚಿಸಿರುವ ದರಗಳ ಬಗ್ಗೆ ಮಾತನಾಡುವುದಿಲ್ಲ. ಡೀಸೆಲ್ ಬೆಲೆ ಹಿಂದೆ ಇದ್ದ 46 ರೂ. ಇದ್ದ ಬೆಲೆ, ಈಗ 91 ರೂ. ಗಳಿಗೆ ಹೆಚ್ಚಳವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಉಸ್ತುವಾರಿ ಸಚಿವ ಡಾ: ಹೆಚ್.ಸಿ ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ದಿನೇಶ್ ಗುಂಡೂರಾವ್, ಬೋಸರಾಜು, ಬೈರತಿ ಸುರೇಶ್, ಶಾಸಕರಾದ ರವಿಶಂಕರ್, ವಿಧಾನ ಪರಿಷತ್ ಸದಸ್ಯ ಡಾ: ತಿಮ್ಮಯ್ಯ, ಕೆ.ಆರ್.ನಗರ ಪುರಸಭೆ ಅಧ್ಯಕ್ಷ ಶಿವಕುಮಾರ್ ಮೊದಲಾದವರು ಉಪಸ್ಥಿತರಿದ್ದರು.

# ಇ-ಮೇಲ್ ಮೂಲಕ ಕಳುಹಿಸಿದ ಲಿಂಕ್ ಕ್ಲಿಕ್ ಮಾಡಿದಕ್ಕೆ 1.80 ಲಕ್ಷ ರೂ.ಗಾಯಬ್ !

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.24-ಇ-ಮೇಲ್ ಮೂಲಕ ಕಳುಹಿಸಿದ ಲಿಂಕ್ ಮೇಲೆ ಕ್ಲಿಕ್ ಮಾಡಿದ ಪರಿಣಾಮ ವಿದ್ಯಾರ್ಥಿಯೊಬ್ಬನ ವಿವಿಧ ಬ್ಯಾಂಕ್ ಗಳ ಕ್ರೆಡಿಟ್ ಕಾರ್ಡ್‌ಗಳಿಂದ 1,80,943 ರೂ.ಗಾಯಬಾಗಿವೆ. ನಗರದ ಎನ್‌ಜಿಓ ಕಾಲೋನಿಯ ಮಾಕಾ ಲೇಔಟ್‌ನ ವಿಶಾಲ ತಂದೆ ಅನೀಲ ಪವಾರ್ (27) ಎಂಬ ವಿದ್ಯಾರ್ಥಿಯೇ ಹಣ ಕಳೆದುಕೊಂಡಿದ್ದಾನೆ.

ಇ-ಮೇಲ್ ಮೂಲಕ ಕಳುಹಿಸಿದ ಲಿಂಕ್ ಮೇಲೆ ಕ್ಲಿಕ್ ಮಾಡಿದ ಪರಿಣಾಮ ಮೂರು ಬ್ಯಾಂಕ್ ಗಳ ಕ್ರೆಡಿಟ್ ಕಾರ್ಡ್‌ಗಳಿಂದ 1.80 ಲಕ್ಷ ಬಳಸಿಕೊಂಡು ವಂಚನೆ ಮಾಡಲಾಗಿದೆ ಎಂದು ವಿಶಾಲ ದೂರಿನಲ್ಲಿ ತಿಳಿಸಿದ್ದಾನೆ. ಈ ಸಂಬಂಧ ಸಿಇಎನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಪರಮೇಶ್ವರ ರಾಜಕೀಯ ಉನ್ನತಿ ಸಹಿಸದ ಬಿಜೆಪಿಯಿಂದ ಕುತಂತ್ರದ ಇ.ಡಿ. ದಾಳಿ : ಲೋಕೇಶ್ ಮಂಗಲಗಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 24 : ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಶೈಕ್ಷಣಿಕ ಸಂಸ್ಥೆಗಳ ಮೇಲೆ ಕೇಂದ್ರ ಸರ್ಕಾರ ರಾಜಕೀಯ ಪ್ರೇರಿತ ಇ.ಡಿ.ದಾಳಿ ನಡೆಸಿರುವುದು ಖಂಡನೀಯ ಎಂದು ಕೆಪಿಸಿಸಿ ಪ. ಜಾತಿ ವಿಭಾಗದ ಜಿಲ್ಲಾ ಮಾಧ್ಯಮ ವಕ್ತರರು ಲೋಕೇಶ ಮಂಗಲಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿ. ಪರಮೇಶ್ವರ್ ಅವರ ರಾಜಕೀಯ ಉನ್ನತಿ ಸಹಿಸದ ಕೇಂದ್ರ ಸರ್ಕಾರ ಶೈಕ್ಷಣಿಕ ಸಂಸ್ಥೆಗಳ ಮೇಲೆ ರಾಜಕೀಯ ದುರುದ್ದೇಶದಿಂದ ಅಗತ್ಯವಾಗಿ ಇ. ಡಿ. ದಾಳಿ ನಡೆಸಿದ್ದು. ಕೇಂದ್ರ ಸರ್ಕಾರ ಜಾರಿ ನಿರ್ದೇಶನಾಲಯುವನ್ನು ದುರುಪಯೋಗಪಡಿಸಿಕೊಳ್ಳುತಿದೆ ಎಂದು ಪತ್ರಿಕೆ ಹೇಳಿಕೆಯಲ್ಲಿ ದೂರಿದ್ದಾರೆ.

ಕಳೆದ ಐವತ್ತು ವರ್ಷಗಳಿಂದ ವಿದ್ಯಾರ್ಥಿಯು ವಸತಿ ನಿಲಯ ಮೆಡಿಕಲ್. ಇಂಜಿನಿಯರಿಂಗ್. ಡೆಂಟಲ್ ನರ್ಸಿಂಗ್. ಪಾಲಿಟೆಕ್ನಿಕ್ ಕಾಲೇಜು ಆರಂಭಿಸಿ ಲಕ್ಷಾಂತರ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಶ್ರಮಿಸುತ್ತಿದ್ದಾರೆ. ಅನೇಕ ಬಡ ವಿದ್ಯಾರ್ಥಿಗಳ ಜೀವನಕ್ಕೂ ಭದ್ರಬುನಾದಿ ಹಾಕಿದ್ದಾರೆ ಎಂಬುದು ಕೇಂದ್ರಸರ್ಕಾರ-ಕ್ಕೆ ಗೊತ್ತಿದ್ರು ದುರುದ್ದೇಶದದಾಳಿ ನಡೆಸಿರುವುದು ಅತ್ಯಂತ ಖಂಡನೀಯ



ಈಗಾಗಲೇ ಸುಪ್ರೀಂ ಕೋರ್ಟ್ ಕೂಡ ಜಾರಿ ನಿರ್ದೇಶನಾಲಯ ವಿಕಿ ಮೀರಿ ನಡೆದುಕೊಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ. ಎಂದರೆ ಜಾರಿ ನಿರ್ದೇಶನಾಲಯ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂಬುದು ಸ್ಪಷ್ಟವಾಗುತ್ತಿದೆ. ಪರಮೇಶ್ವರ ಅವರು ರಾಜ್ಯದ ದಲಿತ ಸಮುದಾಯದ ಪ್ರಭಾವಿ ನಾಯಕರು. ಸಿಎಂ ರೇಸಿನಲ್ಲಿರುವ ಪ್ರಮುಖರಾಗಿದ್ದಾರೆ. ಅವರ ಒಡತನದ ಶೈಕ್ಷಣಿಕ ಸಂಸ್ಥೆಗಳ ಮೇಲೆ ದಾಳಿ ನಡೆಸಲಾಗುತ್ತದೆ.

ಪರಮೇಶ್ವರ ಅವರು ದಲಿತ ಎಂಬ ಕಾರಣಕ್ಕೆ ಈ ದಾಳಿ ನಡೆದಿದ್ದು. ಅವರನ್ನು ರಾಜಕೀಯವಾಗಿ ಹಣೆಯಬೇಕೆಂಬ ದುರುದೇಶದಿಂದ ಕೇಂದ್ರಸರ್ಕಾರದ ಕುತಂತ್ರದ ರಾಜಕಾರಣ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದು. ಅವರು ಪರಮೇಶ್ವರ ಅವರ ಬೆನ್ನಿಗೆ ನಿಂತಿದ್ದಾರೆ ಕೂಡಲೇ ಈ ಅಕ್ರಮ ದಾಳಿಯನ್ನು ನಿಲ್ಲಿಸಬೇಕು.

ಇಲ್ಲದಿದ್ದರೆ ಕೇಂದ್ರಸರ್ಕಾರದ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳುವದಾಗಿ ಜಿಲ್ಲಾ ವಕ್ತಾರರು ಎಸ್. ಸಿ(ವಿಭಾಗ) ಕಾಂಗ್ರೆಸ್ ಸಮಿತಿ ಬೀದರ ಲೋಕೇಶ್ ಮಂಗಲಗಿ ಎಚ್ಚರಿಸಿದ್ದಾರೆ.

# ವಿನಯ ಮಾಳಗೆಗೆ ಡಾ.ಲಕ್ಷ್ಮಣ ದಸ್ತಿ ಸನ್ಮಾನ



ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 24 : ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯೀ ಸಮಿತಿಯ ಸದಸ್ಯರನ್ನಾಗಿ ಬೀದರ ಜಿಲ್ಲೆಯ ಇಂಜಿನಿಯರಿಂಗ್ ಪದವೀಧರರು ಮತ್ತು ಕರೇಜ್ ವಿಷಯಕ್ಕೆ ಸಂಬಂಧಿಸಿ ವಿಶೇಷ ಅಧ್ಯಯನ ನಡೆಸಿರುವ ಸಾಮಾಜಿಕ ಕಳಕಳಿಯ ಕ್ರೀಯಾ ಶೀಲ ಪರಿಣಿತರಾದ ಶ್ರೀ ವಿನಯ ಕುಮಾರ್ ಮಾಳ್ಗೆಯವರಿಗೆ ಕರ್ನಾಟಕ ಸರ್ಕಾರ ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಿರುವುದಕ್ಕೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ. ಲಕ್ಷ್ಮಣ ದಸ್ತಿ ಯವರು ಹರ್ಷ ವ್ಯಕ್ತಪಡಿಸಿದ್ದಾರೆ. ಶ್ರೀ ಮಾಳ್ಗೆಯವರು ಕರ್ನಾಟಕ ರಾಜ್ಯದಲ್ಲಿ ಅರಣ್ಯ ಕ್ಷೇತ್ರದಲ್ಲಿ ಅತ್ಯಂತ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಅರಣ್ಯ ಅಭಿವೃದ್ಧಿಗೆ ವಿಶೇಷ ಕ್ರೀಯಾ ಯೋಜನೆ ರೂಪಿಸಿ ಸರ್ಕಾರದ ಗಮನಕ್ಕೆ ತಂದು ಕಲ್ಯಾಣದಲ್ಲಿ ಅರಣ್ಯ ಅಭಿವೃದ್ಧಿಗೆ ಶ್ರಮಿಸಲು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಆಶಯ ವ್ಯಕ್ತಪಡಿಸಿದೆ. ನಾಮನಿರ್ದೇಶನಗೊಂಡಿರುವ ಶ್ರೀ ವಿನಯ್ ಕುಮಾರ್ ಮಾಳಗೆ ಅವರನ್ನು ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ ದಸ್ತಿವರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಮತ್ತು ಪ್ರಮುಖರಾದ ಚಂದ್ರಶೇಖರ್ ಪಾಟೀಲ್ ಹುಚ್ಚಕನ್ನಳ್ಳಿ, ರೋಹನ್ ಕುಮಾರ, ಶ್ರೀಧರ ಸೋಮನೋರ್, ಶಿವ ಕುಮಾರ್ ಲದ್ದೇ, ಪ್ರೇಮ ಕುಮಾರ ಹಾಗೂ ಹಲವಾರು ಜನ ಶಿಕ್ಷಕರು ಉಪಸ್ಥಿತರಿದ್ದರು.

# ಲಿಂಗಾಯತ ಸಂಸ್ಕೃತಿ ನಾಶಕ್ಕೆ ಹುನ್ನಾರ




ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 24 : ಲಿಂಗಾಯತ ಸಂಸ್ಕೃತಿ ನಾಶಕ್ಕೆ ಹಲವು ವರ್ಷಗಳಿಂದ ಹುನ್ನಾರ ನಡೆದಿದ್ದು, ಲಿಂಗಾಯತರು ಎಚ್ಚೆತ್ತುಕೊಳ್ಳಬೇಕು ಎಂದು ವಿಜಯಪುರದ ಶರಣ ತತ್ವ ಚಿಂತಕ ಡಾ. ಜೆ.ಎಸ್. ಪಾಟೀಲ ಹೇಳಿದರು.

ಇಲ್ಲಿಯ ಬಸವಗಿರಿಯಲ್ಲಿ ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವದ ಎರಡನೇ ದಿನವಾದ ಶನಿವಾರ ನಡೆದ ಸಮವಸ್ತ್ರಧಾರಿ 770 ಶರಣ-ಶರಣೆಯರಿಂದ ಅಕ್ಕನ ಯೋಗಾಂಗ ತ್ರಿವಿಧಿ ಪಠಣ ಕಾರ್ಯಕ್ರಮದಲ್ಲಿ 'ಲಿಂಗಾಯತ ಚಳವಳಿ ಐತಿಹಾಸಿಕ ಹಿನ್ನೆಲೆ' ಕುರಿತು ಅವರು ಮಾತನಾಡಿದರು.

ಲಿಂಗಾಯತರು ಸಾಂಸ್ಕೃತಿಕ ದಬ್ಬಾಳಿಕೆಗಳಿಗೆ ಬಲಿಯಾಗಬಾರದು. ಅಸತ್ಯದ ವಿರುದ್ಧ ಹೋರಾಟ ನಡೆಸಬೇಕು ಎಂದು ತಿಳಿಸಿದರು.

ಸಂಸ್ಕೃತಿಯ ಅರಿವಿಲ್ಲದಿದ್ದರೆ ಅನ್ಯ ಸಂಸ್ಕೃತಿಯ ದಾಸರಾಗಬೇಕಾಗುತ್ತದೆ. ಕಾರಣ, ಲಿಂಗಾಯತರು ತಮ್ಮ ಸಂಸ್ಕೃತಿ ಹಾಗೂ ಇತಿಹಾಸವನ್ನು ಅರಿಯಬೇಕು ಎಂದು ಹೇಳಿದರು.

ಲಿಂಗಾಯತರು ಉತ್ಕೃಷ್ಟ ಸಂಸ್ಕೃತಿಯ ವಾರಸುದಾರರು. ಲಿಂಗಾಯತ ಚಳವಳಿ ಹುಟ್ಟಿದ್ದು ರಾಷ್ಟ್ರ ರಕ್ಷಣೆಗಾಗಿ. ಲಿಂಗಾಯತರು ರಾಷ್ಟ್ರೀಯವಾದಿಗಳು. ನಿಜವಾದ ದೇಶಭಕ್ತರು ಎಂದು ನುಡಿದರು.

ಇಷ್ಟಲಿಂಗ ಲಿಂಗಾಯತರ ದೇವರು. ಶೋಷಣಾ ಕೇಂದ್ರಗಳಿಂದ ದೂರವಿದ್ದು, ಶೋಷಣೆ ರಹಿತವಾದ ಇಷ್ಟಂಗವನ್ನು ಪೂಜಿಸಬೇಕು ಎಂದು ತಿಳಿಸಿದರು.

ಬಸವಣ್ಣ ಬಾರದಿದ್ದರೆ ನಾವೆಲ್ಲ ಶೋಷಿತರಾಗುತ್ತಿದ್ದೇವು. ನಡು ಬೀದಿಯಲ್ಲಿ ಓಡಾಡುವ ಹಾಗಿರಲಿಲ್ಲ. ಅಂದಿನ ಸಮಾಜದ ಸ್ಥಿತಿ-ಗತಿಗಳನ್ನು ಗಮನಿಸಿದ ಬಸವಣ್ಣ ಸರ್ವ ಶೋಷಣಾ ಮುಕ್ತ ಸಮಾಜ ಕಟ್ಟಲು ಹೋರಾಟ ಆರಂಭಿಸಿದರು. ಜಾತಿಯತೆಯನ್ನು ಹೋಗಲಾಡಿಸಿದರು. ಅವರ ಕಾಯಕ-ದಾಸೋಹ ತತ್ವ ಜಗದಲ್ಲಿ ಹೊಸ ಗಾಳಿ ಬೀಸಿತು ಎಂದು ತಿಳಿಸಿದರು.

ಹೈಕೋರ್ಟ್ ನ್ಯಾಯವಾದಿ ಸಂತೋಷ ಎಸ್. ನಾಗರಾಳೆ ಮಾತನಾಡಿ, ಅಕ್ಕ ಅವರದ್ದು ಅದ್ಭುತ ವ್ಯಕ್ತಿತ್ವ. ಯಾವಾಗಲೂ ನಗುತ್ತಲಿದ್ದರು. ಆನಂದ ಭಾವ ಅವರಲ್ಲಿತ್ತು. ಅನಾರೋಗ್ಯದ ಕಷ್ಟವಿದ್ದರೂ, ಹಸನ್ಮುಖಿಯಾಗಿರುತ್ತಿದ್ದರು ಎಂದು ಹೇಳಿದರು.

ಬಸವಗಿರಿಯನ್ನು ಸಾಧನೆಯ ಕೇಂದ್ರವಾಗಿ ಕಟ್ಟಿದರು. ನಾವು ಭಕ್ತರಾಗುವ ವಾತಾವರಣ ನಿರ್ಮಿಸಿ ಮೂಲ ಅರಿವಿಗೆ ಒಯ್ದರು ಎಂದು ತಿಳಿಸಿದರು.

ಬಸವಗಿರಿ ಅಕ್ಕ ಅನ್ನಪೂರ್ಣತಾಯಿ ಅವರ ಆತ್ಮ. ವಚನ ಪಠಣ, ಪರುಷ ಕಟ್ಟೆ, ವಚನ ವಿಜಯೋತ್ಸವದಲ್ಲಿ ಅಕ್ಕನವರು ಇದ್ದಾರೆ ಎಂದು ತಿಳಿಸಿದರು.

ಸಾನಿಧ್ಯ ವಹಿಸಿದ್ದ ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಅಕ್ಕನವರಲ್ಲಿ ಧರ್ಮ ಪ್ರಸಾರದ ಅಪಾರ ಕಳಕಳಿ ಇತ್ತು. ನಾಡಿನಾದ್ಯಂತ ಅವರ ಪ್ರವಚನಗಳು ಜನಪ್ರಿಯವಾಗಿದ್ದವು. ಒಮ್ಮೆ ಅವರ ಪ್ರವಚನ ಕೇಳದವರು ಮತ್ತೆಂದೂ ತಪ್ಪಿಸುತ್ತಿರಲಿಲ್ಲ ಎಂದು ಹೇಳಿದರು.

ಬಸವಣ್ಣನವರ ಉದ್ದೇಶ ತತ್ವಸಂಘಟನೆಯಾಗಿತ್ತು. ಎಲ್ಲ ಜಾತಿಯವರಿಗೆ ಸಂಸ್ಕಾರ ನೀಡಿ ಲಿಂಗಾಯತರಾಗಿಸಿದ್ದರು. ಅನೇಕ ಬಸವ ತತ್ವ ಪ್ರಸಾರಕರಿಗೆ ಲಿಂಗಾನಂದರು ಪ್ರೇರಣೆ-ಯಾಗಿದ್ದರು. ಅಕ್ಕನವರ ಕಣ ಕಣ, ರೋಮ ರೋಮಗಳಲ್ಲೂ ಬಸವಣ್ಣನೇ ತುಂಬಿದ್ದರು. ಅನ್ಯ ಆಚರಣೆಗಳಿಂದ ಬಸವ ತತ್ವಕ್ಕೆ ಕರೆತರುವಲ್ಲಿ ನಿಸ್ಸೀಮರಾಗಿದ್ದರು ಎಂದು ತಿಳಿಸಿದರು.

ಅಕ್ಕನವರು ಬಹಳ ಸಮರ್ಥರಾದ ಪ್ರಭುದೇವ ಸ್ವಾಮೀಜಿಯನ್ನು ಕೊಡುಗೆಯಾಗಿ ನೀಡಿದ್ದಾರೆ. ಪ್ರಭುದೇವ ಸ್ವಾಮೀಜಿ ನೂರಾರು ಕಡೆ ಪ್ರವಚನ ಮಾಡಿದ್ದಾರೆ. ಬಸವ ಬೆಳಕು ವಿಸ್ತರಿಸಿದ್ದಾರೆ ಎಂದು ಹೇಳಿದರು.

'ಅನ್ನಪೂರ್ಣ' ಯೋಜನೆಗೆ ಚಾಲನೆ ನೀಡಿದ ಕೂಡಲಸಂಗಮದ ಬಸವಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ ಮಾತನಾಡಿ, ಅಕ್ಕ ಅನ್ನಪೂರ್ಣತಾಯಿ ಹೆಸರಲ್ಲಿ ಹಸಿದವರಿಗೆ ಉಣ್ಣಿಸಲು ಅನ್ನಪೂರ್ಣ ಯೋಜನೆ ಆರಂಭಿಸಿರುವುದು ಸಂತೋಷದ ವಿಷಯ. ಇದೊಂದು ಮಾನವೀಯ ಕಾರ್ಯ. ಗುರುತರವಾದ ಜವಾಬ್ದಾರಿ ಎಂದು ಹೇಳಿದರು.

ಅನ್ನಪೂರ್ಣ ಯೋಜನೆ ಅಕ್ಕನವರಿಗೆ ನಿಜವಾದ ಗೌರವ ಸಮರ್ಪಣೆ ಎಂದರು.

ಭೂಮಿಯೊಳಗೆ ಬಿದ್ದ ಬೀಜ ಕೆಟ್ಟಿತೆನಬೇಡ. ಅಕ್ಕನವರು ಬಿತ್ತಿದ ಬೀಜ ಬೆಳೆ ನೀಡೇ ನೀಡುತ್ತವೆ. ಅಕ್ಕನ ಭಕ್ತರು ಆಚರಣೆಯಲ್ಲಿ ಗಟ್ಟಿ ಕಾಳಾಗಿದ್ದಾರೆ ಎಂದು ತಿಳಿಸಿದರು.

ನೇತೃತ್ವ ವಹಿಸಿದ್ದ ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ, ಡಾ. ವಚನಶ್ರುತಿ ಮಾತನಾಡಿದರು.

ಅಶ್ವಿನಿ ರಾಜಕುಮಾರ ಚಿಟ್ಟಾ ವಚನ ಸಂಗೀತ ಸುಶ್ರಾವ್ಯವಾಗಿ ನಡೆಸಿಕೊಟ್ಟರು. ಆಳಂದದ ಕೋರಣೇಶ್ವರ ಸ್ವಾಮೀಜಿ ಸಮ್ಮುಖ, ನೀಲಮ್ಮನ ಬಳಗದ ನೀಲಮ್ಮ ರೂಗನ್ ಅಧ್ಯಕ್ಷತೆ ವಹಿಸಿದ್ದರು.

ಖೇಳಗಿಯ ಶಿವಲಿಂಗ ಸ್ವಾಮೀಜಿ, ಕಲಬುರಗಿಯ ಮಾತೆ ಪ್ರಭುಶ್ರೀ, ನಿಡವಂಚಾದ ಮಾತೆ ಮೈತ್ರಾದೇವಿ, ಬೀದ???ನ ಶರಣಮ್ಮ ತಾಯಿ ಅಲಿಯಾಬಾ???ನ ಲಲಿತಾ ತಾಯಿ, ಅಕ್ಕ ಮಹಾದೇವಿ, ಕಮಲಾಬಾಯಿ ತಾಯಿ ಇದ್ದರು.

# ಘೋಡೆ ಮನವಿಗೆ ಸ್ಪಂದನೆ ಜಗಜೀವನರಾಂ ಭವನಕ್ಕೆ: ರೂ.5 ಕೋಟಿ ಅನುದಾನಕ್ಕೆ ಸಚಿವ ರಹೀಮಖಾನ್ ಶಿಫಾರಸು

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 24 : ಬೀದರನಲ್ಲಿ ಮಾಜಿ ಉಪಪ್ರಧಾನಿ ಬಾಬು ಜಗಜೀವನರಾಂ ಭವನ ನಿರ್ಮಾಣಕ್ಕೆ ರೂ. 5 ಕೋಟಿ ಅನುದಾನ ಒದಗಿಸುವಂತೆ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಅವರು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ. ಎಚ್.ಸಿ. ಮಹಾದೇವಪ್ಪ ಅವರಿಗೆ ಶಿಫಾರಸು ಮಾಡಿದ್ದಾರೆ.

ಜಾನಸನ್ ಘೋಡೆ ಮನವಿಯ ಹಿನ್ನೆಲೆಯಲ್ಲಿ ಪೌರಾಡಳಿತ ಸಚಿವರು ಈ ಕುರಿತು ಸಮಾಜ ಕಲ್ಯಾಣ ಇಲಾಖೆಯ ಸಚಿವರಿಗೆ ಪತ್ರ ಬರೆದಿದ್ದಾರೆ ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ತಿಳಿಸಿದ್ದಾರೆ.



ಭವನ ನಿರ್ಮಾಣಕ್ಕೆ ಸರ್ಕಾರದಿಂದ ಈಗಾಗಲೇ ನಗರದ ಹೊರವಲಯದ ಚಿಕ್ಕಪೇಟೆಯ ಸರ್ವೇ ಸಂಖ್ಯೆ 61 ರಲ್ಲಿ 1 ಎಕರೆ ಜಮೀನು ಒದಗಿಸಲಾಗಿದೆ. ಹಿಂದೆ ಭವನಕ್ಕೆ ಅನುದಾನ ಕೂಡ ಮಂಜೂರು ಮಾಡಲಾಗಿದ್ದು, ಅದರಲ್ಲಿ ರೂ. 50 ಲಕ್ಷ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ರೂ. 50 ಲಕ್ಷದಲ್ಲಿ ಭವನ ನಿರ್ಮಾಣ ಹಾಗೂ ಅದಕ್ಕೆ ಮೂಲಸೌಕರ್ಯ ಕಲ್ಪಿಸುವುದು ಅಸಾಧ್ಯವಾಗಿದೆ. ಹೀಗಾಗಿ ದೀನ ದಲಿತರು, ಬಡವರ ಅನುಕೂಲಕ್ಕಾಗಿ ಭವನಕ್ಕೆ ರೂ.5 ಕೋಟಿ ವಿಶೇಷ ಅನುದಾನ ಒದಗಿಸುವಂತೆ ಕೋರಿದ್ದಾರೆ ಎಂದು ತಿಳಿಸಿದ್ದಾರೆ.

# ದುಬಾರಿ ಶುಲ್ಕ ವಸೂಲಿಗಿಳಿದ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಜೂ.5ರಂದು ಡಿ.ಸಿ ಕಚೇರಿಗೆ ಮುತ್ತಿಗೆ: ಮುಧೋಳ

ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 24: ಫಿಜಿಕ್ವಾಲಾ ಸೇರಿದಂತೆ ಅಕ್ರಮವಾಗಿ ನಡೆಸುತ್ತಿರುವ ಪದವಿ ಪೂರ್ವ ತರಬೇತಿ ಕೇಂದ್ರಗಳು, ಪ್ರೌಢಶಾಲೆಗಳು ಹಾಗೂ ಅಕ್ರಮ ಶಾಲೆಗಳನ್ನು ರದ್ದು ಮಾಡಬೇಕು ಮತ್ತು ನೀಟ್, ಜೆಇಇ ತರಬೇತಿ ಹೆಸರಿನಲ್ಲಿ ಬಡ ಮಕ್ಕಳಿಂದ ದುಬಾರಿ ಶುಲ್ಕ ವಸುಲಿಗಿಳಿದ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರೂದ್ಧ ಜೂನ್ 4ರೊಳಗೆ ಕ್ರಮ ಜರುಗಿಸದಿದ್ದರೆ ಜೂನ್ 5ರಂದು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಗುವುದೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸೋಮನಾಥ ಮುಧೋಳ ಎಚ್ಚರಿಸಿದರು.



ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸರ್ಕಾರ ಕೊಟ್ಯಾನುಗಟ್ಟಲೆ ಸರ್ಕಾರಿ ಶಾಲಾ, ಕಾಲೇಜುಗಳಿಗೆ ಹಣ ಖರ್ಚು ಮಾಡಿದರೂ ಅಲ್ಲಿ ಪರಿಣಾಮಕಾರಿ ಬೋಧನೆ ಮಾಡುತ್ತಿಲ್ಲ. ಸರ್ಕಾರಿ ಶಾಲೆಗಳ ಶಿಕ್ಷಕರು ತಮ್ಮ ಕೈ ಕೆಳಗೆ ಸ್ಥಳಿಯ ವಿದ್ಯಾವಂತ ಯುವಕರಿಗೆ ಬೋಧಿಸಲು ಕಳಿಸಿ ಡಿ.ಡಿ.ಪಿ.ಐ ಕಚೇರಿ ಮುಂದೆಯೆ ಹರಟೆ ಹೊಡೆಯುತ್ತ ಕಾಲ ಕಳೆಯುತ್ತಿರುವುದು ಗುಟ್ಟಾಗಿ ಉಳಿದಿಲ್ಲ. ಹೀಗಾಗಿ ಖಾಸಗಿ ಶಾಲೆ, ಕಾಲೇಜುಗಳತ್ತ ಜನರು ಮುಖ ಮಾಡುತ್ತಿರುವರು.

ಅಲ್ಲಿ ದುಬಾರಿ ಶುಲ್ಕ ಹೆಚ್ಚಿಸಿದ ಕಾರಣ ಬಡ ಮಕ್ಕಳಿಗೆ ಶಿಕ್ಷಣ ಎಂಬುದು ನಕ್ಷತ್ರದಂತಾಗಿದೆ. ಸಾಲ, ಶೂಲ ಮಾಡಿ ಮಕ್ಕಳಿಗೆ ವಿದ್ಯಾವಂತರನ್ನಾಗಿ ಮಾಡಲು ಪೋಷಕರು ಮುಂದಾಗುತ್ತಿದ್ದರೆ ಬ್ಯಾಂಕುಗಳು ಹಾಗೂ ಖಾಸಗಿ ಲೇವಾದೇವಿಯವರು ಪೋಷಕರಿಂದ ಹಣ ವಸುಲಿಗಾಗಿ ಅಮಾನವಿಯತೆ ಮೆರೆಯುತ್ತಿರುವರು. ಬಡ ವಿದ್ಯಾರ್ಥಿಗಳ ಜೀವ ಹಿಂಡುತ್ತಿರುವ ಜಿಲ್ಲೆಯ ಖಾಸಗಿ ಶಿಕ್ಷಣ ಸಂಸ್ಥೆಗಳಾದ ಭಾಲ್ಕಿಯ ಚನ್ನಬಸವೇಶ್ವರ ಗುರುಕುಲ ಕರಡ್ಯಾಳ, ಶಾಹಿನ್ ಕಾಲೇಜು, ಜ್ಞಾನಸುಧಾ ವಿದ್ಯಾಲಯನಂತಹ ಶಿಕ್ಷಣ ಸಂಸ್ಥೆಗಳಿಗೆ ಕಡಿವಾಣ ಹಾಕಲು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಹಾಗೂ ಪದವಿ ಪೂರ್ವ ಹಾಗೂ ವೃತ್ತಿ ಶಿಕ್ಷಣ ಇಲಾಖೆಯ ಡಿ.ಡಿ.ಪಿ.ಯು ಕೂಡಲೇ ಕಾರ್ಯತತ್ಪರರಾಗಬೇಕೆಂದು ಕರೆ ನೀಡಿದರು.

ಈ ಹಿಂದೆ ಮೇಲ್ತಿಳಿಸಿದ ಖಾಸಗಿ ಶಿಕ್ಷಣ ಸಂಸ್ಥೆಗಳ ನಾಮಫಲಕ ಆಂಗ್ಲ ಭಾಷೆಯಲ್ಲಿ ಅಳವಡಿಸಿ ಕನ್ನಡಿಗರಿಗೆ ಮುಜುಗರ ಉಂಟು ಮಾಡಿದ್ದರು. ಅದರ ವಿರೂದ್ಧ ಕರವೆ ಸಂಘಟನೆ ಅವನ್ನು ತೆರವುಗೊಳಿಸಲು ಮುಂದಾಗಿತ್ತು. ಇದನ್ನು ಸಹಿಸದ ಕೆಲವು ಕಾಣದ ಕೈಗಳು ನಮ್ಮ ವಿರೂದ್ಧ ಮೊಕದ್ದಮೆ ಹೂಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಆದರೂ ಕನ್ನಡದ ನೆಲ, ಜಲ ಸಂರಕ್ಷಣೆಗೆ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ಸ್ಪಷ್ಟಪಡಿಸಿದರು. ಅನಧಿಕೃತ ಕೋಚಿಂಗ್ ಸೆಂಟರ್‌ಗಳ ಹಾವಳಿ ಹತ್ತಿಕ್ಕಲು ಹಾಗೂ ದುಬಾರಿ ಶುಲ್ಕ ವಸುಲಿ ಮಾಡುತ್ತಿರುವ ಖಾಸಗಿ ಶಾಲಾ, ಕಾಲೇಜುಗಳ ವಿರೂದ್ಧ ಜೂನ್ 4ರೊಳಗೆ ಕ್ರಮ ವಹಿಸಬೇಕು. ಇಲ್ಲದಿದ್ದಲ್ಲಿ ಜೂನ್ 5ರಂದು ಸಾವಿರಾರು ಕರವೇ ಕಾರ್ಯಕರ್ತರು ಸೇರಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು. ಅಲ್ಲಿಯ ಆಗುವ ಅನಾಹುತಗಳಿಗೆ ಸರ್ಕಾರವೇ ಜವಾಬ್ದಾರಿ ವಹಿಸಬೇಕಾದಿತು ಎಂದು ಮುಧೋಳ ಎಚ್ಚರಿಸಿದರು.

ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಗೌಡ, ಭಾಲ್ಕಿ ತಾಲೂಕಾಧ್ಯಕ್ಷ ಬಂಡೆಪ್ಪ ಕರಬಸಣ್ಣ, ಬೀದರ್ ದಕ್ಷಿಣ ಕ್ಷೇತ್ರದ ಅಧ್ಯಕ್ಷ ವೀರಶೆಟ್ಟಿ ಗೌಸಪುರೆ, ಜಿಲ್ಲಾ ಉಪಾಧ್ಯಕ್ಷರಾದ ಸೋಮಶೇಖರ ಸಜ್ಜನ್, ಶಿವರುದ್ರ ತೀರ್ಥ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಇಂದು ಸಾವಿತ್ರಿಬಾಯಿ ಫುಲೆ ಜನ್ಮದಿನದ ಪ್ರಯುಕ್ತ ಗ್ರಾಮೀಣ ಬಡ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ, ಸಮವಸ್ತ್ರ ವಿತರಣೆ: ರಾಂಪುರೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 24 : ಮೇ. 25 ರಂದು ಭಾನುವಾರ ಮ. 12 ಗಂಟೆಗೆ ನಗರದ ಪೂಜ್ಯ ಚನ್ನಬಸವ ಪಟ್ಟದ್ದೆವರು ರಂಗಮಂದಿರದಲ್ಲಿ ಬುದ್ಧಿಷ್ಟ್ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ಮತ್ತು ರಾಂಪೂರೆ ಫೌಂಡೇಶನ್ ವತಿಯಿಂದ ಗ್ರಾಮೀಣ ಬಡ ಮಹಿಳೆಯರಿಗೆ ಉಚಿತ ಶಿಕ್ಷಣ ಮತ್ತು ಅನಾಥ ಮಕ್ಕಳಿಗೆ ಉಚಿತ ಪಠ್ಯಪುಸ್ತಕ ಮತ್ತು ಸಮವಸ್ತ್ರ ವಿತರಣೆ ಮಾಡಲಾಗುತ್ತಿದೆ ಎಂದು ಬುದ್ಧಿಷ್ಟ್ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಎಸ್. ರಾಂಪುರೆ ತಿಳಿಸಿದರು.



ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕ-ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಬುದ್ಧಿಷ್ಟ್ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ಹಾಗೂ ರಾಂಪೂರೆ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದೆ. 2025 ರಿಂದ ಈ ಯೋಜನೆ ಆರಂಭಿಸಲಾಗಿದೆ. ಶಾಲೆ ಉಳಿಯುವವರೆಗೆ ಜಾತಿ ಧರ್ಮ ಮತಭೇದ ರಹಿತವಾಗಿ ಈ ಯೋಜನೆ ಜಾರಿಗೆ ತರುತ್ತೇವೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಬಹುತೇಕ ಕನ್ನಡಪರ, ದಲಿತಪರ, ವಿದ್ಯಾರ್ಥಿ ಪರ, ಗೊಂಡಪರ ಸಂಘಟನೆಗಳು ಸೇರಿದಂತೆ ಹಲವರ ಸಹಕಾರವಿದೆ. ದಿವ್ಯ ಸಾನಿಧ್ಯವನ್ನು ಭಾಲ್ಕಿಯ ಪೂಜ್ಯ ಶ್ರೀ ಡಾ. ಬಸವಲಿಂಗ ಪಟ್ಟದ್ದೆವರು, ದಿವ್ಯ ನೇತೃತ್ವ ಆಣದೂರಿನ ಪೂಜ್ಯ ಜ್ಞಾನಸಾಗರ ಭಂತೆ ವಹಿಸುವರು. ಉದ್ಘಾಟನೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನೆರವೇರಿಸುವರು. ಅಧ್ಯಕ್ಷತೆಯನ್ನು ಪೌರಾಡಳಿತ ಮತ್ತು ಹಜ್ ಸಚಿವ ರಹಿಂಖಾನ್ ವಹಿಸುವರು. ಘನ ಉಪಸ್ಥಿತಿಯನ್ನು ಸಮಾಜ ಕಲ್ಯಾಣ ಸಚಿವ ಎಚ್. ಸಿ. ಮಹದೇವಪ್ಪ, ಉದಗೀರ ಶಾಸಕ ಸಂಜಯ್ ಬನಸೋಡೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದ ಸಾಗರ ಖಂಡ್ರೆ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಶಿಕ್ಷಣ ಪ್ರೇಮಿಗಳು, ಸಾಹಿತಿಗಳು ಉಪಸ್ಥಿತರಿರಲಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ಪ್ರಮುಖರಾದ ಚರಣದೀಪ ಆಣದೂರೆ, ಅನೀಲ ಚಿಂಚೋಳೆ, ಶ್ರೀಕಾಂತ ಭವಾನಿ, ಧನರಾಜ ಜಿ., ದಿನೇಶ ಸೋನಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಉನ್ನತ ಗುರಿ, ಸಾಧನೆಗೆ ಸಹಕಾರಿ: ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಮೇ. 24: ವಿದ್ಯಾರ್ಥಿಗಳು ಬದುಕಿನಲ್ಲಿ ವಹೋನ್ನತವಾದದ್ದನ್ನು ಸಾಧಿಸಬೇಕಾದರೆ ವಿದ್ಯಾರ್ಥಿದೆಸೆಯಿಂದಲೇ ಉನ್ನತ ಗುರಿಯನ್ನು ಇಟ್ಟು-ಕೊಂಡು ನಿರಂತರ ಪ್ರಯತ್ನ ಮಾಡಬೇಕು ಎಂದು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಬಸವಲಿಂಗ ಪಟ್ಟದೇವರು ಹೇಳಿದರು. ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಪ್ರೌಢ ಶಾಲೆಯಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಕೋಚಿಂಗ್



ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕ್ಷೇತ್ರದಲ್ಲಿ ಹೆಚ್ಚಿನದನ್ನು ಸಾಧಿಸಲು ವಿಫುಲವಾದ ಅವಕಾಶಗಳು ಇವೆ. ವಿದ್ಯಾರ್ಥಿಗಳಿಗೆ ಜೀವನದಲ್ಲಿ ಏನಾದರೂ ಸಾಧಿಸಲೇಬೇಕು ಎಂಬ ಉತ್ಕಟ ಬಯಕೆ, ಹಂಬಲ, ಛಲ ಮನದಲ್ಲಿ ಮನೆ ಮಾಡಿದಲ್ಲಿ ಅಸಾಧ್ಯವಾದದ್ದನ್ನು ಸಾಧ್ಯವಾಗಿಸಬಹುದು ಎಂದು ತಿಳಿಸಿದರು. ಜೀವನದಲ್ಲಿ ಎದುರಾಗುವ ಸಮಸ್ಯೆಗಳು, ಬಡತನ ಸಾಧನೆಗೆ ಅಡ್ಡಿಯಾಗದಂತೆ ನೋಡಿಕೊಳ್ಳುವ ಗುರುತರ ಜವಬ್ದಾರಿ ವಿದ್ಯಾರ್ಥಿಗಳ ಮೇಲಿದೆ. ಬದುಕಿನಲ್ಲಿ ಶ್ರೇಷ್ಠವಾದದ್ದನ್ನು ಸಾಧಿಸಿರುವ ಅನೇಕ ಮಹನೀಯರು ಬಾಲ್ಯದಲ್ಲಿ ಅನೇಕ ಸಮಸ್ಯೆ, ಕಷ್ಟಗಳನ್ನು ಮೆಟ್ಟಿ ನಿಂತು ಇಡೀ ಜಗತ್ತೇ ಅವರತ್ತ ನೋಡುವಂತಹ ಮಹಾನ್ ಸಾಧನೆ ಮಾಡಿದ್ದಾರೆ. ಅಂತಹವರ ಬದುಕನ್ನು ವಿದ್ಯಾರ್ಥಿಗಳು ಆದರ್ಶವಾಗಿ ಇರಿಸಿಕೊಳ್ಳಬೇಕು ಎಂದು ಹೇಳಿದರು. ಮುಖ್ಯಶಿಕ್ಷಕ ಮಹೇಶ ಮಹಾರಾಜ್, ಎಸ್‌ಎಸ್‌ಎಲ್‌ಸಿ ಸಂಯೋಜಕ ಪ್ರವೀಣ ಖಂಡಾಳೆ, ಪ್ರಮುಖರಾದ ರಾಜಕುಮಾರ್ ಮೋರಗೆ, ಅನಿಲ್ ಕುಮಾರ ಪಾಟೀಲ ಸೇರಿದಂತೆ ಇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಂಗಡಿಗರ ಸಮೇತ ತುಳುಜಾಪೂರ ದರ್ಶನ ಪಡೆದ ರಮೇಶ್ ಪವರ್ ಬೋರಬಂಡ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ,ಮೇ.24–ಗುರುಮಠಕಲ್ ತಾಲೂಕಿನ ಕಾಕಲವಾರ ಗ್ರಾಮಪಂಚಾಯಿತಿ ಸದಸ್ಯರಮೇಶ ಪವರ್ ಬೋರಬಂಡ ಅವರು ಅನೇಕ ಜನಪರ,ಧಾರ್ಮಿಕ ಹಾಗೂ ಸಮಾಜಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವದಲ್ಲದೆ ತನ್ನ ಸ್ವಂತ ಖರ್ಚಿನಲ್ಲಿ ಬಡ ವಿಧ್ಯಾರ್ಥಿಗಳ ಶಾಲಾಮಕ್ಕಳಿಗೆ ನೋಟ್‌ಬುಕ್ ವಿತರಿಸಿದ್ದಾರೆ. ಇದು ಅಲ್ಲದೆ ತಮ್ಮ ಸ್ವಗ್ರಾಮದಿಂದ ಅಂದರೆ ಬೋರಬಂಡಾ ಗ್ರಾಮದಿಂದ ಗ್ರಾಮಸ್ಥರೊಂದಿಗೆ ಸುಕ್ಷೇತ್ರ ತುಳಜಾಪುರ ಶ್ರೀಮಾತೆ ಅಂಭ ಭವಾನಿ ದರ್ಶನ ಪಡೆಯಲು ಗುರುವಾರ ದಿನ ಪ್ರಯಾಣ ಮಾಡಿ ಶುಕ್ರವಾರ ಮುಂಜಾನೆ ಸಮಯ ದೇವಿಯ ದರ್ಶನ ಪಡೆದರು. ಇಂತಹ ಪುಣ್ಯ ಕಾರ್ಯಕ್ರಮ ಕ್ಷೇತ್ರಗಳ ದರ್ಶನಗಳನ್ನು ಸ್ವತಃ ತಮ್ಮ ಸ್ವಂತ ಖರ್ಚಿನಲ್ಲಿ ಮಾಡಿಸುತ್ತಿರುವುದು ಪೂರ್ವ ಜನ್ಮದ ಪುಣ್ಯ ಎಂದು ಗ್ರಾಮಸ್ಥರು ಹೇಳಿ ಕೊಂಡಾಡುತ್ತಿದ್ದಾರೆ. ಸುಕ್ಷೇತ್ರ ತುಳುಜಾ ಭವಾನಿ ಮಾತೆಯ ದರ್ಶನ ಪಡೆಯಲು ತಮ್ಮ ಸ್ವಂತ ಖರ್ಚಿನಲ್ಲಿ 61 ಜನ ಮಹಿಳೆಯರು, 11ಜನ ಬಾಲಕರು ಹಾಗೂ 5 ಜನ ಗ್ರಾಮದ ಹಿರಿಯ ಮುಖಂಡರನ್ನು ಕರೆದು ಕೊಂಡು ಹೋಗಿ ದರುಶನ ಪಡೆದು ಬಂದಿದ್ದಾರೆ. ಇಂತಹ ಜನರಪರ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳಲ್ಲಿ ಇನ್ನೂ ಹೆಚ್ಚಿನ ಆಸಕ್ತಿ ತೋರಿ ಭಗವಂತನ ಕೃಪೆಗೆ ಪಾತ್ರರಾಗಿ–ರೆಂದು ಗ್ರಾಮಸ್ಥರು ಹೇಳಿದರು. ಈ ವೇಳೆ ಮುಖಂಡರಾದ ಕಾಶಿನಾಥ ರಾಠೋಡ್, ಸೂರ್ಯನಾಯಕ,ವಾಸುಬಾರಿ ಕಾರುಬಾರಿ, ಶರಣು ರಾಠೋಡ್, ಕೀಶನ್ ನಾಯಕ ಹಾಗೂ ಇತರರು ಇದ್ದರು.

# ಕಾಶ್ಮೀರ ಭಾರತದ ಅವಿಭಾಜ್ಯ ಅಂಗ




ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮೇ.24:ಪಟ್ಟಣದಲ್ಲಿ ಗುರುವಾರಹಮ್ಮಿಕೊಂಡಿದ್ದತಿರಂಗಾ ಯಾತ್ರೆಯಲ್ಲಿ ಭಾಗವಹಿಸಿದ್ದ ಜನರುದೇಶ ಭಕ್ತಿಯನ್ನು ಸಾರುವ ಘೋಷಣೆಗಳ ಜತೆಗೆ ದೂದ್ ಮಾಂಗೋ ಖೀರ್ ದೇಂಗೆ, ಕಾಶ್ಮೀರ ಮಾಂಗೋ ಚೀರ್ ದೇಂಗೆ ಎಂದು ಉದ್ಘೋಷಿಸುವ ಮೂಲಕ ಗಡಿ ಕಾಯುವ ಸೈನಿಕರ ಜತೆಗೆ ಈ ರಾಷ್ಟ್ರದ ಪ್ರತಿಯೊಬ್ಬ ನಾಗರಿಕರು ಜತೆಗಿದ್ದೇವೆ ಎಂಬ ಸಂದೇಶವನ್ನು ರವಾನಿಸಲಾಯಿತು.

ಪ್ರವಾಸಕ್ಕೆಂದು ಪಹಲ್ಗಾಮ್‌ಗೆ ತೆರಳಿದ್ದ ಅಮಾಯಕರ ಬಲಿ ಪಡೆದ ಪಾಕ್ ಪೋಷಿತ ಉಗ್ರರರನ್ನು ನಿರ್ನಾಮ ಮಾಡಲು ಭಾರತೀಯ ಸೇನೆಯ ಆಪರೇಷನ್ ಸಿಂದೂರ ವಿಜಯೋತ್ಸವದ ನಿಮಿತ್ತ ನಮ್ಮ ಸೈನಿಕರಿಗೆ ಅಭಿನಂದನೆ ಹಾಗೂ ಆತ್ಮಸ್ಥೈರ್ಯವನ್ನು ತುಂಬುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆ ಯಶಸ್ವಿಯಾಯಿತು.

ಪಟ್ಟಣದ ರೈಲು ನಿಲ್ದಾಣದಿಂದ ಹೋರಾಟ ತಿರಂಗಾ ಯಾತ್ರೆಯೂ ಬಸವೇಶ್ವರ ವೃತ್ತದ ಮೂಲಕ ಕನಕ ವೃತ್ತವನ್ನು ತಲುಪಿತು. ಕಡೇಚೂರು ಸಂಸ್ಥಾನ ಮಠದ ಗುರುಮೂರ್ತಿ ಶಿವಾಚಾರ್ಯರು, ಸಿದ್ಧ ಚೇತನಾಶ್ರಮ ಸಿದ್ದಾರೂಢ ಮಠದ ಸೋಮೇಶ್ವರಾಂದ ಸ್ವಾಮಿಗಳು, ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಯಾದಗಿರಿ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಯುವ ಮುಖಂಡ ಮಹೇಶರೆಡ್ಡಿಗೌಡ ಮುದ್ನಾಳ, ಎಪಿಎಂಸಿ ಮಾಜಿ ಅಧ್ಯಕ್ಷ ಭೀಮನಗೌಡ ಕ್ಯಾತನಾಳ, ಪ್ರಕಾಶಗೌಡ ಸೈದಾಪುರ,ಮಲ್ಲನಗೌಡ ದುಪ್ಪಲ್ಲಿ, ನರಸಿಂಹಲು ನೀರಟ್ಟಿ, ಸುರೇಶ ಆನಂಪಲ್ಲಿ, ನಿತಿನ್ ತಿವಾರಿ, ಭೀಮಣ್ಣ ಮಡಿವಾಳ, ಮಲ್ಲರೆಡ್ಡಿ ಖಾನಾಪುರ, ಶರಣು ಯಲ್ಹೇರಿ, ಮಲ್ಲುಗೌಡ ಸೈದಾಪುರ, ಪರ್ವತರೆಡ್ಡಿ ದದ್ದಲ್, ಕೆ.ಬಿ ಗೋವರ್ಧನ್, ಗ್ರಾಪಂ ಮಾಜಿ ಅಧ್ಯಕ್ಷ ಮಾಳಪ್ಪ ಅರಕೇರಿ, ರಾಜು ದೊರೆ, ಮಲ್ಲೇಶ ನಾಯಕ ಕೂಡ್ಲೂರು, ವಿಶ್ವನಾಥ ಯಾದವ ಬದ್ದೇಪಲ್ಲಿ, ಮಧುಸೂದನರಾವ ಕುಲ್ಕರ್ಣಿ, ಹಳ್ಳೆಪ್ಪ ಕಿಲ್ಲನಕೇರಾ, ಆನಂದ ಮೀರಿಯಲ, ಸಿದ್ದು ಪೂಜಾರಿ, ಅರ್ಜುನ ಚವ್ಹಾಣ, ಜಿತೇಂದ್ರ ಬಾಡಿಯಾಳ, ಪ್ರಭು ಗೂಗಲ್, ಬಸ್ಸು ನಾಯಕ್, ಸುರೇಶ ಬೆಳಗುಂದಿ, ಸಾಗರ ಹುಲ್ಲೇರ ಸೇರಿದಂತೆ ಇತರರಿದ್ದರು.

ಮಾಜಿ ಸೈನಿಕ ಮಲ್ಲರೆಡ್ಡಿಗೆ ಸನ್ಮಾನ: ಭಾರತೀಯ ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಪಡೆದ ಮಾಜಿ ಸೈನಿಕ ಮಲ್ಲರೆಡ್ಡಿ ಅವರನ್ನು ಸಿದ್ದಚೇತನಾಶ್ರಮ ಸಿದ್ದಾರೂಢ ಮಠದ ಪೀಠಾಧಿಪತಿ ಸೋಮೇಶ್ವರಾನಂದ ಸ್ವಾಮಿಗಳು

# ಇಬ್ಬರು ಬಾಲಕಿಯರ ದುರ್ಮರಣ; ಪರಿಹಾರಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.24: ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಮೋಟ್ನಳ್ಳಿ ಗ್ರಾಮದಲ್ಲಿ ಇಬ್ಬರು ಬಾಲಕಿಯರು, ಬಟ್ಟೆ ಒಗೆಯಲು ಹೋಗಿ ಬಾವಿಯಲ್ಲಿ ಕಾಲು ಜಾರಿ ಬಿದ್ದು, ಮೃತಪಟ್ಟಿದ್ದು, ಕಡು ಬಡವ ಕುಟುಂಬವಿದ್ದು, ಮೃತ ಬಾಲಕಿಯರ ಕುಟುಂಬಕ್ಕೆ ಮಾನವೀಯ ದೃಷ್ಟಿಯಿಂದ ಪರಿಹಾರ ಧನ ನೀಡುವಂತೆ ಕನ್ನಡ ರಕ್ಷಣಾ ವೇದಿಕೆ ಜಿಲ್ಲಾ ಘಟಕ ಒತ್ತಾಯಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಕರವೇ ಜಿಲ್ಲಾಧ್ಯಕ್ಷ ನಾಗಪ್ಪ ಹೊನಗೇರಾ ಮಾತನಾಡಿ, ಹಿಂದುಳಿದ ಉಪ್ಪಾರ ಜಾತಿಗೆ ಸೇರಿದ್ದು, ದಿ:15–05–2025 ರಂದು ಮೋಟ್ನಳ್ಳಿ ಗ್ರಾಮದಲ್ಲಿ ವಿದ್ಯುತ್ ಇಲ್ಲದೇ ಇರುವುದರಿಂದ ಎರಡು ದಿನದಿಂದ ನೀರು ಬರದೇ ಇರುವ ಕಾರಣ ಬಟ್ಟೆ ಒಗೆಯಲು ಊರಿನ ಬಾವಿಗೆ ಹೋದ ಬಾಲಕಿಯರಾದ 1) ಕು.ವಸಂತಮ್ಮ ತಂ/ ಲಕ್ಷ್ಮಣ, ಪಿಯುಸಿ ವ್ಯಾಸಂಗ, ಸಾಂ ಮೋಟ್ನಳ್ಳಿ, ಇವರ ಸಂಬಂಧಿ (ಅತ್ತೆ ಮಗಳು) ಬಾಲಕಿಯಾದ 2)ನವಿತಾ ತಂ/ ಮಾಣಿಕಪ್ಪ ತೆಲಂಗಾಣ ಇದ್ದು, ಈಕೆಯ ಎಸ್.ಎಸ್.ಎಲ್.ಸಿ. ಪ್ರಸಕ್ತ ಸಾಲಿನಲ್ಲಿ ಶೇ. 98% ಅಂಕ ಪಡೆದಿದ್ದು, ಇವರಿಬ್ಬರು ಬಟ್ಟೆ ಒಗೆಯಲು ಹೋದಾಗ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದು ಮೃತಪಟ್ಟಿರುತ್ತಾರೆ.

ಸದರಿಯವರ ಕುಟುಂಬ ತುಂಬಾ ಕಡು ಬಡತನದಿಂದ ಕೂಡಿದ್ದು, ಆರ್ಥಿಕವಾಗಿ ಅತೀ ಹಿಂದುಳಿದ ಕುಟುಂಬವಾಗಿದ್ದು, ಇಬ್ಬರು ಬಾಲಕಿಯರು ಮುಂದೆ ಉನ್ನತ ವ್ಯಾಸಂಗ ಮಾಡಿ, ಕುಟುಂಬ ಸಾಕುವ ಕನಸು ಕಂಡಿದ್ದು, ಈಗ ಅವರ ಕುಟುಂಬ ಕಣ್ಣೀರಿನಲ್ಲಿ ಕೈ ತೊಳೆಯುತ್ತಿದೆ.

ಆದ ಕಾರಣ ತಾವು ದಯಮಾಡಿ, ಮಾನವೀಯತೆ ದೃಷ್ಟಿಯಿಂದ ಸದರಿಯವರ ಕುಟುಂಬಕ್ಕೆ ಸೂಕ್ತ ಪರಿಹಾರ ಧನ ಒದಗಿಸಿ ಕಡು ಬಡ ಕುಟುಂಬಕ್ಕೆ ಆಸರೆಯಾಗಿದ್ದ ಮಕ್ಕಳನ್ನು ಕಳೆದುಕೊಂಡ ಕುಟುಂಬಕ್ಕೆ ಸರ್ಕಾರದಿಂದ ಸಿಗತಕ್ಕಂಥ ಸೌಲತ್ತು ಒದಗಿಸಿ ಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆನಂದ ಬಂದಳ್ಳಿ ಹೊನಗೇರಾ, ರಮೇಶ ಮೋಟ್ನಳ್ಳಿ, ಅಲ್ಲಾವುದ್ದಿನ್ ಮೋಟ್ನಳ್ಳಿ, ಮಲ್ಲಪ್ಪ ಗಂಗಾನಗರ, ಲಕ್ಷ್ಮಣ ಮೋಟ್ನಳ್ಳಿ, ಆದಪ್ಪ ಹೊನಗೇರಿ, ಬಸವರಾಜ ಹೊನಗೇರಿ, ರಾಮಣ್ಣ ಹೊನಗೇರಿ, ನಾಗಪ್ಪ ಮೋಟ್ನಳ್ಳಿ, ಅಶೋಕ ಮೋಟ್ನಳ್ಳಿ, ಮಹಾದೇವ ಮೋಟ್ನಳ್ಳಿ, ಶರಣು ಮೋಟ್ನಳ್ಳಿ ಸೇರಿದಂತೆ ಅನೇಕರು ಇದ್ದರು.

## ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವಂತೆ ಸೂಚನೆ

ರಾಯಚೂರು ಮೆ 24: ಇಲ್ಲಿನ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2025–26ನೇ ಸಾಲಿಗೆ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ 9 ಮತ್ತು 10ನೇ ತರಗತಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಎನ್.ಎಸ್.ಪಿ. ಪೋರ್ಟಲ್‌ನಲ್ಲಿ ಓ.ಟಿ.ಆರ್ ಸಂಖ್ಯೆಯನ್ನು ಸೃಜಿಸುವ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಕೋರಲಾಗಿದೆ.

ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಭಾರತ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಅವರು ಅಭಿವೃದ್ಧಿಪಡಿಸಿರುವ ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ (ಎನ್.ಎಸ್.ಪಿ) ನಲ್ಲಿ ಒಂದು ಬಾರಿ ನೋಂದಣಿ (ಒನ್ ಟೈಮ್ ರಿಜಿಸ್ಟರ್) ಸಂಖ್ಯೆಯನ್ನು ರಚಿಸಿ ತದನಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ವೆಬ್‌ಸೈಟ್ ವಿಳಾಸ: https://scholarships.gov.iಟನಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಚೇರಿಯ ಸಹಾಯವಾಣಿ ಸಂ–ಖ್ಯೆ: 080–22261789 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 080532–220045, 9535828236 ಅಥವಾ ಆಯಾ ತಾಲೂಕು ಕಚೇರಿಗಳನ್ನು ಕಚೇರಿ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರಾಜೇಂದ್ರ ಜಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:
9449732000

# ಅನಧಿಕೃತ ನಿವೇಶನಗಳ ಸೃಷ್ಟಿಗೆ ಕಾರಣವಾಗದಂತೆ ಬಿ–ಖಾತಾ ನೀಡದಿರಲು ಮನವಿ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ/ಗುರುಮಠಕಲ್: ಪಟ್ಟಣದ ಸರ್ವೆ ನಂಬರ್ 90 ರಲ್ಲಿ ಬರುವ ಕೆಲವು ನಿವೇಶನಗಳು, ಕೆಲ ಖಾಲಿ ಸ್ಥಳಗಳು ಸಂಪೂರ್ಣ ಪುರಸಭೆಯ ಅಸ್ತಿಯಾಗಿದ್ದು ಮತ್ತು 91 ಸಂಪೂರ್ಣ ಸರಕಾರಿ ಜಮೀನಾಗಿದ್ದು ಈ ಜಮೀನನ್ನು ಸರ್ಕಾರದ ಕೆಲ ಇಲಾಖೆಗಳಿಗೆ ಕಾಯ್ದಿರಿಸಲಾಗಿದೆ, ಸರಕಾರದ ಹೊಸ ಬಿ–ಖಾತಾ ಹಂಚಿಕೆ ಪ್ರಾರಂಭವಾದ ಹಿನ್ನೆಲೆಯಲ್ಲಿ ಕೆಲ ವ್ಯಕ್ತಿಗಳು ತಮ್ಮ ಪ್ರಭಾವ ಬಳಸಿ ವಾಮ ಮಾರ್ಗ ಬಳಸಿ ತಮ್ಮ ಹೆಸರಿಗೆ ಸರಕಾರಿ ನಿವೇಶನಗಳನ್ನು ಮಾಡಿಕೊಳ್ಳುವ ದುರುದ್ದೇಶದಿಂದ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಬಿ– ಖಾತಾ ಪಡೆಯಲು ಪ್ರಯತ್ನಿಸುತ್ತಿದ್ದಾರೆ.

ಈಗಾಗಲೇ ಅವರು ಆ ನಿವೇಶನಗಳನ್ನು ಬಳಕೆ ಮಾಡುತ್ತಿದ್ದು ಕೆಲವರು ಖಾಲಿ ಸ್ಥಳಗಳಲ್ಲಿ ಮನೆಗಳು ಸಹ ನಿರ್ಮಾಣ ಮಾಡಿ ಕೊಂಡಿದ್ದಾರೆ ಇನ್ನು ಕೆಲವರು ಕಬ್ಜಾ ಮಾಡಿ ತಮ್ಮ ಉಪಯೋಗಕ್ಕೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ, ಖೊಟ್ಟಿ ದಾಖಲೆ ಸೃಷ್ಟಿಸಿ ಬಿ – ಖಾತಾ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಸರಕಾರಿ ಸ್ಥಳಗಳನ್ನು ಅತಿಕ್ರಮಿಸಿ ಈಗಾಗಲೇ ಸೃಷ್ಟಿಸಲಾದ ಖೊಟ್ಟಿ ದಾಖಲೆಗಳಿಗೆ ಬಿ–ಖಾತಾ ನೀಡಬೇಕೆಂಬ ನಿರ್ದೇಶನ ಕೂಡಾ ಸರಕಾರ ಮಾಡಿರುವುದಿಲ್ಲ ಅದು ಅಪರಾಧವಾಗಿರುತ್ತದೆ ಹೀಗಿರುವಾಗ ಸರಕಾರ ವಿವಿಧ ಇಲಾಖೆಗಳ ಅನುಕೂಲಕ್ಕಾಗಿ ಕಾಯ್ದಿರಿಸಿದಂತಹ ಸ್ಥಳಗಳ ಸಂರಕ್ಷಣೆ ಸಾರ್ವಜನಿಕರಿಗಿಂತ ಸರಕಾರಿ ಅಧಿಕಾರಿಗಳೇ ಹೆಚ್ಚು ನಿಗಾ ವಹಿಸಬೇಕಾಗಿದೆ ಯಾವುದೇ ಕಾರಣಕ್ಕೂ ಬಿ– ಖಾತಾ ಹಂಚಿಕೆ ಮಾಡಬಾರದು ಎಂದು ಗುರುಮಠಕಲ್ ಪುರಸಭೆಯ ಮುಖ್ಯಾಧಿಕಾರಿಗಳಾದ ಶ್ರೀಮತಿ ಭಾರತಿ ದಂಡೋತಿ ಹಾಗೂ ಗುರುಮಠಕಲ್ ಉಪ ತಹಶೀಲ್ದಾರ್ ನರಸಿಂಹಸ್ವಾಮಿ ಅವರ ಮುಖಾಂತರ ಮಾನ್ಯ ಜಿಲ್ಲಾಧಿಕಾರಿಗಳು ಯಾದಗಿರಿ ಇವರಿಗೆ ಮನವಿಯನ್ನು ಸಂಜೀವ್ ಕುಮಾರ್ ಅಳೆಗಾರ್ ಸಾಮಾಜಿಕ ಕಾರ್ಯಕರ್ತ ಮತ್ತು ರಾಮು ಕೊಡಗಂಟಿ ಸಾಮಾಜಿಕ ಕಾರ್ಯಕರ್ತ ಮನವಿ ನೀಡಿದ್ದಾರೆ.

ಮುಖ್ಯಾಧಿಕಾರಿಗಳಾದ ಶ್ರೀಮತಿ ಭಾರತಿ ದಂಡೋತಿ ಈ ಮನವಿ ಕುರಿತಾಗಿ ಪ್ರತಿಕ್ರಿಯೆ ನೀಡಿ ಗುರುಮಠಕಲ್ ಪಟ್ಟಣದ ಸರ್ವೆ ಸಂಖ್ಯೆ 90ರಲ್ಲಿ ಸರಕಾರಕ್ಕೆ ಸಂಬಂಧಿಸಿದ ಸ್ಥಳಗಳನ್ನು ಅತಿಕ್ರಮಿಸಿದ ಸ್ಥಳಗಳಿಗೆ ಯಾವುದೇ ಕಾರಣಕ್ಕೂ ಬಿ– ಖಾತಾ ನೀಡುವುದಿಲ್ಲ ಹಾಗೂ ಸರ್ವೆ 91 ಸಂಪೂರ್ಣ ಸರಕಾರಿ ಜಮೀನು ಆಗಿದ್ದು, ಅದಕ್ಕೂ ಸಹ ಬಿ–ಖಾತಾ ಆಗಲಿ ಇನ್ನಾವುದಾಗಲಿ ನೀಡುವದಿಲ್ಲ, ಸರಕಾರಿ ಜಮೀನು ವಶ ಪಡಿಸಿಕೊಳ್ಳಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ಮನವಿದಾರರಿಗೆ ಭರವಸೆ ನೀಡಿದ್ದಾರೆ ಎಂದು ಮಲ್ಲಮ್ಮ ನುಡಿ ಪತ್ರಿಕೆಗೆ ತಿಳಿಸಿದ್ದಾರೆ.

## ಸಚಿವ ಪ್ರಿಯಾಂಕ್ ಖರ್ಗೆ ಅವರಂತ ಜನಪ್ರಿಯ ನಾಯಕನನ್ನು ಕುಗ್ಗಿಸುವ ಬಿಜೆಪಿ ಹಾಗೂ ಆರ್ ಎಸ್ ಎಸ್ ತಂತ್ರ ಫಲಿಸದು– ಶಾಸಕ ತುನ್ನೂರು.

ಮಲ್ಲಮ್ಮ ನುಡಿ ವಾರ್ತೆ



ಸಚಿವ ಹಾಗೂ ಡೈನಾಮಿಕ್ ನಾಯಕರೊಬ್ಬರನ್ನು ಕುಗ್ಗಿಸುವ ಅವರ ತಂತ್ರ ಫಲಿಸದು ಎಂದು ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ಟೀಕಿಸಿದ್ದಾರೆ.

ಯಾದಗಿರಿ।ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಬಿಜೆಪಿ ಹಾಗೂ ಆರ್ ಎಸ್ ಎಸ್ ಟಾರ್ಗೆಟ್ ಮಾಡುತ್ತಿದ್ದು, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮೂಲಕ ವೈಯಕ್ತಿಕ ದಾಳಿಗಿಳಿದಿವೆ. ಆದರೆ, ಜನಪರ ಕಾಳಜಿಯುಳ್ಳ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಚಿವ ಪ್ರಿಯಾಂಕ್ ಖರ್ಗೆ ಚಿಕ್ಕ ವಯಸ್ಸಿನಲ್ಲಿಯೇ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಹಾಗೂ ಐಟಿ ಬಿಟಿಯಂತಹ ಪ್ರಮುಖ ಖಾತೆಗಳ ಜವಾಬ್ದಾರಿಯನ್ನು ಹೊತ್ತುಕೊಂಡು ತಮ್ಮ ಜನಪರ ನಿಲುವು ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಹೆಸರು ಮಾಡುತ್ತಿದ್ದಾರೆ. ಇದು ಬಿಜೆಪಿ ಹಾಗೂ ಆರ್ ಎಸ್ ಎಸ್ ಗಳಿಗೆ ಸಹಿಸಲಾಗುತ್ತಿಲ್ಲ. ಹಾಗಾಗಿ ಅವರನ್ನು ವೈಯಕ್ತಿಕವಾಗಿ ನಿಂದಿಸುವ ಉದ್ದೇಶದಿಂದ ನಾರಾಯಣಸ್ವಾಮಿ ಮೂಲಕ ದಾಳಿಗಿಳಿದಿವೆ ಎಂದು ಅವರು ಹರಿಹಾಯ್ದರು. ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯ ಹಾಗೂ ಬುದ್ಧ, ಬಸವ ಹಾಗೂ ಅಂಬೇಡ್ಕರ ಅವರ ತತ್ವ ಚಿಂತನೆಗಳಿಂದ ಪ್ರೇರೇಪಿತವಾದ ಲಕ್ಷಾಂತರ ಕಾರ್ಯಕರ್ತರನ್ನು ಒಳಗೊಂಡ ಪಕ್ಷವಾಗಿದೆ.

# ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 24–ತೋಟಗಾರಿಕೆ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ರೈತ ಫಲಾನುಭವಿಗಳಿಗೆ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

*ವಿವಿಧ ಯೋಜನೆಗಳು:*

*ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆ:*

ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ (ಬಾಳೆ,ಅಂಜೂರ,ದಾಳಿಂಬೆ,ನುಗ್ಗೆ,ಪೇರಲ, ಪಪ್ಪಾಯ,ತೆಂಗು,ಡ್ರಾಗನ್ ಫ್ರೂಟ್,ನೇರಳೆ, ಸಪೋಟ, ಮಾವು, ಸೀತಾಫಲ್, ಹುಣಸೆ, ಕರಿಬೇವು, ಮತ್ತು ಗುಲಾಬಿ ಹಾಗೂ ಇತರೆ) ಬೆಳೆಗಳಿಗೆ ಮತ್ತು ಬದುಗಳಲ್ಲಿ ತೆಂಗು ಸಸಿ ನಾಟಿ,ಕೃಷಿ ಹೊಂಡ,ಬದುಗಳ ನಿರ್ಮಾಣ, ಕೊಳವೆ ಬಾವಿ ಮರುಪೂರಣ ಘಟಕ ಇತ್ಯಾದಿ ಅನುಷ್ಠಾನಗೊಳಿಸಲಾಗುವುದು.

*ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ:*

ಹೊಸ ಪ್ರದೇಶ ವಿಸ್ತರಣೆ, ಕೃಷಿಹೊಂಡ, ಈರುಳ್ಳಿ ಶೇಖರಣಿ ಘಟಕ, ನೆರಳು ಪರದೆ, ಪ್ಯಾಕ್‌ಹೌಸ್ ಮತ್ತು ತಳ್ಳುವ ಗಾಡಿ ವಿವಿಧ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ ಶೇ.50 ರಷ್ಟು ಲಭ್ಯತೆಯ ಮೇರೆಗೆ ಸಹಾಯಧನ ನೀಡಲಾಗುತ್ತದೆ.

*ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ–ಹನಿ ನೀರಾವರಿ:*

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ–ಹನಿ ನೀರಾವರಿ ಕಾರ್ಯಕ್ರಮದಡಿ ಸಹಾಯಧನ ನೀಡಲಾಗುತ್ತದೆ. ಹೊಸದಾಗಿ ಅಳವಡಿಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಶೇ.90 ರಂತೆ ಸಹಾಯಧನ ವಿತರಿಸಲಾಗುವುದು.

*ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ–ತಾಳೆ ಬೆಳೆ ಯೋಜನೆ:*

2025–26ನೇ ಸಾಲಿನಲ್ಲಿ ತಾಳೆಬೆಳೆ ಬೆಳೆಯ ಆಸಕ್ತಿ ಇರುವ ರೈತರು ಕೇಂದ್ರ ಪುರಸ್ಕೃತ ಖಾದ್ಯ ತೈಲ ಅಭಿಯಾನ –ತಾಳೆ ಬೆಳೆ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಪ್ರತೀ ಹೆಕ್ಟೇರ್‌ಗೆ ಶೇ.50 ರಂತೆ ರೂ.29000/–, ಮೊದಲನೇ ವರ್ಷದಿಂದ ನಾಲ್ಕು ವರ್ಷಗಳ ಬೇಸಾಯ ನಿರ್ವಹಣೆ ಕಾರ್ಯಕ್ರಮಕ್ಕೆ, ಪ್ರತೀ ವರ್ಷ ನಿರ್ವಹಣೆಗೆ ರೂ.5250/– ಪ್ರತೀ ಹೆಕ್ಟೇರ್‌ಗೆ ಸಹಾಯಧನ ನೀಡಲಾಗುವುದು.

ಅಂತರ ಬೆಳೆಗೆ ರೂ.5250/–, ಎತ್ತರವಾದ ತಾಳೆ ಮರಗಳಿಂದ ಹಣ್ಣು ಕಟಾವು ಮಾಡಲು ರೂ.1000/– ಪ್ರತೀ ಟನ್‌ಗೆ (ಗರಿಷ್ಠ 60ಟನ್ ಮಾತ್ರ) ಸಹಾಯಧನ, ಡೀಸೆಲ್ ಪಂಪ್ ಸೆಟ್ ಕೊಳ್ಳಲು ರೂ.8000/–, ಕೊಳವೆ ಬಾವಿಗೆ ರೂ.50000/– ಸಹಾಯಧನ, ತಾಳೆ ಹಣ್ಣು ಕಟಾವು ಮಾಡುವ ಉಪಕರಣ, ಮೊಟೊರೈಸ್ಡ್ ಚಿಸೆಲ್ ರೂ.15000/–, ತಾಳೆ ಹಣ್ಣು ಕಟಾವು ಏಣಿ ರೂ.5000/–, ಚಾಫ್ ಕಟ್ಟರ್ ರೂ.50000/– , ಟ್ರಾಕ್ಟರ್ ಟ್ರೋಲಿ ಖರೀದಿಸಲು ರೂ.160000/– ಶೇ.50 ರಂತೆ ಸಹಾಯಧನ ಸೌಲಭ್ಯ ನೀಡಲಾಗುವುದು.

ಮೇಲ್ಕಂಡ ಎಲ್ಲಾ ಯೋಜನೆಗಳಡಿ ಅಲ್ಪಸಂಖ್ಯಾತರಿಗೆ ಶೇ.15, ವಿಕಲಾಂಗಚೇತನರಿಗೆ ಶೇ.5 ಮತ್ತು ರೈತ ಮಹಿಳೆಯರಿಗೆ ಶೇ.33 ರಷ್ಟು ಈ ಯೋಜನೆಗಳಡಿ ಅನುದಾನ ಮೀಸಲಿರಿಸಲಾಗಿದ್ದು, ಆಸಕ್ತ ರೈತ ಫಲಾನುಭವಿಗಳು ಈ ಯೋಜನೆಗಳ ಸೌಲಭ್ಯ ಸದುಪಯೋಗ ಪಡೆದುಕೊಳ್ಳಬೇಕು.

ಆಸಕ್ತ ತೋಟಗಾರಿಕೆ ರೈತರು ಆಯಾ ತಾಲ್ಲೂಕು ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೈಸೂರು: ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.24:– ಮೈಸೂರಿನಲ್ಲಿ ವಿಶೇಷಚೇತನರಿಗೆ ಡಿಪ್ಲೋಮಾ ಮಟ್ಟದಲ್ಲಿ ತಾಂತ್ರಿಕ ಶಿಕ್ಷಣ ಸೌಲಭ್ಯ ಕಲ್ಪಿಸುವ ಸುದ್ದೇಶದಿಂದ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಸ್ಥಾಪನೆ ಮಾಡಿದ್ದು, 2025–26ನೇ ಸಾಲಿಗೆ ಮೂರು ವರ್ಷಗಳ ಅವಧಿಯ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ (ಅಖಿಲ ಭಾರತ ಮಟ್ಟದಲ್ಲಿ) ವಿಶೇಷಚೇತನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನುದಾನಿತ ಕೋರ್ಸುಗಳ ವಿವರ: ಆರ್ಕಿ–ಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ.

ಅನುದಾನ ರಹಿತ ಕೋರ್ಸುಗಳ ವಿವರ: ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್, ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಾಜಿ, ಎಲೆಕ್ಟಿಕಲ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ.

ಅರ್ಜಿಗಳನ್ನು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಛಯ, ಮೈಸೂರು–570006 ವಿಳಾಸದಿಂದ (ಸಾಮಾನ್ಯ ವರ್ಗದ ಅಭ್ಯರ್ಥಿಗಳು 100 ರೂ. ಖಅ/ಖಖಿ/ಅ–ಖ ವರ್ಗದವರಿಗೆರ 50 ರೂ.) ನಗದು ಅಥವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಪಡೆಯಬಹುದು ಅಥವಾ ವೆಬ್‌ಸೈಟ್ ಮೂಲಕ ಡೌನಲೋಡ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 16–06–2025 ರೊಳಗೆ ತಲುಪಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ತಿತಿತಿ.ಧಿಖಜಚಿ.ಠಡಿರ ಅಥವಾ ಮೊಬೈಲ್: 9844644937 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಶ್ರೀ ಹನುಮಾನ ದೇವಸ್ಥಾನ, ಚಳಕಾಪುರ, ಬೀದರ್ ಇತಿಹಾಸ ಮತ್ತು ಮಹಿಮೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.24:-ಚಲ್ಕಾಪುರವು ಕರ್ನಾಟಕದ ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನಲ್ಲಿರುವ ಒಂದು ಗ್ರಾಮವಾಗಿದೆ. ಚಲ್ಕಾಪುರವು ಗೋದಾವರಿ ನದಿಯ ಶಾಖೆಯ (ಉಪನದಿ) ಮಂಜ್ರಾ(ಕಾರಂಜಾ) ಎಂಬ ಸುಂದರವಾದ ನದಿಯ ಸಮೀಪವಿರುವ ಒಂದು ಚಿಕ್ಕ, ಆದರೆ ಅತ್ಯಂತ ಸುಂದರವಾದ ಮತ್ತು ಪವಿತ್ರ ಗ್ರಾಮವಾಗಿದೆ. ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನಲ್ಲಿರುವ ಚಳಕಾಪುರ ಶ್ರೀ ಹನುಮಾನ್ ದೇವಸ್ಥಾನವು ಬಹಳ ಐತಿಹಾಸಿಕ ಮತ್ತು ಪೌರಾಣಿಕ ಮಹತ್ವವನ್ನು ಹೊಂದಿದೆ.




**ಇತಿಹಾಸ ಮತ್ತು ಹಿನ್ನೆಲೆ:**

**ರಾಮಾಯಣ ಕಾಲದ ನಂಟು:** ಈ ದೇವಸ್ಥಾನದ ಇತಿಹಾಸವು ರಾಮಾಯಣ ಕಾಲಕ್ಕೆ ಸಂಬಂಧಿಸಿದೆ ಎಂದು ನಂಬಲಾಗಿದೆ. ಸೀತಾನ್ವೇಷಣೆಯ ಸಮಯದಲ್ಲಿ ಶ್ರೀರಾಮ ಮತ್ತು ಲಕ್ಷ್ಮಣರು ಈ ಪ್ರದೇಶದ ಮೂಲಕ ಹಾದು ಹೋಗುವಾಗ, ಇಲ್ಲಿ ಚಾಳಿಕೆ ಮತ್ತು ಚಾಳಿಕಾಸುರ ಎಂಬ ರಾಕ್ಷಸ ದಂಪತಿಗಳು ವಾಸಿಸುತ್ತಿದ್ದರು. ಚಾಳಿಕಾಸುರ ದುಷ್ಟನಾಗಿದ್ದರೂ, ಅವನ ಪತ್ನಿ ಚಾಳಿಕಾದೇವಿ ಶಿವ ಮತ್ತು ವಿಷ್ಣುವಿನ ಪರಮ ಭಕ್ತೆಯಾಗಿದ್ದಳು.

ಶ್ರೀ ಕ್ಷೇತ್ರ ಕಟೀಲು ದುರ್ಗಾಪರಮೇಶ್ವರೀ ದೇವಸ್ಥಾನ ಅನುಭವಿಕ ಶ್ರೇಷ್ಠ ವಿದ್ಯೆಗಳನ್ನು ಬೋಧಿಸುವ ದೈವಜ್ಞ ಪ್ರಧಾನ್ ತಾಂತ್ರಿಕ್ ಜ್ಞಾನೇಶ್ವರ್ ರಾವ್ ತಂತ್ರಿ ನಿಮ್ಮ ಜೀವನದ ಯಾವುದೇ ಗುಪ್ತ,ಪ್ರೀತಿ–ಪ್ರೇಮ ದಾಂಪತ್ಯ,ವೈವಾಹಿಕ,ವ್ಯವಹಾರಿಕ ಎಂತಹ ಸಮಸ್ಯೆಗಳೇ ಇದ್ದರೂ ಆ ಸಮಸ್ಯೆಗಳಿಗೆ ದೈವಿಕ ವಿಧಿವಿಧಾನದ ಶಾಸ್ತ್ರೋಪಾದ ಮಾರ್ಗವನ್ನು ಕೆಲವೇ ಗಂಟೆಯಲ್ಲಿ ಫೋನಿನ ಮೂಲಕ ಶಾಶ್ವತವಾಗಿ ಪರಿಹಾರ ತಿಳಿಸಿಕೊಡುತ್ತಾರೆ ತಪ್ಪದೆ ಕರೆ ಮಾಡಿ 85489 98564

ದೈವಜ್ಞ ಪ್ರಧಾನ್ ತಾಂತ್ರಿಕ್ ಜ್ಞಾನೇಶ್ವರ್ ರಾವ್ ತಂತ್ರಿ

ಧಾರ್ಮಿಕಚಿಂತಕರು ಮತ್ತು ಸಲಹೆಗಾರರು

ಶ್ರೀಕ್ಷೇತ್ರಕಟೀಲುದುರ್ಗಾಪರಮೇಶ್ವರೀ ದೇವಸ್ಥಾನ

ಜ್ಯೋತಿಷ್ಯಶಾಸ್ತ್ರತಜ್ಞರು 8548998564

ಸಂಜೀವಿನಿ ಪರ್ವತದ ಭಾಗ: ಲಕ್ಷ್ಮಣನು ಮೇಘನಾದನ ಶಕ್ತಿ ಅಸ್ತ್ರದಿಂದ ಮೂರ್ಛೆ ಹೋದಾಗ, ಸಂಜೀವಿನಿ ಸಸ್ಯವನ್ನು ತರಲು ಹನುಮಂತನು ದ್ರೋಣಾಚಲ ಪರ್ವತವನ್ನು ಹೊತ್ತು ಆಕಾಶ ಮಾರ್ಗವಾಗಿ ಲಂಕೆಯೆಡೆಗೆ ಹಾರುತ್ತಿದ್ದಾಗ, ಅವನ ಕೈಯಿಂದ ಆ ಪರ್ವತದ ಒಂದು ಚಿಕ್ಕ ಭಾಗ ಈ ಕ್ಷೇತ್ರದಲ್ಲಿ ಬಿದ್ದಿತು. ಇದನ್ನೇ ಇಂದು 'ಸಂಜೀವಿನಿ ಗುಡ್ಡ' ಎಂದು ಕರೆಯಲಾಗುತ್ತದೆ.

ಚಾಳಿಕಾದೇವಿಯ ಭಕ್ತಿ: ಚಾಳಿಕಾದೇವಿಯು ತನ್ನ ಪತಿಯ ಮರಣದ ನಂತರ ಈ ಸಂಜೀವಿನಿ ಗುಡ್ಡದಲ್ಲಿ ಗವಿಯೊಂದನ್ನು ಕೊರೆದು–ಕೊಂಡು ವಾಸಿಸುತ್ತಿದ್ದಳು. ರಾಮನ ಆದೇಶದಂತೆ ಹನುಮಂತನು ಚಾಳಿಕಾದೇವಿಯ ಬಳಿಗೆ ಬಂದು, ರಾಮನು ಮತ್ತೆ ಬರುವುದಾಗಿ ತಿಳಿಸುತ್ತಾನೆ. ಹನುಮಂತನ ದರ್ಶನದಿಂದ ಸಂತುಷ್ಟಳಾದ ಚಾಳಿಕಾದೇವಿ, ರಾಮನು ಬರುವವರೆಗೂ ಹನುಮಂತನು ಇಲ್ಲೇ ನೆಲೆಸಬೇಕೆಂದು ಬೇಡಿಕೊಂಡಳು. ಹನುಮಂತನು ಅವಳ ಮಾತಿಗೆ ಕಟ್ಟುಬಿದ್ದು, ಈ ಕ್ಷೇತ್ರದಲ್ಲಿ ನೆಲೆಸಿದನು.

ಹನುಮಂತನ ದಿವ್ಯ ಜಾಗೃತಾಂಶ: ರಾವಣವಧೆಯ ನಂತರ ರಾಮನು ಸೀತೆಯೊಂದಿಗೆ ಅಯೋಧ್ಯೆಗೆ ಹಿಂದಿರುಗಿದ ನಂತರ, ಚಾಳಿಕಾದೇವಿಗೆ ದರ್ಶನ ನೀಡಲು ಚಳಕಾಪುರಕ್ಕೆ ಬರುತ್ತಾನೆ. ಆಗ ಚಾಳಿಕಾದೇವಿಯು ಈ ಕ್ಷೇತ್ರದ ಜನರ ಉದ್ಧಾರಕ್ಕಾಗಿ ಹನುಮಂತನ ದಿವ್ಯ ಜಾಗೃತಾಂಶವು ಇಲ್ಲೇ ನೆಲೆಸಿರಬೇಕೆಂದು ರಾಮನಲ್ಲಿ ಮತ್ತು ಹನುಮಂತನಲ್ಲಿ ಬೇಡಿಕೊಂಡಳು. ಈ ಬೇಡಿಕೆಯನ್ನು ರಾಮ ಮತ್ತು ಹನುಮಂತರು ಸಂತೋಷದಿಂದ ಒಪ್ಪಿಕೊಂಡ ಕಾರಣ, ಇಲ್ಲಿ ಹನುಮಂತನ ದಿವ್ಯ ಜಾಗೃತಾಂಶ ಪ್ರತಿಷ್ಠಾಪನೆಯಾಯಿತು. ಈ ಕಾರಣದಿಂದಲೇ ಈ ಕ್ಷೇತ್ರಕ್ಕೆ ಚಾಳಿಕಾದೇವಿಯ ಹೆಸರಿನಿಂದ 'ಚಳಕಾಪುರ' ಎಂಬ ಹೆಸರು ಬಂದಿದೆ.

ದೇವಾಲಯದ ನಿರ್ಮಾಣ: ಸುಮಾರು 3000 ವರ್ಷಗಳ ಹಿಂದೆ ಹೇಮಾಡಪಂತಿ ರಾಕ್ಷಸರು ಒಂದೇ ರಾತ್ರಿಯಲ್ಲಿ ಈ ದೇವರಿಗೆ ಕಲ್ಲಿನ ಗರ್ಭಗುಡಿಯನ್ನು ನಿರ್ಮಿಸಿದರು ಎಂದು ನಂಬಲಾಗಿದೆ. ನಂತರದ ಕಾಲಘಟ್ಟಗಳಲ್ಲಿ, ಸುಮಾರು 1000 ವರ್ಷಗಳ ಹಿಂದೆ ಕಲ್ಲಿನ ಮಂಟಪ, 300 ವರ್ಷಗಳ ಹಿಂದೆ ಗಚ್ಚಿನ ಮಂಟಪ, ಮತ್ತು 150 ವರ್ಷಗಳ ಹಿಂದೆ ತಗಡಿನ ಮಂಟಪ ಹಾಗೂ ಧರ್ಮಶಾಲೆಗಳನ್ನು ಭಕ್ತರು ನಿರ್ಮಿಸಿದರು.

**ಔರಂಗಜೇಬನ ಪ್ರಸಂಗ:** 17ನೇ ಶತಮಾನದಲ್ಲಿ ಮೊಘಲ್ ರಾಜಕುಮಾರ ಔರಂಗಜೇಬನು ಈ ಭಾಗಕ್ಕೆ ಭೇಟಿ ನೀಡಿದಾಗ, ಇಲ್ಲಿಯ ಜನರು ಹನುಮಂತನು ಜೀವಂತ ದೇವರೆಂದು ತಿಳಿಸಿದರು. ಪರೀಕ್ಷಾರ್ಥವಾಗಿ ಔರಂಗಜೇಬನು ತನ್ನ ಖಡ್ಗದಿಂದ ಶ್ರೀಮೂರ್ತಿಯ ಮೇಲೆ ಎರಡು ಬಾರಿ ಪ್ರಹಾರ ಮಾಡಿದಾಗ, ಆ ಪ್ರಹಾರಗಳು ಮೂರ್ತಿಯ ಅಭಯಹಸ್ತಕ್ಕೆ ತಾಗಿ, ಮೂರ್ತಿಯಿಂದ 'ಭೂಭೂಕ್ಕಾರ' ಶಬ್ದ ಬಂದಿತು ಎಂದು ಪ್ರತೀತಿ ಇದೆ.

**ಮಹಿಮೆ ಮತ್ತು ಮಹತ್ವ:**

ಉದ್ಭವ ಮೂರ್ತಿ: ಚಳಕಾಪುರ ಹನುಮಂತ ದೇವಾಲಯವನ್ನು ಉದ್ಭವ ಮೂರ್ತಿ ಎಂದು ಕರೆಯಲಾಗುತ್ತದೆ.

ಉತ್ತರಾಭಿಮುಖ ದೇವಸ್ಥಾನ, ದಕ್ಷಿಣಾಭಿಮುಖ ಮೂರ್ತಿ: ದೇಗುಲದ ಬಾಗಿಲು ಉತ್ತರಾಭಿಮುಖವಾಗಿದ್ದರೆ, ಆಂಜನೇಯ ಸ್ವಾಮಿಯ ಮುಖ ದಕ್ಷಿಣಾಭಿಮುಖವಾಗಿದೆ. ಇದು ಕರ್ನಾಟಕದಲ್ಲಿಯೇ ಅತ್ಯಂತ ಸುಂದರವಾದ ಮೂರ್ತಿಗಳಲ್ಲಿ ಒಂದಾಗಿದೆ.

**ಸಂಜೀವಿನಿ ಪರ್ವತ:** ದೇವಾಲಯದ ಸಮೀಪವಿರುವ ಬೆಟ್ಟವನ್ನು ಸಂಜೀವಿನಿ ಪರ್ವತ ಎಂದು ಕರೆಯಲಾಗುತ್ತದೆ. ಇಲ್ಲಿ ಚಾಳಕಾದೇವಿ ನೆಲೆಸಿದ್ದು, ಗಣೇಶ ಮತ್ತು ಶಿವನ ಮೂರ್ತಿಗಳು ಸಹ ಇಲ್ಲಿವೆ. ಈ ಬೆಟ್ಟದಲ್ಲಿರುವ ಮಣ್ಣು ಕೆಂಪಾಗಿದ್ದು, ರೋಗಗಳನ್ನು ವಾಸಿ ಮಾಡುವ, ಬೇಡಿದ್ದನ್ನು ಕರುಣಿಸುವ ಶಕ್ತಿ ಹೊಂದಿದೆ ಎಂದು ಭಕ್ತರು ನಂಬುತ್ತಾರೆ.

ಭಕ್ತರ ಆಕರ್ಷಣೆ: ಪ್ರತಿದಿನ ತ್ರಿಕಾಲ ಪೂಜೆ ನಡೆಯುವ ಈ ದೇವಾಲಯಕ್ಕೆ ದೇಶದ ವಿವಿಧ ಭಾಗಗಳಿಂದ, ವಿಶೇಷವಾಗಿ ದೀಪಾವಳಿ ಮತ್ತು ದವನ ಹುಣ್ಣಿಮೆಯ (ಹನುಮಾನ್ ಜಯಂತಿ) ಸಮಯದಲ್ಲಿ ನಡೆಯುವ ಜಾತ್ರೆಗೆ ಸಾವಿರಾರು ಭಕ್ತರು ಆಗಮಿಸಿ ದೇವರ ದರ್ಶನ ಪಡೆಯುತ್ತಾರೆ.

**ಇಷ್ಟಾರ್ಥ ಸಿದ್ಧಿ:** ಇಲ್ಲಿಯ ಹನುಮಂತ ದೇವರು ಭಕ್ತರ ಕಷ್ಟಕಾರ್ಪಣ್ಯಗಳನ್ನು ನಿವಾರಿಸಿ, ಇಷ್ಟಾರ್ಥಗಳನ್ನು ಪೂರೈಸುತ್ತಾನೆ ಎಂಬುದು ಭಕ್ತರ ಅಚಲವಾದ ನಂಬಿಕೆಯಾಗಿದೆ. ಹರಕೆ ಹೊತ್ತವರು ಇಲ್ಲಿ ತೆಂಗಿನಕಾಯಿ ಕಟ್ಟಿ, ಹರಕೆ ಈಡೇರಿದ ನಂತರ ಅದನ್ನು ತೆಗೆದುಕೊಂಡು ಹೋಗುತ್ತಾರೆ.

ಒಟ್ಟಾರೆ, ಚಳಕಾಪುರದ ಶ್ರೀ ಹನುಮಾನ್ ದೇವಸ್ಥಾನವು ರಾಮಾಯಣ ಕಾಲದಿಂದಲೂ ತನ್ನ ಪ್ರಾಚೀನತೆ ಮತ್ತು ಪೌರಾಣಿಕ ಹಿನ್ನೆಲೆಯನ್ನು ಉಳಿಸಿಕೊಂಡು, ಭಕ್ತರ ಅಪಾರ ನಂಬಿಕೆ ಮತ್ತು ಶ್ರದ್ಧೆಯ ಕೇಂದ್ರವಾಗಿ ಇಂದಿಗೂ ಬೆಳಗುತ್ತಿದೆ.

ದೇಸಿ ತಳಿಗಳ ಸಂರಕ್ಷಣೆ ಉತ್ತೇಜನ ಕಾರ್ಯಕ್ರಮಕ್ಕೆ

# ಮೇ.31 ರೊಳಗಾಗಿ ಹೆಸರು ನೋಂದಾಯಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಮೇ.24:– ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ಅಧಿಸೂಚಿತ ಪ್ರಭೇಧಗಳಿಗಿಂತ ಹೆಚ್ಚು ಪೋಷಕಾಂಶಗಳು ಸಮೃದ್ಧವಾಗಿರುವ ದೇಸಿ ತಳಿಗಳ ಸಂರಕ್ಷಣೆಗೆ ರಾಜ್ಯ ಸರ್ಕಾರ ಮುಂದಾಗಿದ್ದು, ದೇಸಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರು ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ತಮ್ಮ ಸ್ವ–ವಿವರಗಳೊಂದಿಗೆ ತಮ್ಮ ವ್ಯಾಪ್ತಿಯ ಹೋಬಳಿ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಮೇ.31 ರೊಳಗಾಗಿ ಹೆಸರು ನೋಂದಾಯಿಸಿಕೊಳ್ಳುವಂತೆ ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಣ್ಮರೆಯಾಗುತ್ತಿರುವ ದೇಸಿ ತಳಿಗಳನ್ನು ಸಂರಕ್ಷಿಸುವ ಜೊತೆಗೆ ಆಯಾ ಸ್ಥಳೀಯ ಪ್ರದೇಶಕ್ಕೆ ಅನುಗುಣವಾಗಿ ಸೂಕ್ತ ತಳಿಗಳನ್ನು ಗುರುತಿಸಿ ಸಂರಕ್ಷಣೆ ಮಾಡುವುದು. ಗುರುತಿಸಿದ ದೇಸಿ ತಳಿಗಳನ್ನು ಕೃಷಿ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಅಭಿವೃದ್ಧಿಪಡಿಸಿ ಬಿಡುಗಡೆ ಮಾಡುವುದು. ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವುದು ಮತ್ತು ದೇಸಿ ತಳಿಗಳ ಜನಪ್ರಿಯತೆಗೆ ಬೆಂಬಲ ನೀಡುವುದು ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಆಯ್ಕೆಯಾದ ಬೆಳೆಗಳು: ಭತ್ತ, ರಾಗಿ, ಜೋಳ, ತೊಗರಿ, ಹುರುಳಿ, ಅವರೆ, ಅಲಸಂದೆ, ಮಡಕಿಕಾಳು, ಹುಚ್ಚೆಳ್ಳು, ಕುಸುಬೆ, ಎಳ್ಳು, ನವಣೆ, ಸಾಮೆ, ಊದಲು, ಕೊರಲೆ, ಹಾರಕ, ಬರಗು, ಹೆಸರು ಮತ್ತು ಗೋದಿ, ಮೆಣಸಿನಕಾಯಿ ಹಾಗೂ ಸಲಹಾ ಸಮಿತಿ ಶಿಫಾರಸ್ಸು ಮಾಡುವ ಇತರೆ ಬೆಳೆಗಳು ಕಾರ್ಯಕ್ರಮದಡಿ ಆಯ್ಕೆಯಾಗಿವೆ.

ಪರಿಗಣಿಸುವ ಗುಣಲಕ್ಷಣಗಳು: ತಲೆಮಾರುಗಳಿಂದ ರೈತರು ಬೆಳೆದ ಸಾಂಪ್ರದಾಯಿಕ ಪ್ರಬೇಧಗಳು ಸ್ಥಳೀಯ ಕೃಷಿ ಪದ್ಧತಿ ಮತ್ತು ಪ್ರದೇಶಕ್ಕೆ ಹೊಂದಿಕೊಂಡು ವಿಶಿಷ್ಟವಾದ ಗುಣಲಕ್ಷಣ ಹೊಂದಿರಬೇಕು. ಪಿಪಿವಿಎಫ್ ಆರ್‌ಎ ( Protection of Plant Varieties and Farmers Right Act 2001 ) ಅಡಿಯಲ್ಲಿ ನೋಂದಾಯಿಸಿರಬಹುದು. ಆದರೆ, ಅಧಿಸೂಚಿತ ತಳಿಯಾಗಿರಬಾರದು. ಜಿಲ್ಲೆಯಲ್ಲಿ ದೇಸಿ ತಳಿಗಳ ಸಂರಕ್ಷಣೆ ಮಾಡುತ್ತಿರುವ ರೈತರನ್ನು ಇಲಾಖೆ ವತಿಯಿಂದ ಗುರುತಿಸಿ ಮೂಲ ಸಮೀಕ್ಷೆಯನ್ನು ಕೆ–ಕಿಸಾನ್ ಮೊಬೈಲ್ ಆಪ್ಲಿಕೇಷನ್‌ನಲ್ಲಿ ದಾಖಲಿಸಲಾಗುತ್ತಿದೆ. ಅರ್ಹ ರೈತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಒಪ್ಪಿಗೆ ಪತ್ರ ನೀಡಬೇಕು. ಬೀಜ ಬ್ಯಾಂಕ್‌ನಲ್ಲಿರಿಸಲು ರೈತರು ಕಡ್ಡಾಯವಾಗಿ ಅಗತ್ಯ ಪ್ರಮಾಣದ ದೇಸಿ ತಳಿಗಳ ಬೀಜಗಳನ್ನು ನೀಡಲು ಸಿದ್ಧರಿರಬೇಕು, ಹೆಚ್ಚಿನ ಮಾಹಿತಿಗಾಗಿ ರೈತರು ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮೇ.25ರಂದು ಮುಂಗಾರು ಬೀಜ ದಿನೋತ್ಸವ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೆ 24–: ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಬೀಜ ಘಟಕದ ಆವರಣದಲ್ಲಿ ಮೇ.25ರ ಬೆಳಿಗ್ಗೆ 10 ಗಂಟೆಗೆ ಮುಂಗಾರು ಬೀಜ ದಿನೋತ್ಸವ–2025 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿ ಡಾ.ಅರುಣಕುಮಾರ್ ಹೊಸಮನಿ ಅವರು ಕೋರಿದ್ದಾರೆ.

ಮುಂಗಾರು ಬೀಜ ದಿನೋತ್ಸವ–2025ರ ಕಾರ್ಯಕ್ರಮದಲ್ಲಿ ಮುಂಗಾರು ಬೆಳೆಗಳ ಬಗ್ಗೆ ಸಮಗ್ರ ತಾಂತ್ರಿಕ ಮಾಹಿತಿ, ಸುಧಾರಿತ ಬೀಜೋತ್ಪಾದನಾ ಮತ್ತು ರೈತರ ಸಹಬಾಗಿತ್ವದ ಬೀಜೋತ್ಪಾದನಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ, ವಿವಿಧ ವಿಷಯ ತಜ್ಞರು ಮತ್ತು ರೈತರ ಜೊತೆ ಚರ್ಚೆ, ಮುಂಗಾರು ಬೆಳೆಗಳ ಸುಧಾರಿತ ತಳಿಗಳ ಬೀಜ, ಜೈವಿಕ ಗೊಬ್ಬರ, ಕೀಟನಾಶಕಗಳು, ಅರಣ್ಯ, ತೋಟಗಾರಿಕೆ ಗಿಡಗಳ ಪ್ರದರ್ಶನ ಮತ್ತು ಮಾರಾಟ ಕುರಿತು ಮಾಹಿತಿ ನೀಡಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಸ್ಯೆಯೇ ಸಂಶೋಧನೆಯ ಬೀಜ: ಡಾ. ಎಸ್.ಎಂ. ಶಶಿಧರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 24: "ಸಮಸ್ಯೆಯೇ ಸಂಶೋಧನೆಯ ಬೀಜವಾಗಿದೆ. ಪ್ರತಿಯೊಂದು ಸಮಸ್ಯೆಯೂ ಹೊಸ ಆವಿಷ್ಕಾರಕ್ಕೆ ದಾರಿಯಾಗಬಲ್ಲದು," ಎಂದು ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಮುನಿರಾಬಾದ್ ಕೇಂದ್ರದ ಅಧ್ಯಕ್ಷ ಡಾ. ಎಸ್.ಎಂ. ಶಶಿಧರ ಅಭಿಪ್ರಾಯಪಟ್ಟರು.

ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು (ಆರ್.ವೈ.ಎಂ.ಇ.ಸಿ.)ನ ಮೆಕಾನಿಕಲ್ ಇಂಜಿನಿಯರಿಂಗ್ ವಿಭಾಗ ಮತ್ತು ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಮುನಿರಾಬಾದ್ ಕೇಂದ್ರದ ಸಹಯೋಗದೊಂದಿಗೆ ಇಂದು ಆಯೋಜಿಸಿದ ಮೂರು ದಿನಗಳ ಸಂಶೋಧನಾ ವಿಧಾನಗಳ ಕಾರ್ಯಾಗಾರದ ಉದ್ಘಾಟನೆಯಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

"ಪರಿಸರ ಮಾಲಿನ್ಯದಂತಹ ಸಮಸ್ಯೆಗಳು ಎಲೆಕ್ಟ್ರಿಕ್ ವಾಹನಗಳ ಸಂಶೋಧನೆಗೆ ದಾರಿಯಾದವು. ಅಂಗವಿಕಲರಿಗೆ ನಡೆದಾಡುವ ಕಷ್ಟವನ್ನು ಪರಿಹರಿಸಲು ವೀಲ್‌ಚೇರ್ ಸಂಶೋಧನೆಯಾಯಿತು. ಪ್ರತಿಯೊಂದು ಆವಿಷ್ಕಾರವೂ ಸಮಸ್ಯೆಯಿಂದ ಹುಟ್ಟುತ್ತದೆ. ಸಂಶೋಧನೆ ಎಂದರೆ ಸಮಸ್ಯೆಗಳಿಗೆ ವೈಜ್ಞಾನಿಕ ಪರಿಹಾರ ಕಂಡುಹಿಡಿಯುವ ಕಲೆಯಾಗಿದೆ. ಸಂಶೋಧನಾ ಮನೋಭಾವವಿಲ್ಲದ ಇಂಜಿನಿಯರ್ ಎಂಜಿನ್ ಇಲ್ಲದ ವಾಹನದಂತೆ," ಎಂದು ಡಾ. ಎಸ್.ಎಂ. ಶಶಿಧರ ಅಭಿಪ್ರಾಯಪಟ್ಟರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ವಿ.ವಿ. ಸಂಘದ ಉಪಾಧ್ಯಕ್ಷ ಶ್ರೀ ಜಾನೆಕುಂಟೆ ಬಸವರಾಜ ಮಾತನಾಡಿ, "ಒಬ್ಬ ವಿದ್ಯಾರ್ಥಿಯಾದರೂ ಈ ಕಾರ್ಯಾಗಾರದಿಂದ ಸ್ಪೂರ್ತಿಗೊಂಡು ಸಂಶೋಧನೆಯ ಪಥಕ್ಕೆ ಕಾಲಿಟ್ಟರೆ, ಅದೇ ಈ ಕಾರ್ಯಕ್ರಮದ ಸಾರ್ಥಕತೆ" ಎಂದರು.

ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿ, ಬೆಂಗಳೂರಿನ ಬಿಎಂಎಸ್ ಇಂಜಿನಿಯರಿಂಗ್ ಕಾಲೇಜಿನ ಡಾ. ಕಮ್ಮಾರ ಕಿಶೋರ್ ಕುಮಾರ್ ಮಾತನಾಡಿ, "ವಿದ್ಯಾರ್ಥಿಗಳ ಪ್ರಾಜೆಕ್ಟ್‌ಗಳು ಕೇವಲ ಅಂಕಗಳಿಗಾಗಿ ಇರಬಾರದು; ಅವು ಭವಿಷ್ಯದ ತಂತ್ರಜ್ಞಾನದ ತಳಹದಿಯಾಗಬೇಕು" ಎಂದರು. ಕಾರ್ಯಾಗಾರದಲ್ಲಿ ಮೆಕಾನಿಕಲ್ ವಿಭಾಗದ ಪ್ರಾಧ್ಯಾಪಕ ಡಾ. ವೀರಭದ್ರಪ್ಪ ಆಲಗೂರು ಮಾತನಾಡಿ, "ಇಂತಹ ಕಾರ್ಯಾಗಾರಗಳು ಯುವ ಸಂಶೋಧಕರಿಗೆ ದಾರಿದೀಪವಾಗುತ್ತವೆ. ಸಂಶೋಧನೆಯ ಅವಕಾಶಗಳು ಎಲ್ಲೆಡೆ ಇವೆ, ಆದರೆ ಅವುಗಳನ್ನು ಗುರುತಿಸಲು ಆವಿಷ್ಕಾರಕ ದೃಷ್ಟಿಯ ಅಗತ್ಯವಿದೆ," ಎಂದರು.

ಪ್ರಾಂಶುಪಾಲ ಡಾ. ಹನುಮಂತರೆಡ್ಡಿ, ಉಪ ಪ್ರಾಂಶುಪಾಲರು, ಇಲೆಕ್ಟ್ರಾನಿಕ್ಸ್ ವಿಭಾಗದ ಮುಖ್ಯಸ್ಥ ಡಾ. ಸವಿತಾ ಸೋನೋಳಿ, ಮೆಕಾನಿಕಲ್ ವಿಭಾಗದ ಮುಖ್ಯಸ್ಥ ಡಾ. ಕೋರಿ ನಾಗರಾಜ್, ಕಾರ್ಯಕ್ರಮದ ಸಂಯೋಜಕ ಡಾ. ಚಂದ್ರಗೌಡ ಮತ್ತಿತರರು ಉಪಸ್ಥಿತರಿದ್ದರು. ವಿಭಾಗದ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದರು.

# ಯಶಸ್ವಿಯಾಗಿ ನಡೆದ ಉಚಿತ ಆರೋಗ್ಯ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಮೇ. 24: ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಕರ್ನಾಟಕದ ಪ್ರತಿಷ್ಠಿತ, ಗೌರವನೀಯ, ವಿಶ್ವಾಸಾರ್ಹ ಸಂಸ್ಥೆ ಆಗಿದ್ದು, ಜನಸೇವೆಯ ಮೂಲಕ ವಿಶಿಷ್ಟವಾಗಿ ಗುರುತಿಸಿಕೊಳ್ಳುತ್ತಿದೆ ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ತಿಳಿಸಿದ್ದಾರೆ.



ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಮತ್ತು ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ಎಪಿಎಂಸಿ ಆವರಣದಲ್ಲಿ ಶನಿವಾರ ಏರ್ಪಡಿಸಿದ್ದ ಉಚಿತ ಹೃದಯ ತಪಾಸಣಾ ಶಿಬಿರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಿಡಿಸಿಸಿಐ ಅನ್ನು ಜನಮುಖಿ ಮಾಡಲು ಸಾಕಷ್ಟು ಕ್ರಿಯಾಶೀಲ ಯೋಜನೆಗಳನ್ನು ಜಾರಿ ಮಾಡಲಾಗುತ್ತಿದೆ. ವ್ಯಾಪಾರ –ವಾಣಿಜ್ಯ ಅಲ್ಲದೇ ಜನರೊಂದಿಗೆ ಗುರುತಿಸಿಕೊಳ್ಳಲು ಸಂಸ್ಥೆ ಉತ್ಸುಕವಾಗಿದೆ ಎಂದರು.

ಸಸಿಗೆ ನೀರುಣಿಸುವ ಮೂಲಕ ಆರೋಗ್ಯ ಶಿಬಿರವನ್ನು ಉದ್ಘಾಸಿದ ಬ್ರಿಮ್ಸ್ ನ ವೈದ್ಯಕೀಯ ಸೂಪರಿಂಟೆಂಡೆಂಟ್ ಡಾ. ಇಂದುಮತಿ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಜನರ ಸೇವೆ ಮಾಡುತ್ತಿದೆ. ಬ್ರಿಮ್ಸ್ ಕೂಡ ಜನಸೇವೆ ಮಾಡಲು ಉತ್ಸುಕವಾಗಿದೆ. ಜನಸೇವೆ ಮಾಡುವುದು ಪುಣ್ಯದ ಕೆಲಸ. ಈ ಸೇವೆಯಲ್ಲಿ ಪರಿಣಿತ, ಅನುಭವಿ ವೈದ್ಯರು ಮತ್ತು ಸಿಬ್ಬಂದಿಯು ಪಾಲ್ಗೊಂಡಿದೆ. ಬಿಡಿಸಿಸಿಐನ ಸೇವಾ ಮನೋಭಾವಕ್ಕೆ ಬ್ರಿಮ್ಸ್ ಸ್ಪಂದಿಸುತ್ತದೆ ಎಂದರು.

ಮುಖ್ಯ ಅತಿಥಿಗಳಾದ ಬ್ರಿಮ್ಸ್ ನ ಆಡಳಿತಾಧಿಕಾರಿ ಎಸ್.ಎನ್. ರುದ್ರೇಶ್ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಸದಾಕಾಲ ಜನಸೇವೆಯಲ್ಲಿ ಮುಂದಿದೆ. ರೈತಣ್ಣನ ಊಟ, ರೈತಣ್ಣನ ಹಾಸಿಗೆ ಮತ್ತು ರೈತಣ್ಣನ ಕ್ಲಿನಿಕ್ ಮೂಲಕ ಸರ್ಕಾರ ಮಾಡುವ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸುತ್ತಿದೆ. ಈ ನಿಟ್ಟಿನಲ್ಲಿ ಈ ಸಂಸ್ಥೆಯು ಅನೇಕರಿಗೆ ಸ್ಪೂರ್ತಿ ನೀಡಿದೆ. ಬ್ರಿಮ್ಸ್ ಅನ್ನು ಜನರ ಬಳಿಗೆ ಕರೆದುಕೊಂಡು ಬಂದಿದ್ದಕ್ಕಾಗಿ ಬಿಡಿಸಿಸಿಐಗೆ ಕೃತಜ್ಞತೆಗಳು ಎಂದರು.

ಅತಿಥಿಗಳಾದ ಹೃದಯತಜ್ಞ ಡಾ. ಎನ್. ಕೊಟ್ರೇಶ್ ಅವರು, ಇತ್ತೀಚಿನ ದಿನಗಳಲ್ಲಿ ಹೃದಯ, ಶುಗರ್, ಬಿಪಿ ಮತ್ತು ಕೊಲೆಸ್ಟರಾಲ್ ತಪಾಸಣೆಯನ್ನು ಆಗಾಗ್ಗೆ ತಪ್ಪದೇ ಮಾಡಿಕೊಳ್ಳಬೇಕಿದೆ. ಅನೇಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವಲ್ಲಿ ಬಿಡಿಸಿಸಿಐ ಏರ್ಪಡಿಸಿರುವ ಆರೋಗ್ಯ ಮೇಳ ಶ್ಲಾಘನೀಯ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಮಾಜಿ ಅಧ್ಯಕ್ಷ ಬಿ. ಮಹಾರುದ್ರಗೌಡರು, ಹಿರಿಯ ಉಪಾಧ್ಯಕ್ಷರಾದ ಅವ್ವಾರು ಮಂಜುನಾಥ್, ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಖಜಾಂಚಿ ಪಿ. ಪಾಲಣ್ಣ, ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೇಡ್ ಮಲ್ಲಿಕಾರ್ಜುನ ಗೌಡ, ವಿ. ರಾಮಚಂದ್ರ ಮತ್ತು ರೈತಣ್ಣ ಕ್ಲಿನಿಕ್ ನ ಚೇರ್ಮನ್ ಸುರೇಂದ್ರ ಕುಮಾರ್ ಭಾಪ್ನಾ ಅವರು ವೇದಿಕೆಯಲ್ಲಿದ್ದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ಬ್ರಿಮ್ಸ್ ಮತ್ತು ಜಿಲ್ಲಾ ಆಸ್ಪತ್ರೆಯ ಪರಿಣಿತ ವೈದ್ಯರು ಮತ್ತು ಸಿಬ್ಬಂದಿ ಶಿಬಿರದಲ್ಲಿ ತಪಾಸಣೆ ನಡೆಸೊದರು. ಶಿಬಿರದಲ್ಲಿ 250 ಕ್ಕೂ ಹೆಚ್ಚು ಜನರು ಆರೋಗ್ಯ ತಪಾಸಣೆಗೆ ಒಳಪಟ್ಟರು.

ಈ ಶಿಬಿರದಲ್ಲಿ ಬಿಡಿಸಿಡಿಐನ ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಷ ಆಹ್ವಾನಿತರು, ಎಪಿಎಂಸಿಯ ವರ್ತಕರು, ಹಮಾಲರು –ರೈತರು ಶಿಬಿರದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಕೃಷಿ ಮಾರಾಟಗಾರರ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಮೇ.24: ಜಂಟಿ ಕೃಷಿ ನಿರ್ದೇಶಕರ ಅಧ್ಯಕ್ಷತೆಯಲ್ಲಿ ತಾಲೂಕು ಕೃಷಿ ಮಾರಾಟಗಾರರ ಸಭೆಯನ್ನು ಏರ್ಪಡಿಸಿದ್ದು ತಾಲೂಕಿನ ಕೃಷಿ ಪರಿಕರ ಮಾರಾಟಗಾರರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಸಭೆಯಲ್ಲಿ ಸಹಾಯಕ ಕೃಷಿ ನಿರ್ದೇಶಕರು ಮಾತನಾಡಿ, ಕೃಷಿ ಪರಿಕರಗಳ ಮಾರಾಟ ಕುರಿತಂತೆ ನೀತಿ ನಿಬಂಧಗಳನ್ನು ಮಾರಾಟಗಾರರಿಗೆ ತಿಳಿಸಿದರು. ಮುಂದುವರೆದು ಪರವಾನಿಗೆ ಇಲ್ಲದೆ ಯಾವುದೇ ಪರಿಕರಗಳನ್ನು ಮಾರಾಟ ಮಾಡಿದಲ್ಲಿ ಸೂಕ್ತ ಕಠಿಣ ಕ್ರಮವನ್ನು ಕೈಗೊಳ್ಳುವುದಾಗಿ ತಿಳಿಸಿದರು. ಮುಖ್ಯವಾಗಿ ಪರವಾನಿಗೆ ಇಲ್ಲದೆ ಜೈವಿಕ ಉತ್ಪನ್ನಗಳನ್ನು ಮಾರಾಟ ಮಾಡಿದಲ್ಲಿ ಪರವಾನಿಗೆಯನ್ನು ರದ್ದು ಮಾಡುವುದಾಗಿ ಕಟ್ಟುನಿಟ್ಟಾಗಿ ತಿಳಿಸಿದರು . ಮಾರಾಟ ಮಳಿಗೆಯೂ ಕೇವಲ ಪರಿಕರಗಳ ಮಾರಾಟವಲ್ಲದೆ ರೈತರಿಗೆ ಕೃಷಿ ಮಾಹಿತಿ ಕೇಂದ್ರವಾಗಬೇಕು ಎಂದು ತಿಳಿಸಿದರು

ಸದರಿ ಸಭೆಯಲ್ಲಿ ಸೋಮಸುಂದರ್ (ಜಂಟಿ ಕೃಷಿ ನಿರ್ದೇಶಕರು ದಯಾನಂದ್ ಎಂ,(ಸಹಾಯಕ ಕೃಷಿ ನಿರ್ದೇಶಕರು, ಮುಜ್ಬಿರ್ ರೆಹ್ಮಾನ್ (ಸಹಾಯಕ ಕೃಷಿ ನಿರ್ದೇಶಕರು, ಜಾರಿದಳ) , ಮೊಹಮ್ಮದ್ ರಫಿ (ಸಹಾಯಕ ಕೃಷಿ ನಿರ್ದೇಶಕರು, ವಿಷಯ ತಜ್ಞರು) , ಶಿವರಾಂ ರೆಡ್ಡಿ (ತಾಲೂಕು ಕೃಷಿ ಮಾರಾಟಗಾರರ ಅಧ್ಯಕ್ಷರು) ಹಾಗೂ ಇತರೆ ಕೃಷಿ ಪರಿಕರ ಮಾರಾಟಗಾರರು ಉಪಸ್ಥಿತರಿದ್ದರು.

# ಕನ್ನಡ ಸಾಹಿತ್ಯದಿಂದ ಜಾಗತಿಕ ಸಂಸ್ಕೃತಿಗೆ ವಿಶ್ವಮಾನವ ಸಂದೇಶ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಮೇ.24: ಜಾಗತಿ–ಕ ಸಂಸ್ಕೃತಿಗೆ ವಿಶ್ವ ಮಾನವ ಸಂದೇಶವನ್ನು ಕನ್ನಡ ಸಾಹಿತ್ಯ ನೀಡಿದೆ ಎಂದು ತೋರಣಗಲ್ಲು ವಿಭಾಗದ ಉಪ ಪೊಲೀಸ ಅಧೀಕ್ಷಕರಾದ ಪ್ರಸಾದ್ ಕೆ ಗೋಖಲೆ ಅವರು ತಿಳಿಸಿದರು.

ಕಸಾಪ ಬಳ್ಳಾರಿ ಜಿಲ್ಲಾ ಘಟಕ ಮತ್ತು ವೀರಶೈವ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ನಡೆದ ಲಿಂ. ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ದತ್ತಿ , ಲಿಂ ಕೋಳೂರು ಪೊಂಪನಗೌಡ ಮತ್ತು ಕೋಳೂರು ನೀಲಮ್ಮ ದತ್ತಿ, ಲಿಂ ಜಾನೇಕುಂಟೆ ಸಿದ್ಧಬಸಪ್ಪ ಸ್ಮಾರಕ ದತ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಜಾಗತೀಕರಣ ಸಂದರ್ಭದಲ್ಲಿ ದೇಶಿಯ ಭಾಷೆಗಳ ಬೆಳವಣಿಗೆಗೆ ಆತಂಕ ಉಂಟಾಗುತ್ತಿದೆ. ಹೀಗಾಗಿ ಪ್ರಾದೇಶಿಕ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿ ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ, ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಜಗತ್ತಿನಲ್ಲಿ ತಮ್ಮ ವ್ಯಕ್ತಿತ್ವವನ್ನು ಸಾಬೀತು ನಡೆಸಲು ನಿರಂತರವಾಗಿ ಅಧ್ಯಯನಶೀಲರಾಗುವಂತೆ ಪ್ರಸಾದ ಗೋಖಲೆ ಕರೆನೀಡಿದರು.

ಕುರುಗೋಡು ಪದವಿ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಶಶಿಕಾಂತ ಕನ್ನಡ ಸಾಹಿತ್ಯದಲ್ಲಿ ನೈತಿಕ ಶಿಕ್ಷಣದ ಮೌಲ್ಯಗಳು ಎನ್ನುವ ವಿಷಯದ ಕುರಿತಾಗಿ ವಿಶೇಷ ಉಪನ್ಯಾಸ ನೀಡಿದರು. ವೀರಶೈವ ಕಾಲೇಜಿನ ಆಡಳಿತ ಮಂಡಳಿ ಅಧ್ಯಕ್ಷರಾದರೂರು ಶಾಂತನಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಕರ್ನಾಟಕ ಯುವಕ ಸಂಘದ ಅಧ್ಯಕ್ಷ ಜಿ. ಬಸವರಾಜ, ವೀರಶೈವ ಕಾಲೇಜಿನ ಪ್ರಾಂಶುಪಾಲ ಜಿ. ಮಲ್ಲನಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಡಾ ನೀಲಮ್ಮ ಕಾರ್ಯಕ್ರಮ ನಿರೂಪಿಸಿದರು. ಡಾ. ಶಾಮೂರ್ತಿ ಸ್ವಾಗತಿಸಿದರು. ಕಸಾಪ ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಸಾಪ ಗ್ರಾಮೀಣ ಅಧ್ಯಕ್ಷ ಎ. ಯರ್ರಿಸ್ವಾಮಿ ವಂದನಾರ್ಪಣೆ ಸಲ್ಲಿಸಿದರು.

# ಬೆಳ್ಳಿಖಂಡಿ ಪ್ರಕರಣ– ವೈ.ಸಿ.ಕಾಂಬಳೆ ಆರೋಪ ಸುಳ್ಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.24–ಬಾದಾಮಿ ತಾಲೂಕಿನ ಬೆಳ್ಳಿಖಂಡಿ ಗ್ರಾಮದ ತಿಪ್ಪೇಜಾಗೆಯ ವಿಷಯಕ್ಕೆಸಂಬಂಧಿಸಿ ಎರಡು ಕುಟುಂಬಗಳ ಮಧ್ಯದ ಜಗಳದಲ್ಲಿ ಗ್ರಾಮ ಪಂಚಾಯತಿ ಸದಸ್ಯ ಭೀಮಪ್ಪ ಮೇಟಿ ಮೇಲೆ ಕೆರೂರ ಪಿಎಸ್‌ಐ ಹಲ್ಲೆ ಮಾಡಿದ್ದಾರೆ ಎಂದು ಆಲ್ ಇಂಡಿಯಾ ಬಿಎಸ್‌ಪಿ ರಾಜ್ಯ ಉಪಾಧ್ಯಕ್ಷ ವೈ.ಸಿ.ಕಾಂಬಳೆ ಆರೋಪಿಸಿರುವುದು ಸುಳ್ಳು ಎಂದು ಡಿಎಸ್‌ಎಸ್ ಬಾದಾಮಿ ತಾಲೂಕಾ ಸಂಚಾಲಕ ಶಿವುಕುಮಾರ ಪೂಜಾರ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾಗೆಯ ವಿಷಯದಲ್ಲಿ ಉಂಟಾದ ಜಗಳದಲ್ಲಿ ಭೀಮಪ್ಪ ಮೇಟಿ ಕಾಲುಜಾರಿ ಬಿದ್ದು ಕೈ ಮುರಿದುಕೊಂಡಿದ್ದರೂ ಕಾಂಬಳೆ ಪಿಎಸ್‌ಐ ಹಲ್ಲೆ ಮಾಡಿದ್ದಾರೆಂದು ಆರೋಪಿಸಿ ಪತ್ರಿಕಾ ಹೇಳಿಕೆ ನೀಡಿರುವುದು ಸತ್ಯಕ್ಕೆದೂರವಾಗಿದೆ. ವೈಯಕ್ತಿಕ ವಿಷಯದಲ್ಲಿ ಅವರು ಈ ಆರೋಪ ಮಾಡಿದ್ದಾರೆ ಎಂದರು.

ಮುಖಂಡ ರಂಗಪ್ಪ ಮುಳ್ಳೂರ ಮಾತನಾಡಿ, ತಿಪ್ಪೆಯ ಜಾಗೆ ಅಧಿಕೃತವಾಗಿ ಶಿವಾನಂದ ವಗ್ಗರ ಹಾಗೂ ಪಡಿಯಪ್ಪ ವಗ್ಗರಗೆ ಸಂಬಂಧಿಸಿದ್ದರೂ ಇದಕ್ಕೆ ಗ್ರಾಪಂ ಸದಸ್ಯ ಭೀಮಪ್ಪ ಮೇಟಿ ಅಡಚಣೆ–ಯುಂಟು ಮಾಡುತ್ತಿದ್ದಾರೆ. ಎಲ್ಲ ದಾಖಲೆಗಳಿದ್ದರೂ ದಬ್ಬಾಳಿಕೆಯಿಂದ ತಮ್ಮದೆಂದು ಹೇಳಿ ಅನ್ಯಾಯ ಮಾಡುತ್ತಿದ್ದಾರೆ. ನಿಜವಾದ ಮಾಲಿಕರಿಗೆ ನ್ಯಾಯ ಸಿಗಬೇಕು ಎಂದು ಆಗ್ರಹಿಸಿದರು.

ಮುತ್ತಣ್ಣ ಗಾಜಿ, ದೇವರಾಜ ಚೂರಿ, ಶಿವಾನಂದ ವಗ್ಗರ, ಪಡಿಯಪ್ಪ ವಗ್ಗರ, ಮಾರುತಿ ದಾನಿ ಸುದ್ದಿಗೋಷ್ಠಿಯಲ್ಲಿದ್ದರು.

# ಬಾಗಲಕೋಟೆಯಲ್ಲಿ ಇಂದು ಸಸ್ಯಾಹಾರ ರ್‍ಯಾಲಿ


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.24–ಪಿರಮಿಡ್ ಸ್ಪಿರಿಚುಯಲ್ ಸಾಯಿನ್ಸ ಅಕಾಡೆಮಿ ಬಾಗಲಕೋಟೆ ಜಿಲ್ಲಾ ಘಟಕ ವಿಶ್ವಮಿತ್ರ ಲೈಟ್ ಫೌಂಡೇಶನ್ ಬೆಂಗಳೂರು ಹಾಗೂ ಸ್ಥಳೀಯ ಸಮಾನ ಮನಸ್ಕ ಸೇವಾ ಸಂಸ್ಥೆಗಳು, ವಿವಿಧ ಶಿಕ್ಷಣ ಸಂಸ್ಥೆಗಳ ಸಹಕಾರದೊಂದಿಗೆ ನಗರದಲ್ಲಿ ಮೇ.25 ರಂದು ಸಸ್ಯಾಹಾರ ರ್‍ಯಾಲಿ ಹಮ್ಮಿಕೊಂಡಿದೆ.

ನಗರದ ವಿದ್ಯಾಗಿರಿಯಲ್ಲಿ ಭಾನುವಾರ ಬೆಳಿಗ್ಗೆ 10 ರಿಂದ 12 ಗಂಟೆಯವರೆಗ ಬಿಪ್ಸ್ ಸ್ಕೂಲ್ ಮುಂಭಾಗದಿಂದ ನೇತಾಜಿ ವಿದ್ಯಾರ್ಥಿ ನಿಲಯದವರೆಗೆ, ಸಾಯಂಕಾಲ 4–30 ರಿಂದ 5–30 ಗಂಟೆವರೆಗೆ ನವನಗರದ ಸೆಕ್ಟರ್ ನಂ.60ರ ನೀರಾವರಿ ಇಲಾಖೆ ಕಚೇರಿ ಆವರಣದಿಂದ ಸೆಕ್ಟರ್ 52 ರ ವೀರಭದ್ರೇಶ್ವರ ದೇವಸ್ಥಾನದವರೆಗೆ(ವ್ಹಾಯಾ ಅಯ್ಯಂಗಾರ ಬೇಕರಿ)ಮತ್ತು ಸಂಜೆ 6 ರಿಂದ 7–30 ಗಂಟೆವರೆಗೆ ಗದ್ದನಕೇರಿ ತಾಂಡಾದಲ್ಲಿ ದುರ್ಗಾ ಪ್ರಾಥಮಿಕ/ಹೈಸ್ಕೂಲ್ ಆವರಣದಿಂದ ದುರ್ಗಾದೇವಿ ದೇವಸ್ಥಾನದವರೆಗೆ ಸಸ್ಯಾಹಾರ ರ್‍ಯಾಲಿಗಳನ್ನು ಆಯೋಜಿಸಲಾಗಿದೆ ಎಂದು ಪಿರಮಿಡ್ ಸ್ಪಿರಿಚುಯಲ್ ಸೊಸೈಟೀಜ ಮೂವ್ಮೆಂಟ್ ಆಫ್ ಇಂಡಿಯಾ ನಗರ ಬಳಗದ ಪರವಾಗಿ ಧ್ಯಾನ ತರಬೇತುದಾರ ರಾಜಶೇಖರ ಅಡಿಕೇನವರ ತಿಳಿಸಿದ್ದಾರೆ.

ದೇಶದ ದಕ್ಷಿಣದ 4 ರಾಜ್ಯಗಳಲ್ಲಿ ಮೇ.25 ರಂದು 108 ಸ್ಥಳಗಳಲ್ಲಿ ಏಕಕಾಲಕ್ಕೆ ಸಸ್ಯಾಹಾರ ರ್‍ಯಾಲಿ ನಡೆಯುತ್ತಿದ್ದು, ಬಾಗಲಕೋಟೆ ಸೇರಿ ಕರ್ನಾಟಕದ 20 ಜಿಲ್ಲೆಗಳಲ್ಲಿಯೂ ರ್‍ಯಾಲಿ ಆಯೋಜಿತವಾಗಿವೆ. ರ್‍ಯಾಲಿಯಲ್ಲಿ ನಾಗರಿಕರು ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಅಡಿಕೇನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹ ಪ್ರವೇಶ ನಿಮಿತ್ತ ಗ್ರಂಥಾಲಯ ಸ್ಥಾಪನೆ ಗ್ರಂಥಾಲಯ ಮಿತ್ರನಿಗಿಂತಲೂ ಮಿಗಿಲು–ಡಾ.ಚನ್ನಪ್ಪ ಕಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.24–ಗ್ರಂಥ ಹಾಗೂ ಗ್ರಂಥಾಲಯಗಳು ಮಿತ್ರನಿಗಿಂತಲೂ ಮಿಗಿಲು ಎಂದು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷ ಡಾ.ಚನ್ನಪ್ಪ ಕಟ್ಟಿ ಹೇಳಿದ್ದಾರೆ. ನಗರದ ವಿದ್ಯಾಗಿರಿಯ ಮಮತಾ ಹಾಗೂ ಮಹಾಂತೇಶ ಕೋಟಿ ಶಿಕ್ಷಕ ದಂಪತಿಗಳ ನವನಿರ್ಮಿತ ಪ್ರವಾಚಕ ನಿಲಯದ ಗ್ರಹ ಪ್ರವೇಶ ನಿಮಿತ್ತ ಪ್ರಾರಂಭಿಸಿದ ಗ್ರಂಥಾಲಯವನ್ನು ಅನಾವರಣಗೊಳಿಸಿ ಮಾತನಾಡಿದ ಅವರು, ಮನೆಗೊಂದು ಗ್ರಂಥಾಲಯ ಮಾಡುವುದಾದರೆ ಅದು ಮಿತ್ರನಿಗಿಂತಲೂ ಮಿಗಿಲಾದುದು ಎಂದು ಹೇಳಿ, ತಮ್ಮ ನೆಲೆ ಪ್ರಕಾಶನದಡಿ ಪ್ರಕಟಗೊಂಡಿರುವ 50 ಗ್ರಂಥಗಳನ್ನು ಕಾಣಿಕೆಯಾಗಿ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿ.ಎಂ.ಸಿಂಧೂರ ಗೃಹಪ್ರವೇಶದಂತಹ ಕೌಟುಂಬಿಕ ಕಾರ್ಯಕ್ರಮಕ್ಕೆ ಸಾಹಿತ್ಯಿಕ ಮೆರಗು ನೀಡಿದ ಕೋಟಿ ಪರಿವಾರದ ಕಾರ್ಯ ಪ್ರಶಂಸನೀಯವಾಗಿದ್ದು, ಪ್ರತಿ ಮನೆಗಳಲ್ಲೊಂದು ಚಿಕ್ಕದಾದ ಗ್ರಂಥಾಲಯವಾದರೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ದೊರೆಯುತ್ತದೆ ಎಂದರು. ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ರಘುನಂದನ್ ಭಟ್ ಬನವಾಸಿ ಎಸ್.ಜಿ.ಕೋಟಿ ರಚಿತ ಮತ್ತೊಂದು ವಡ್ಡಾರಾಧನೆ ಗ್ರಂಥ ಬಿಡುಗಡೆಗೊಳಿಸಿದರಲ್ಲದೇ, ಜೂನ್ 7–8 ರಂದು ದಾವಣಗೇರಿಯಲ್ಲಿ ನಡೆಯಲಿರುವ ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಅಧಿವೇಶನಕ್ಕೆ ಸರ್ವಾಧ್ಯಕ್ಷರಾಗಿರುವುದಕ್ಕೆ ಕೋಟಿ ಅವರನ್ನು ಪರಿಷತ್ತಿನ ಪರವಾಗಿ ಸನ್ಮಾನಿಸಿದರು.

ಜನಮೇಜಯ ಉಮರ್ಜಿ ಅಭಿನಂದನ ನುಡಿ ಹೇಳಿದರು. ಸಾಹಿತಿ ಮಲ್ಲಿಕಾರ್ಜುನ ಹೆಗ್ಗಳಗಿ ಕೃತಿ ಪರಿಚಯಿಸಿದರು. ಸಾಹಿತಿಗಳಾದ ಎಂ.ಜಿ.ಬಿರಾದಾರ, ವೀರಣ್ಣ ನಿಂಗೋಜಿ ಅತಿಥಿಗಳಾಗಿದ್ದರು. ಚಿಂತಕ ಶಿವಶಂಕರ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು.

ಕಲ್ಯಾಣಕುಮಾರ ಗೂಗಿ ಪ್ರಾರ್ಥಿಸಿದರು. ಮಹಾಂತೇಶ ಕೋಟಿ ಸ್ವಾಗತಿಸಿದರು. ಜಿ.ಜಿ.ಕೋಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗುರುರಾಜ ಲೂತಿ ಹಾಗೂ ಸಂಗಮೇಶ ಸಣ್ಣತಂಗಿ ನಿರೂಪಿಸಿದರು.



ಕೂಡ್ಲಿಗಿ. ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಊರಮ್ಮದೇವಿ ದೇವಸ್ಥಾನದಿಂದ ದೇವಿಯ ಉತ್ಸವ ಮೂರ್ತಿಯನ್ನು ದೈವಸ್ಥರ ಸಮ್ಮುಖದಲ್ಲಿ ಸಕಲ ವಾದ್ಯಗೊಳೊಂದಿಗೆ ಹಳೆಯ ಸಂತೆ ಮಾರುಕಟ್ಟೆ ಲಕ್ಷ್ಮಿ ಬಜಾರ್ ನ ಬಳಿಯಿದ್ದ ರಥದ ಬಳಿಗೆ ತಂದು ಮೂರು ಸುತ್ತು ಪ್ರದಕ್ಷಿಣೆ ಹಾಕಲಾಯಿತು. ನಂತರ ದೇವಿಯ ಉತ್ಸವಮೂರ್ತಿಯನ್ನು ಜಯಘೋಷಗಳೊಂದಿಗೆ ರಥದ ಮೇಲೆ ಮುಂದುಗಡೆ ಅದನ್ನು ಪ್ರತಿಷ್ಠಾಪಿಸಿದ ನಂತರ ಪೂಜಾ ವಿಧಿ, ವಿಧಾನಗಳನ್ನು ನೆರವೇರಿಸಲಾಯಿತು.

# ವ್ಯಾಪಾರಸ್ಥರ ನಿಯೋಗದಿಂದ ಶಾಸಕ ಮೇಟಿಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ನಗರದ ವ್ಯಾಪಾರ–ವಹಿವಾಟು ಪುನಶ್ಚೇತನಕ್ಕೆ ನವನಗರ ಯುನಿಟ್ 3ರಲ್ಲಿ ಸುಸಜ್ಜಿತ ಮಾರುಕಟ್ಟೆ ನಿರ್ಮಾಣದ ಉದ್ದೇಶಕ್ಕೆ 200 ಎಕರೆ ಭೂಮಿ ಮೀಸಲಿಡಬೇಕೆಂಬ ಬೇಡಿಕೆಗೆ ಸ್ಪಂದಿಸಿ ತಾತ್ವಿಕ ಒಪ್ಪಿಗೆ ದೊರೆಯಲು ಸಹಕರಿಸಿದ ಶಾಸಕ ಎಚ್.ವಾಯ್.ಮೇಟಿ ಅವರನ್ನು ಬಾಗಲಕೋಟೆ ಯೂನಿಯನ್ ಆಫ್ ಮರ್ಚಂಟ್ಸ್ ಆಂಡ್ ಎಂಟರ್‌ಪ್ರೈಸಸ್ ಅಸೋಸಿಯೇಷನ್ ಶನಿವಾರ ಸನ್ಮಾನಿಸಿ ಅಭಿನಂದನಾ ಪತ್ರ ನೀಡಿದೆ. ಶಾಸಕರ ನಿವಾಸಕ್ಕೆ ತೆರಳಿದ ಅಸೋಸಿಯೇಷನ್ ಪದಾಧಿಕಾರಿಗಳ ನಿಯೋಗ ಕೃತಜ್ಞತೆ ಸಲ್ಲಿಸಿದರಲ್ಲದೇ ಈ ಪ್ರಯತ್ನದಲ್ಲಿ ಸಹಕರಿಸಿದ ಮುಖಂಡ ಹೊಳಬಸು ಶೆಟ್ಟರ ಅವರನ್ನು ಸನ್ಮಾನಿಸಿದರು.

ಯುನಿಟ್ 3 ರಲ್ಲಿ ಸುಸಜ್ಜಿತ ಮಾರುಕಟ್ಟೆ ನಿರ್ಮಿಸುವ ಯೋಜನೆಯನ್ನು ಶೀಘ್ರದಲ್ಲಿಯೇ ಕಾರ್ಯರೂಪಕ್ಕೆ ತರಲು ಪ್ರಯತ್ನಿಸುವುದಾಗಿ ಶಾಸಕ ಮೇಟಿ ವ್ಯಾಪಾರಸ್ಥರ ನಿಯೋಗಕ್ಕೆ ಭರವಸೆ ನೀಡಿದರು.

ಅಸೋಸಿಯೇಷನ್ ಅಧ್ಯಕ್ಷ ರವಿ ಕುಮಟಗಿ, ಉಪಾಧ್ಯಕ್ಷರಾದ ಶ್ರೀನಿವಾಸ ಬಳ್ಳಾರಿ, ರಾಮ ಮುಂದಡಾ, ಕಾರ್ಯದರ್ಶಿ ವಿರುಪಾಕ್ಷ ಅಮೃತಕರ, ಬಾಳು ಉಳ್ಳಾಗಡ್ಡಿ, ಮುತ್ತು ಜೋಳದ, ಪುಕರಾಜ ಬೇತಾಳ, ನಾಗರಾಜ ಕುಪ್ಪಸ್ತ, ಆಂಜನೇಯ ಕಾಗೆ, ನಾಗರಾಜ ದಳವಾಯಿ, ಮಕ್ತುಮಸಾಬ ದೊಡಮನಿ ಸೇರಿದಂತೆ ಇತರ ಪದಾಧಿಕಾರಿಗಳು ಇದ್ದರು.

# ಹಿರೇಓತಗೇರಿಯಲ್ಲಿ ಸಂಭ್ರಮದ ಹೇಮರಡ್ಡಿ ಮಲ್ಲಮ್ಮ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.24–ಜಿಲ್ಲೆಯ ಇಲಕಲ್ಲ ತಾಲೂಕಿನ ಹಿರೇಓತಗೇರಿ ಗ್ರಾಮದಲ್ಲಿ ಮಹಾಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ 603ನೇ ಜಯಂತೋತ್ಸವವನ್ನು ಅತ್ಯಂತ ಸಡಗರ ಸಂಭ್ರಮ ಭಕ್ತಿ ಭಾವದಿಂದ ಆಚರಿಸಲಾಯಿತು.

ಬೆಳಿಗ್ಗೆ ಮಲ್ಲಮ್ಮನ ಮೂರ್ತಿಗೆ ಅಭಿಷೇಕ ಹಾಗೂ ಪೂಜಾ ಕಾರ್ಯಕ್ರಮ ನಡೆಯಿತು. ದೇವಸ್ಥಾನದ ಗೋಪುರಕ್ಕೆ ಕಳಸಾರೋಹಣ ಮಾಡಲಾಯಿತು. ನಂತರ ಮಲ್ಲಮ್ಮ ತಾಯಿಯ ಭಾವಚಿತ್ರದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಡೊಳ್ಳು ಹಾಗೂ ವಿವಿಧ ವಾದ್ಯ ಮೇಳಗಳೊಂದಿಗೆ ಸಂಭ್ರಮದಿಂದ ಜರುಗಿತು. ಮಹಿಳೆಯರು ಕಳಸದೊಂದಿಗೆ ಭಾಗವಹಿಸಿ ಮೆರವಣಿಗೆಗೆ ಮೆರಗು ತಂದರು.

ಮಧ್ಯಾಹ್ನ ದೇವಸ್ಥಾನದಲ್ಲಿ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಕಂದಗಲ್ಲ ರೆಡ್ಡಿ ಸಮಾಜದ ಹಿರಿಯರಾದ ಚನ್ನಪ್ಪಗೌಡ್ರ ನಾಡಗೌಡ್ರ ಹಿರೇಓತಗೇರಿ ಗ್ರಾಮದ ಸಕಲ ಗುರುಹಿರಿಯರು, ಯುವಕರು, ಮಹಿಳೆಯರು, ಮಕ್ಕಳು ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಕ್ತಿ ಸೇವೆಗೈದರು.

# ನಿರ್ಧಾರವನ್ನು ಹಿಂಪಡೆದು ಪುನಃ ಲಿಂಗಸುಗೂರಿಗೆ 200 ಹಾಸಿಗೆ ಜಿಲ್ಲಾಸ್ಪತ್ರೆಯನ್ನು ಮಂಜೂರು ಮಾಡಬೇಕೆಂದು ಪ್ರಗತಿಪರ ಸಂಘಟನೆಗಳ ಒಕ್ಕೂಟ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ

ಕಳೆದ ಬಜೆಟ್‌ನಲ್ಲಿ ಲಿಂಗಸುಗೂರು ತಾಲೂಕಿಗೆ 200 ಹಾಸಿಗೆಯ ಜಿಲ್ಲಾಸ್ಪತ್ರೆಗೆ ಮೇಲ್ದರ್ಜೆಗೆರಿಸುವ ಕುರಿತು ಘೋಷಣೆ ಮಾಡಲಾಗಿತ್ತು. ಆದರೆ ಗುರುವಾರ ದಿನಾಂಕ: 22–05–2025ರಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸಿಂಧನೂರಿಗೆ ಸ್ಥಳಾಂತರ ಮಾಡಿ ಅನುಮೋದನೆ ನೀಡಿ ಹಣ ಬಿಡುಗಡೆಗೊಳಿಸಿರುವುದನ್ನು ಲಿಂಗಸುಗೂರು ತಾಲೂಕಿನ ಪರ ಚಿಂತಕರು, ಬುದ್ಧಿಜೀವಿಗಳು. ಸಂಘಟನೆಕಾರರು ಇದನ್ನು ಖಂಡಿಸಿ ಸಚಿವ ಸಂಪುಟದ ಪ್ರಗತಿಪರ ನಿರ್ಧಾರವನ್ನು ಹಿಂಪಡೆದು ಪುನಃ ಲಿಂಗಸುಗೂರಿಗೆ 200 ಹಾಸಿಗೆ ಜಿಲ್ಲಾಸ್ಪತ್ರೆಯನ್ನು ಮಂಜೂರು ಮಾಡಬೇಕೆಂದು ಪ್ರಗತಿಪರ ಸಂಘಟನೆಗಳ ಒಕ್ಕೂಟ ಲಿಂಗಸುಗೂರು ಆಗ್ರಹವಾಗಿದೆ.

ಲಿಂಗಸುಗೂರು ತಾಲೂಕು ಐತಿಹಾಸಿಕ ಹಿನ್ನಲೆಯನ್ನು ಹೊಂದಿದ್ದು, ಲಿಂಗಸುಗೂರು ತಾಲೂಕಿನ ಹಟ್ಟಿ ಚಿನ್ನದ ಗಣಿ ಇದ್ದು. ಇಡೀ ಭಾರತದ ಏಕೈಕ ಚಿನ್ನದ ಗಣಿಯನ್ನು ಹೊಂದಿರುವುದು ನಮ್ಮ ಹೆಮ್ಮೆ ಪಡುವ ವಿಷಯವಾಗಿದೆ. ಇಂತಹ ಚಿನ್ನದ ನಾಡಿಗೆ ದ್ರೋಹ ಬಗೆಯುವುದು ಅದು ಎಷ್ಟು ಸರಿ.

ಲಿಂಗಸೂರು ತಾಲೂಕು ಹುಣಸಗಿ, ಸುರುಪುರು, ಮಸ್ಕಿ, ಯಾದಗಿರಿ ಹಾಗೂ ಹುನಗುಂದ ತಾಲೂಕುಗಳ ರೋಗಿಗಳು ಚಿಕಿತ್ಸೆಗಾಗಿ ಲಿಂಗಸುಗೂರು ತಾಲೂಕು ಆಸ್ಪತ್ರೆಗೆ ಆಗಮಿಸಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಲ್ಲದೇ ಲಿಂಗಸುಗೂರು ತಾಲೂಕು ಕೇಂದ್ರಸ್ಥಾನದಲ್ಲಿದ್ದರಿಂದ ಬ್ರಿಟಿಷರ ಕಾಲದಲ್ಲಿ ಜಿಲ್ಲಾ ಕೇಂದ್ರವಾಗಿತ್ತು. ಅಲ್ಲದೇ ಉಪ ವಿಭಾಗವನ್ನು ಹೊಂದಿದೆ. ಅಲ್ಲದೇ ಈ ಹಿಂದೆ ಕೃಷಿ ಉಪ ನಿರ್ದೇಶಕರ –2 ಕಛೇರಿಯನ್ನು ಸ್ಥಳಾಂತರ ಮಾಡುವ ಹುನ್ನಾರ ನಡೆದಿತ್ತು. ಲಿಂಗಸುಗೂರು ತಾಲೂಕಿಗೆ ಮಂಜೂರಾಗಿದ್ದ ಕೆಲ ಪ್ರಾಥಮಿಕ ಆರೋಗ್ಯಕೇಂದ್ರಗಳನ್ನು ಸಿಂಧನೂರು ತಾಲೂಕಿಗೆ ಸ್ಥಳಾಂತರ ಮಾಡಲಾಗಿದೆ. ಈಗ ಜಿಲ್ಲಾಸ್ಪತ್ರೆಯನ್ನು ಸ್ಥಳಾಂತರ ಮಾಡಿರುವುದು ತಾಲೂಕಿನ ಜನತೆ ಸಹಿಸದಾಗಿದೆ.

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಇವರ ಮಲತಾಯಿ ಧೋರಣೆಯಿಂದಾಗಿ ಲಿಂಗಸುಗೂರು ತಾಲೂಕನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಇವರ ಈ ಧೋರಣೆಯಿಂದಾಗಿ 200 ಹಾಸಿಗೆಯ ಜಿಲ್ಲಾಸ್ಪತ್ರೆ ಸಿಂಧನೂರಿಗೆ ಸ್ಥಳಾಂತರ ಮಾಡಲಾಗಿದೆ.

ಕಾರಣ ರಾಜ್ಯ ಸರ್ಕಾರ ಸಚಿವ ಸಂಪುಟದ ನಿರ್ಧಾರವನ್ನು ಹಿಂಪಡೆದು ಕೂಡಲೇ ಪುನಃ ಲಿಂಗಸುಗೂರು ತಾಲೂಕಿಗೆ 200 ಹಾಸಿಗೆ ಜಿಲ್ಲಾಸ್ಪತ್ರೆಯನ್ನು ಮಂಜೂರು ಮಾಡಬೇಕೆಂದು

ಪ್ರಗತಿಪರ ಸಂಘಟನೆಗಳ ಒಕ್ಕೂಟ ಆಗ್ರಹಿಸಿದರು

ಈ ಸಂದರ್ಭದಲ್ಲಿ ಮೋಹನ್ ಗೋಸೆ, ದುರುಗಪ್ಪ ಆಗ್ರಹಾರ, ಪ್ರಭುಲಿಂಗ ಮೇಗಳಮನಿ, ಜಿಲಾನಿಪಾಷ, ಸಂಜೀವಪ್ಪ ಚಲುವಾದಿ, ಮಾದೇಶ ಸರ್ಜಾಪೂರು, ವಿಜಯಪೋಳ್, ತಿಮ್ಮಾರೆಡ್ಡಿ, ದುರ್ಗಾಪ್ರಸಾದ್, ಶಿವರಾಜ ನಾಯ್ಕ, ಮುತ್ತಣ್ಣ ಸೇರಿ ಇತರರು ಇದ್ದರು.



ಬಸವಕಲ್ಯಾಣ :– ತಾಲೂಕಿನ ಕೋಹಿನೂರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಅಶ್ವರೂಢ ಶ್ರೀ ಬಸವೇಶ್ವರ ಪ್ರತಿಮೆ ಅನಾವರಣದ ನಂತರ ಜರುಗಿದ ಬಸವಾನುಭಾವ ಚಿಂತನ ಸಮಾರಂಭವನ್ನು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ದೀಪ ಬೆಳಗಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯ ಶ್ರೀ ಡಾ. ಬಸವಲಿಂಗಪಟ್ಟ ದೇವರು, ಪೂಜ್ಯ ಗಂಗಾಂಬಿಕಾ ಅಕ್ಕನವರು, ಸಂಸದರಾದ ಸಾಗರ ಖಂಡ್ರೆ, ಶಾಸಕರಾದ ಶರಣು ಸಲಗರ, ಎಂಎಲ್ಸಿಗಳಾದ ಎಂ. ಜಿ. ಮೂಳೆ, ಹಾಗೂ ಮಾಲಾ ಬಿ. ನಾರಾಯಣರಾವ್, ಮಾಜಿ ಎಂಎಲ್ಸಿ ವಿಜಯ ಸಿಂಗ್. ಶ್ರೀ ಬಸವೇಶ್ವರ ದೇವಸ್ಥಾನದ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೊರಕೆ. ಮುಖಂಡರಾದ ಡಿ. ಕೆ. ದಾವೂದ್ ಗ್ರಾಮದ ಪ್ರಮುಖರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


# ತಂಬಾಕು ಉತ್ಪನ್ನ ಮಾರಾಟಕ್ಕೆ ಪರವಾನಿಗೆ ಕಡ್ಡಾಯ: ಡಾ.ಎಂ.ಡಿ.ಶಾಕೀರ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೆ,24– ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯೊಳಿಸಿರುವ ಹಿನ್ನಲೆಯಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯೇಕವಾಗಿ ಪರವಾನಿಗೆಯನ್ನು ಪಡೆಯಬೇಕೆಂದು ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿಗಳಾದ ಡಾ.ಎಂ.ಡಿ.ಶಾಕೀರ್ ಅವರು ತಿಳಿಸಿದ್ದಾರೆ.

ತಂಬಾಕು ಉತ್ಪನ್ನ ಮಾರಾಟ ಪಡೆಯಲು ಮಹಾನಗರ ಪಾಲಿಕೆಯಿಂದ ಅರ್ಜಿ ನಮೂನೆಯನ್ನು ಪಡೆದು ಆಧಾರ ಕಾರ್ಡ, ಬಾಡಿಗೆ ಕರಾರು ಪತ್ರ, ಉದ್ದಿಮೆ ಪರವಾನಿಗೆ ಹಾಗೂ ಫೋಟೋಗಳು ಸೇರಿದಂತೆ ಇತ–ರೆ ಅಗತ್ಯ ಮಾಹಿತಿಯೊಂದಿಗೆ ಮೇ.31ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಶುಲ್ಕ 500 ರೂ.ಗಳಾಗಿದ್ದು 5 ವರ್ಷ ಚಾಲ್ತಿಯಲ್ಲಿರುತ್ತದೆ. ನಿಗದಿತ ದಿನಾಂಕದ ನಂತರ ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳ ಮಾರಾಟ ಮಾಡುವ ವ್ಯಾಪಾರಸ್ಥರ ಮೇಲೆ ಕಾನೂನು ಕ್ರಮವನ್ನು ಜರುಗಿಸಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯ ಖಾಲಿ ಸ್ಥಾನ ಭರ್ತಿಗೆ ಅರ್ಜಿ ಅಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಿವಿಧೆಡೆ ನಡೆಯುವ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕ, ಬಾಲಕಿಯರ ವಸತಿ ನಿಲಯಗಳ ಖಾಲಿ ಸ್ಥಾನಗಳ ಭರ್ತಿಗೆ ಅರ್ಜಿ ಅಹ್ವಾನಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಸತೀಶಕುಮಾರ ಸಂಗನ್ ತಿಳಿಸಿದ್ದಾರೆ.

2025–26ನೇ ಸಾಲಿನಲ್ಲಿ ಖಾಲಿ ಇರುವ ಸ್ಥಾನಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಕರೆಯಲಾಗಿದೆ.

5 ರಿಂದ 10ನೆಯ ತರಗತಿ, ಪಿಯುಸಿ, ಪದವಿ ಮತ್ತು ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿದೆ.

ಇಲಾಖೆಯ ವೆಬ್‌ಸೈಟ್‌ನಲ್ಲಿ (swd service Karna-taka govt.com) ಅರ್ಜಿ ಸಲ್ಲಿಸಬಹುದಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಹಿಂದಿನ ತರಗತಿಯಲ್ಲಿ ತೇರ್ಗಡೆಯಾದ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ , ವಾಸಸ್ಥಳ ಪ್ರಮಾಣ ಪತ್ರ, ಆಧಾರ ಕಾರ್ಡ, ಬ್ಯಾಂಕ್ ಖಾತೆ ಸಂಖ್ಯೆ, ವಿದ್ಯಾರ್ಥಿ ಸ್ಯಾಟ್ಸ್ ಹಾಗೂ ಎಸ್.ಎಸ್.ಪಿ ವಿದ್ಯಾರ್ಥಿ ಐಡಿ ಸಂಖ್ಯೆಯೊಂದಿಗೆ ಆನ್‌ಲೈನ್ ಅರ್ಜಿ ಭರ್ತಿ ಮಾಡಿ ಪ್ರಿಂಟ್ ಕಾಪಿ ಮತ್ತು ವಿದ್ಯಾರ್ಥಿಯ ಇತ್ತಿಚಿನ 4 ಭಾವಚಿತ್ರದೊಂದಿಗೆ ಸಹಿತ ವಸತಿ ನಿಲಯ ಪಾಲಕರಿಗೆ ಸಲ್ಲಿಸಲು ಪ್ರಕಟಣೆ ಮೂಲಕ ಕೋರಲಾಗಿದೆ.

# ಎಸ್.ಎಸ್.ಎಲ್.ಸಿ.ಮರುಮೌಲ್ಯಮಾಪನ: ಸಿಂಚನಾ ಪಾಟೀಲ ರಾಜ್ಯಕ್ಕೆ ದ್ವಿತೀಯ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ತಾಲ್ಲೂಕಿನ ಮೈಲೇಶ್ವರ ಗ್ರಾಮದಲ್ಲಿರುವ ಬ್ರಿಲಿಯಂಟ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ಸಿಂಚನಾ ಶಿವನಗೌಡ ಪಾಟೀಲ, 2024–25ನೇ ಸಾಲಿನ ಎಸ್. ಎಸ್.ಎಲ್.ಸಿ ಪರೀಕ್ಷೆಯ ಮರುಮೌಲ್ಯಮಾಪನದಲ್ಲಿ ಇಂಗ್ಲಿಷ್ ವಿಷಯಕ್ಕೆ 9 ಅಂಕಗಳು ಹೆಚ್ಚು ಪಡೆಯುವುದರೊಂದಿಗೆ 625 ಕ್ಕೆ 624 ಅಂಕಗಳನ್ನು ಪಡೆದು ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಎಲ್ಲ ವಿಷಯಗಳಲ್ಲಿಯೂ ಶೇ.100 ಅಂಕ ಗಳಿಸಿದ್ದ ವಿದ್ಯಾರ್ಥಿನಿ ಇಂಗ್ಲೀಷ್ ನಲ್ಲಿ 90 ಅಂಕಗಳನ್ನು ಪಡೆದಿದ್ದಳು. ಮರುಮೌಲ್ಯಮಾಪನದಲ್ಲಿ 99 ಅಂಕ ಗಳಿಸಿದ್ದು ವಿದ್ಯಾರ್ಥಿನಿಯ ಸಾಧನೆಗೆ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ, ಎಲ್ಲ ಪದಾಧಿಕಾರಿಗಳು, ಮುಖ್ಯಶಿಕ್ಷಕ, ಸಹಶಿಕ್ಷಕರು ಶುಭ ಹಾರೈಸಿದ್ದಾರೆ.

# ಸಾಂವಿಧಾನಿಕ ಹುದ್ದೆ, ದಲಿತ ನಾಯಕರಿಗೆ ಮಾಡಿದ ಅಪಮಾನ: ಬಿ.ಶ್ರೀರಾಮುಲು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.24::ವಿಪಕ್ಷನಾಯಕ ಛಲವಾದಿನಾರಾಯಣಸ್ವಾಮಿ ಅವರಿಗೆ ಮಾಡಿದ ಅವಮಾನವು ಒಂದು ಸಾಂವಿಧಾನಿಕ ಹುದ್ದೆಗೆ ಮಾಡಿದ ಅಪಮಾನ ಮಾತ್ರವಲ್ಲ; ಅದು ದಲಿತ ನಾಯಕರಿಗೆ ಮಾಡಿದ ಅಪಮಾನ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಅವರು ವಿಶ್ಲೇಷಿಸಿದ್ದಾರೆ.ಮಾಧ್ಯಮಗಳ ಜೊತೆ ಇಂದು ಇಲ್ಲಿ ಮಾತನಾಡಿದ ಅವರು, ಛಲವಾದಿಯವರನ್ನು ನಡೆಸಿಕೊಂಡ ರೀತಿ ಸರಿಯಿಲ್ಲ ಎಂದು ಟೀಕಿಸಿದರು. ಸರಕಾರಿ ವಾಹನಕ್ಕೆ ಮಸಿ ಬಳಿದಿದ್ದಾರೆ. ಈ ರೀತಿಯ ಕೊಲೆ ಯತ್ನಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ರಾಜಕಾರಣ ಎಂಬುದು ನಿಂತ ನೀರಲ್ಲ ಎಂದರಲ್ಲದೆ,ಛಲವಾದಿಯವರ ಮಾತಿನಲ್ಲಿ ತಪ್ಪೇನಿದೆ ಎಂದು ಕೇಳಿದರು.

ಆನೆ ಹೋಗುತ್ತಿದ್ದರೆ ನಾಯಿಗಳು ಬೊಗಳುತ್ತವೆ ಎಂಬ ಅವರ ಆಡುಭಾಷೆಯ ಮಾತಿನಲ್ಲಿ ತಪ್ಪೇನಿದೆ ಎಂದು

ಕೇಳಿದರು. ಸಂವಿಧಾನದ ಕುರಿತು ಎಲ್ಲ ಕಡೆ ಮಾತನಾಡುವ ಕಾಂಗ್ರೆಸ್ಸಿನವರಿಗೆ ಸಂವಿಧಾನದ ಬಗ್ಗೆ ಏನು ಗೌರವ ಇದೆ ಎಂದು ಹೇಳುವಂತೆ ಆಗ್ರಹಿಸಿದರು.ಪ್ರಧಾನಿ ನರೇಂದ್ರ ಮೋದಿಯವರನ್ನು ಕಾಂಗ್ರೆಸ್ಸಿನವರು ವಿಷಸರ್ಪ ಎಂದಿದ್ದರು. ಕೊಲೆಗಡುಕ, ಸಾವಿನ ವ್ಯಾಪಾರಿ ಎಂದಿದ್ದರು. ಇವರೆಷ್ಟು ಮಾತನಾಡಿಲ್ಲ? ಈ ರೀತಿಯ ಆಡುಭಾಷೆಯ ಮಾತನ್ನು ಬಳಸಿ ಅವರೂ ಬೈದಿದ್ದಾರೆ. ಬೈದ ಬಳಿಕ ನಮ್ಮ ಹಳ್ಳಿ ಭಾಷೆ, ಮಾತನಾಡಿದ್ದೇವೆ ಎಂದಿದ್ದಾರೆ. ಭಾರತ-ಪಾಕಿಸ್ತಾನ ನಡುವಿನ ಯುದ್ಧವನ್ನು ಖರ್ಗೆಯವರು ಚಿಟ್‌ಪುಟ್ ಯುದ್ಧ ಎಂದಿದ್ದಾರೆ ಎಂದು ಗಮನ ಸೆಳೆದರು.

# ಕರ್ತವ್ಯಲೋಪದ ಆರೋಪ:ವೈದ್ಯಾಧಿಕಾರಿ ಅಮಾನತ್ತು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.24-ಕರ್ತವ್ಯಲೋಪ ಮತ್ತು ದುರ್ನಡತೆ ಆರೋಪದ ಹಿನ್ನೆಲೆಯಲ್ಲಿ ಜಿಲ್ಲೆಯ ಮುಧೋಳ ತಾಲೂಕಾವೈದ್ಯಾಧಿಕಾರಿ ಡಾ.ವೆಂಕಟೇಶ ಮಲಘಾಣ ಅವರನ್ನು ಸೇವೆಯಿಂದ ಅಮಾನತ್ತು ಮಾಡಲಾಗಿದೆ.

ಅನಧಿಕೃತ ವೈದ್ಯಕೀಯ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳದೇ ಮುಚ್ಚಳಿಕೆ ಪಡೆದು ಪ್ರಕರಣ ಮುಚ್ಚಿಹಾಕಿರುವುದು. ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮದಡಿ ನೋಂದಣಿ ಪ್ರಾಧಿಕಾರಕ್ಕೆ ವರದಿ ಸಲ್ಲಿಸದೇ ಕರ್ತವ್ಯಲೋಪ ಎಸಗಿರುವ ಹಿನ್ನೆಲೆಯಲ್ಲಿ ಇಲಾಖೆ ವಿಚಾರಣೆ ಬಾಕಿಯಿರಿಸಿ



ಡಾ.ಮಲಘಾಣ ಅವರನ್ನು ಅಮಾನತ್ತು ಮಾಡಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತ ಶಿವಕುಮಾರ್ ಆದೇಶಿಸಿದ್ದಾರೆ.

ನಕಲಿ ವೈದ್ಯರ ವಿರುದ್ಧ ದೂರುಗಳು ಬಂದಾಗ ದಾಳಿ ಮಾಡಿ ಕೆಲ ಪ್ರಕರಣಗಳಲ್ಲಿ ಅವರಿಂದ ಮುಚ್ಚಳಿಕೆ ಪತ್ರ ಪಡೆದು, ಪ್ರಕರಣಗಳನ್ನು ಮುಚ್ಚಿ ಹಾಕಲಾಗಿದೆ. ಇನ್ನೂ ಕೆಲ ಪ್ರಕರಣಗಳಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗೆ ವರದಿ ಮಾಡಿದ್ದಾರೆ. ಈ ವಿಭಿನ್ನ ಕ್ರಮಗಳಿಗೆ ಯಾವುದೇ ಸ್ಪಷ್ಟ ವಿವರಣೆ ನೀಡಿಲ್ಲ. ಈ ವಿಷಯದಲ್ಲಿ ಪೂರ್ಣ ತನಿಖೆ ನಡೆಸಬೇಕಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

# ದತ್ತಿ ಮಸೂದೆ:ರಾಷ್ಟ್ರಪತಿಗಳ ಅನುಮೋದನೆಗೆ ಕಾಯ್ದಿರಿಸಿದ ರಾಜ್ಯಪಾಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.24: ರಾಜ್ಯ ಸರ್ಕಾರ ಮಂಡಿಸಿದ್ದ ಕರ್ನಾಟಕ ಹಿಂದು ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ(ತಿದ್ದುಪಡಿ) ಮಸೂದೆಯನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕಾಯ್ದಿರಿಸಿದ್ದಾರೆ.ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಶುಕ್ರವಾರ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ ದತ್ತಿ (ತಿದ್ದುಪಡಿ) ಮಸೂದೆಯನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕಾಯ್ದಿರಿಸಿದ್ದಾರೆ."ಈ ಮಸೂದೆಯು ಸಾಂವಿಧಾನಿಕ ನಿರ್ಬಂಧಗಳಿಗೆ ಒಳಪಡುತ್ತಿದೆ. ಪರಿಶೀಲನೆಯು ಅಗತ್ಯವಿದೆ.ಹೀಗಾಗಿ, ಹೆಚ್ಚಿನ ಸಾಂವಿಧಾನಿಕ ತೊಡಕುಗಳನ್ನು ನಿವಾರಿಸಲು ಪ್ರಸ್ತಾವಿತ ಮಸೂದೆಗೆ ಒಪ್ಪಿಗೆ ನೀಡುವ ಬದಲು, ಗೌರವಾನ್ವಿತ ರಾಷ್ಟ್ರಪತಿಗಳ ಪರಿಗಣನೆಗೆ ಕಾಯ್ದಿರಿಸುವುದು ಸೂಕ್ತವೆಂದು ನಾನು ಭಾವಿಸುತ್ತೇನೆ" ಎಂದು ರಾಜ್ಯಪಾಲ ಗೆಹ್ಲೋಟ್ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.ಅಂದಹಾಗೆ ಈ ಮಸೂದೆಯನ್ನು ಮಾರ್ಚ್ 6, 2024 ರಂದು ಅಂಗೀಕರಿಸಲಾಗಿತ್ತು. ಮೇ 16, 2025 ರಂದು ಹೊಸದಾಗಿ ರಾಜ್ಯಪಾಲರಿಗೆ ಸಲ್ಲಿಸಲಾಗಿತ್ತು.



ಮಸೂದೆಯು ಹೆಚ್ಚಿನ ಆದಾಯ ಗಳಿಸುವ ದೇವಾಲಯಗಳಿಂದ ನಿಧಿಯ ಸಾಮಾನ್ಯ ನಿಧಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ.

ಮಸೂದೆಯು, ಹೆಚ್ಚಿನ ಆದಾಯ ಗಳಿಸುವ ದೇವಾಲಯಗಳಿಂದ ಸರ್ಕಾರ-ಕ್ಕೆ ಬರುವ ನಿಧಿಯ ಮೊತ್ತವನ್ನು ಹೆಚ್ಚಿಸುವುದಾಗಿ ಹೇಳುತ್ತದೆ. ಇದರಡಿ, ಒಂದು ಕೋಟಿ ರೂ.ಗೂ ಅಧಿಕ ಆದಾಯ ಪಡೆಯುವ ಧಾರ್ಮಿಕ ಸಂಸ್ಥೆಗಳ ಒಟ್ಟು ಆದಾಯದಲ್ಲಿ ದತ್ತಿ ಇಲಾಖೆಗೆ ಬರುವ ಪಾಲನ್ನು 10%ರಷ್ಟು ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆ. ಆ ಹಣವನ್ನು ಕಡಿಮೆ ಮತ್ತು ಅತೀ ಕಡಿಮೆ ಆದಾಯ ಹೊಂದಿರುವ ವರ್ಗ-ಬಿ ಮತ್ತು ವರ್ಗ-ಸಿ ದೇವಾಲಯಗಳ ಅಭಿವೃದ್ಧಿಗೆ ವರ್ಗಾಯಿಸಲು ಮಸೂದೆಯಲ್ಲಿ ಸರ್ಕಾರ ಪ್ರಸ್ತಾಪಿಸಿದೆ.ಮಸೂದೆಯು ಅಧಿಸೂಚಿತ ವರ್ಗ-ಸಿ ಧಾರ್ಮಿಕ ಸಂಸ್ಥೆಗಳಿಗೆ ಮಾತ್ರ ಸಹಾಯಧನವನ್ನು ಪ್ರಸ್ತಾಪಿಸುತ್ತದೆ. ನಿರ್ವಹಣಾ ಸಮಿತಿಯ ನಾಲ್ವರು ಸಾಮಾನ್ಯ ಸದಸ್ಯರು ವಿಶ್ವಕರ್ಮ ಹಿಂದೂ ದೇವಾಲಯ ವಾಸ್ತುಶಿಲ್ಪ ಮತ್ತು ಶಿಲ್ಪಕಲೆಯಲ್ಲಿ ಪರಿಣತಿ ಹೊಂದಿರಬೇಕು ಎಂದು ಇದು ಪ್ರಸ್ತಾಪಿಸುತ್ತದೆ.

# ಪ್ರೀತಿಸಿದವನೊಂದಿಗೆ ಮನೆಬಿಟ್ಟು ಹೋದ ಮಗಳು:ಮನನೊಂದು ಮೂವರ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಮೇ.24: ಪ್ರೀತಿಸಿದ ಯುವಕನೊಂದಿಗೆ ಮಗಳು ಮನೆಬಿಟ್ಟು ಹೋಗಿದ್ದರಿಂದ ಮನನೊಂದು ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಮೈಸೂರು ಜಿಲ್ಲೆ ಹೆಚ್‌ಡಿ ಕೋಟೆ ತಾಲೂಕಿನ ಬಂದನೂರಿನಲ್ಲಿ ಘಟನೆ ನಡೆದಿದೆ. ಮಹದೇವಸ್ವಾಮಿ, ಪತ್ನಿ ಮಂಜುಳಾ ಹಾಗೂ ಮಗಳು ಹರ್ಷಿತಾ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹದೇವಸ್ವಾಮಿ ಹಿರಿಯ ಪುತ್ರಿ ಅರ್ಪಿತಾ ಪ್ರೀತಿಸಿದ ಯುವಕನೊಂದಿಗೆ ಮನೆಬಿಟ್ಟು ಹೋಗಿದ್ದಳು. ಈ ಹಿನ್ನೆಲೆ ಮನನೊಂದ ಕುಟುಂಬ ಆತ್ಮಹತ್ಯೆಯ ನಿರ್ಧಾರ ಮಾಡಿದ್ದಾರೆ. ಬೂದನೂರು ಕೆರೆಯ ಏರಿ ಮೇಲೆ ಬೈಕ್ ಹಾಗೂ ಮೂವರ ಚಪ್ಪಲಿಗಳು ಪತ್ತೆಯಾಗಿದೆ. ಈ ಹಿನ್ನೆಲೆ ಕೆರೆಯಲ್ಲಿ ಹುಡುಕಾಟ ನಡೆಸಲಾಗಿದೆ. ಸದ್ಯ ಮೂವರ ಮೃತದೇಹ ಪತ್ತೆಯಾಗಿದ್ದು, ಕೆರೆಯಿಂದ ಹೊರತೆಗೆಯಲಾಗಿದೆ. ಹೆಚ್‌ಡಿ ಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಅಭಿವೃದ್ಧಿ ಕಾರ್ಯ ಸಹಿಸದೇ ಬಿಜೆಪಿ,ಜೆಡಿಎಸ್ ಸುಳ್ಳು ಹೇಳುತ್ತಿವೆ:ಸಿಎಂ ಸಿದ್ದರಾಮಯ್ಯ

ಮೈಸೂರು:ಮೇ.24: ಬಿಜೆಪಿ ಮತ್ತು ಜೆಡಿಎಸ್ ಪಕ್ಷದವರು ರಾಜ್ಯ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೆ ಜನಾಕ್ರೋಶ ಯಾತ್ರೆ ಮಾಡುತ್ತಿದ್ದು ರಾಜ್ಯದ ಜನರು ಇದನ್ನು ಒಪ್ಪುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಪಟ್ಟಣದ ಪುರಸಭೆ ಬಯಲು ರಂಗಮಂದಿರ ಆವರಣದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿನಿಂದ ಶುಕ್ರವಾರ ಆಯೋಜಿಸಿದ್ದ ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ 513 ಕೋಟಿ. ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದರಿಂದ ಅಭಿವೃದ್ಧಿ ಕಾರ್ಯಗಳಿಗೆ ಈ ಸರ್ಕಾರದ ಬಳಿ ಹಣವಿಲ್ಲ ಎಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಟೀಕಿಸುತ್ತಿವೆ.ಪಾಪರ್ ಸರ್ಕಾರವಾಗಿದ್ದರೆ 513 ಕೋಟಿ ರೂ.ಗಳ ಕಾಮಗಾರಿಗಳನ್ನು ಇಲ್ಲಿ ಕೈಗೊಳ್ಳಲು ಸಾಧ್ಯವಾಗುತ್ತಿತ್ತೇ? ಬಿಜೆಪಿ ಮತ್ತು ಜೆಡಿಎಸ್ ಅಧಿಕಾರದಲ್ಲಿದ್ದಾಗ



ಏನೂ ಮಾಡಲಿಲ್ಲ. ಆದರೆ ಟೀಕೆ ಮಾಡುವುದನ್ನು ಹಾಗೂ ಸುಳ್ಳು ಹೇಳುವುದನ್ನು ಮಾತ್ರ ಬಿಡುವುದಿಲ್ಲ ಎಂದು ಹೇಳಿದ್ದಾರೆ.

ಬಿಜೆಪಿ ಜೆಡಿಎಸ್ ಪಕ್ಷಗಳು ಹೇಳಿಕೊಂಡಿರುವ ಚಾರ್ಜ್ ಶೀಟ್ ನಲ್ಲಿ ಬರೀ ಸುಳ್ಳುಗಳನ್ನೇ ಹೇಳಿದ್ದಾರೆ. ಹೀಗೆ ಅವರಿಗೆ ಸುಳ್ಳು ಹೇಳಲು ನಾಚಿಕೆಯಾಗುವುದಿಲ್ಲವೇ? ಆರ್. ಅಶೋಕ್,ಹೆಚ್.ಡಿ.ಕುಮಾರಸ್ವಾಮಿ, ಬಿ.ಎಸ್.ಯಡಿಯೂರಪ್ಪ,ವಿಜಯೇಂದ್ರ, ಛಲವಾದಿನಾರಾಯಣಸ್ವಾಮಿ ಇವರೆಲ್ಲರೂ ಬಹಳ ವರ್ಷಗಳಿಂದ ರಾಜಕೀಯದಲ್ಲಿದ್ದು, ಸುಳ್ಳು ಹೇಳುವುದರಲ್ಲಿ ಪರಿಣಿತಿ ಹೊಂದಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಜಾರಿ ಮಾಡಿದೆ. ಜನರು ಈ ಯೋಜನೆಗಳ ಸದುಪಯೋಗಪಡಿಸಿಕೊಳ್ಳುತ್ತಿರುವಾಗ ಜಾರಿ ಮಾಡಿಲ್ಲ ಎಂದು ಹೇಗೆ ಹೇಳುತ್ತಾರೆ? ರಾಜ್ಯದ 3.50 ಕೋಟಿ ಮಹಿಳೆಯರು ಯಾವುದೇ ಬೇಧ ಭಾವವಿಲ್ಲದೇ ಶಕ್ತಿ ಯೋಜನೆಯನ್ನು ಬಳಸಿಕೊಂಡಿದ್ದಾರೆ. ಬಿಜೆಪಿ ಸರ್ಕಾರ ಇಂಥ ಯೋಜನೆಯನ್ನು ಜಾರಿ ಮಾಡಿತ್ತೇ? ಈವರೆಗೆ 500 ಕೋಟಿ ಬಾರಿ ಮಹಿಳೆಯರು ಉಚಿತವಾಗಿ ಓಡಾಡಿದ್ದಾರೆ. ಪ್ರತಿ ದಿನ 50-60 ಲಕ್ಷ ಮಹಿಳೆಯರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಜಿಎಸ್‌ಟಿ ಸಂಗ್ರಹಣೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷ ನಾವು ಮೊದಲ ಸ್ಥಾನಕ್ಕೆ ಬರುವ ಪ್ರಯತ್ನ ಮಾಡುತ್ತೇವೆ. ಕಬಿನಿ ಸೇತುವೆಗೆ 25 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯನ್ನು 40 ವರ್ಷಗಳ ಅವಧಿಗೆ ಗುತ್ತಿಗೆ ನೀಡಲಾಗಿದೆ. ಸಾಗರಕಟ್ಟೆ ಸೇತುವೆ, ರಸ್ತೆ ಅಗಲೀಕರಣ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆ. ಎಲ್ಲರೂ ಒಂದೇ ತಾಯಿಯ ಮಕ್ಕಳಂತೆ ಇರಬೇಕೆಂಬುದು ಸರ್ಕಾರದ ಆಶಯ.ಶಕ್ತಿ ಯೋಜನೆಯಿಂದ ಧರ್ಮಸ್ಥಳ ಕ್ಷೇತ್ರಕ್ಕೆ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿರುವುದನ್ನು ಪ್ರಶಂಸಿಸಿ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಪತ್ರ ಬರೆದಿದ್ದರು.


# ಫಲಿತಾಂಶ ಕುಸಿತ: ಅಧಿಕಾರಿಗಳಿಗೆ ಶಾಸಕ ಪ್ರಭು ಚವ್ಹಾಣ ತರಾಟೆ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ):ಮೇ.24: ಕ್ಷೇತ್ರದಲ್ಲಿ ಫಲಿತಾಂಶ ಕುಸಿದಿರುವುದಕ್ಕೆ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಶಿಕ್ಷಕರಿಗೆ ತೀವ್ರ ತರಾಟೆಗೆ ತೆ-ಗೆದುಕೊಂಡರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಛೇರಿ ವತಿಯಿಂದ ಪಟ್ಟಣದ ಆದರ್ಶ ವಿದ್ಯಾಲಯದಲ್ಲಿ ಗುರುವಾರ ನಡೆದ 2025-26ನೇ ಸಾಲಿನ ಶಾಲಾ ಪ್ರಾರಂಭೋತ್ಸವದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದು ಅದರಂತೆ ವಿದ್ಯಾರ್ಥಿಗಳು ಮತ್ತು ಪಾಠ ಮಾಡುವ ಶಿಕ್ಷಕರ ಮನೋಬಲ ಹೆಚ್ಚಿಸಲು ನಿರಂತರ ಪ್ರಯತ್ನಿಸುತ್ತಿದ್ದೇನೆ. ಈ ಭಾಗವಾಗಿ ಪ್ರತಿವರ್ಷ ಶಿಕ್ಷಕರನ್ನು ಮತ್ತು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತಿದೆ.ಶಾಲಾ-ಕಾಲೇಜುಗಳ ಸ್ಥಾಪನೆ, ವಸತಿ ನಿಲಯಗಳನ್ನು ನಿರ್ಮಿಸುತ್ತಿದ್ದು, ಶಾಲೆಗಳಲ್ಲಿ ಮೂಲ ಸೌಕರ್ಯಗಳ ಕೊರತೆಯಾಗದಂತೆ ನೋಡಿಕೊಳ್ಳುತ್ತಿದ್ದೇನೆ.ಆದರೂ ಫಲಿತಾಂಶ ಕುಸಿದಿರುವುದು ಸರಿಯಲ್ಲವೆಂದು ಕಳವಳ ವ್ಯಕ್ತಪಡಿಸಿದರು.



ಶಾಲೆಗಳಲ್ಲಿ ಹೆಚ್ಚುವರಿ ತರಗತಿ ಕೋಣೆ,ಕುಡಿಯುವ ನೀರು,ಟೇಬಲ್, ಬೆಂಚುಗಳು ಏನು ಬೇಕಾದರೂ ಒದಗಿಸುತ್ತೇನೆ. ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಪ್ರಯತ್ನಿಸುತ್ತೇನೆ. ಆದರೆ ಶಿಕ್ಷಕರು ಮಾತ್ರ ಸರಿಯಾಗಿ ಕೆಲಸ ಮಾಡಬೇಕು. ಫಲಿತಾಂಶದಲ್ಲಿ ಸುಧಾರಣೆ ಆಗದಿದ್ದಲ್ಲಿ ಇನ್ನು ಮುಂದೆ ಸುಮ್ಮನಿರಲಾರೆ ಎಂದು ಎಚ್ಚರಿಸಿದರು.

ಗೈರು ಹಾಜರಾಗುವುದು, ಪಾಠ ಮಾಡದೇ ಸಮಯ ವ್ಯರ್ಥ ಮಾಡುವುದು, ಮದ್ಯಪಾನ ಮಾಡಿ ಶಾಲೆಗೆ ಹಾಜರಾಗುವುದು ಸೇರಿದಂತೆ ಸಾಕಷ್ಟು ದೂರುಗಳು ಕೆಲವು ಶಿಕ್ಷಕರ ಬಗ್ಗೆ ಪದೇ ಪದೇ ಕೇಳಿ ಬರುತ್ತಿವೆ. ಇಂಥವುಗಳನ್ನು ಬಿಟ್ಟು ಕೇವಲ ಕೆಲಸದ ಕಡೆ ಗಮನವಹಿಸಬೇಕು. ಪ್ರಮಾಣಿಕವಾಗಿ ಸೇವೆ ಸಲ್ಲಿಸುವುದಿದ್ದರೆ ಮಾತ್ರ ಇಲ್ಲಿರಬೇಕು. ಇಲ್ಲವಾದಲ್ಲಿ ಕೆಲಸ ಬಿಟ್ಟು ಹೋಗಬೇಕು ಎಂದರು.

ಬಡ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಬೇಕೆಂಬ ಉದ್ದೇಶದಿಂದ ಹೆಚ್ಚಿನ ಸಂಬಳ ಕೊಟ್ಟು ಶಿಕ್ಷಕರನ್ನು ನೇಮಿಸಿಕೊಳ್ಳಲಾಗುತ್ತದೆ. ಆದರೆ ಕೆಲವರು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಇಂಥವರಿಂದಾಗಿ ಫಲಿತಾಂಶ ಕುಸಿಯುತ್ತಿದೆ. ಎಲ್ಲರೂ ಸರಿಯಾಗಿ ಕೆಲಸ ಮಾಡಬೇಕೆಂದು ಶಿಕ್ಷಕರಿಗೆ ತಿಳಿಸಿದರು.

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣ ಶಿಕ್ಷಕರಿಲ್ಲದಿರುವುದು ಮಕ್ಕಳ ಕಲಿಕೆಗೆ ತೊಡಕಾಗುತ್ತಿದೆ. ಇದನ್ನು ಸರಿಪಡಿಸಿ ಶಿಕ್ಷಕರು ಸರಿಯಾಗಿ ಕೆಲಸ ಮಾಡುವಂತೆ ನೋಡಿಕೊಳ್ಳಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿಗೆ ಸೂಚಿಸಿದರು.

ಮನೆ-ಮನೆಗೆ ಭೇಟಿ ನೀಡಿ: ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ತಗ್ಗುತ್ತಿದೆ. ಹಾಗಾಗಿ ಎಲ್ಲ ಶಿಕ್ಷಕರು ತಾವು ಕೆಲಸ ಮಾಡುವ ಗ್ರಾಮಗಳಲ್ಲಿ ಮನೆ-ಮನೆಗೆ ಭೇಟಿ ನೀಡಿ ದಾಖಲಾತಿ ಹೆಚ್ಚಿಸಲು ಮುಂದಾಗಬೇಕೆಂದು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರಂಗೇಶ್, ಪ್ರಕಾಶ ರಾಠೋಡ ಸೇರಿದಂತೆ ಸರ್ಕಾರಿ ಶಾಲೆಗಳ ಮುಖ್ಯಗುರುಗಳು ಉಪಸ್ಥಿತರಿದ್ದರು.

# ಬಸವಕಲ್ಯಾಣ: ಮೇ.26 ರಂದು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.24:ಬಸವಕಲ್ಯಾಣ ತಾಲ್ಲೂಕಿನಲ್ಲಿ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಮೇ.26 ರಂದು ಬಸವಕಲ್ಯಾಣ ಶಾಸಕರಾದ ಶರಣು ಸಲಗರ ಚಾಲನೆ ನೀಡಲಿದ್ದಾರೆಂದು ಬಸವಕಲ್ಯಾಣ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವಕಲ್ಯಾಣ ತಾಲ್ಲೂಕಿನಲ್ಲಿ 2025 ರ ಮುಂಗಾರು ಹಂಗಾಮಿನಲ್ಲಿ ಸೋಯಾಅವರೆ,ತೊಗರಿ,ಉದ್ದು ಮತ್ತು ಹೆಸರು ಪ್ರಮುಖ ಬೆಳೆಗಳಾಗಿದ್ದು 13800 ಕ್ವಿಂಟಾಲ್ ಸೋಯಾಅವರೆ ಇಂಡೆಂಟ ನೀಡಲಾಗಿರುತ್ತದೆ ಇಲ್ಲಿಯವರೆಗೆ 6752.00 ಕ್ವಿಂಟಾಲ್ ಸೋಯಾಅವರೆ ಬಿತ್ತನೆ ಬೀಜಗಳು ತಾಲ್ಲೂಕಿನ 06 ರೈತ ಸಂಪರ್ಕ ಕೇಂದ್ರಗಳು ಹಾಗೂ 20 ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರಗಳಲ್ಲಿ ದಾಸ್ತಾನಾಗಿರುತ್ತದೆಂದು ಅವರು ತಿಳಿಸಿದ್ದಾರೆ.

ಪ್ರಮುಖ ಬೆಳೆಗಳ ಬಿತ್ತನೆ ಬೀಜಗಳ ದರ: ಸೋಯಾಅವರೆಎಖ-335 ತಳಿ 30 ಕೆ.ಜಿ. ಚೀಲಕ್ಕೆ ರೈತರ ವಂತಿಕೆಯು ಸಾಮಾನ್ಯ 1363.50 ರೂ.,ಪ.ಜಾತಿ/ಪ.ಪಂಗಡ 988.50 ರೂ., ತೊಗರಿ ಃಖಒಖ-736 ತಳಿ 05 ಕೆ.ಜಿ. ಚೀಲಕ್ಕೆ ರೈತರ ವಂತಿಕೆಯು ಸಾಮಾನ್ಯ 625 ರೂ., ಪ.ಜಾತಿ/ಪ.ಪಂಗಡ 562.50/ರೂ., ಉಖಉ-811 ತಳಿ ಸಾಮಾನ್ಯ 600 ರೂ., ಪ.ಜಾತಿ/ಪ.ಪಂಗಡ 537.50 ರೂ., ಉದ್ದು ಆಃಉಗಿ-5 ತಳಿ 05 ಕೆ.ಜಿ. ಚೀಲಕ್ಕೆ ರೈತರ ವಂತಿಕೆಯು ಸಾಮಾನ್ಯ 567.50 ರೂ.,ಪ.ಜಾತಿ/ಪ.ಪಂಗಡ 505 ರೂ., ಹೆಸರು BGS-9 ತಳಿ 05 ಕೆ.ಜಿ. ಚೀಲಕ್ಕೆ ರೈತರ ವಂತಿಕೆಯು ಸಾಮಾನ್ಯ 575 ರೂ., ಪ.ಜಾತಿ/ಪ.ಪಂಗಡ 512.50 ರೂ.. ಆಗಿರುವುದು.

ಎಫ್‌ಐಡಿ ಹೊಂದಿರುವ ರೈತರು



ತಮ್ಮ ಜಮೀನಿನ ಪಹಣಿ ಅಥವಾ ಹೋಲ್ಡಿಂಗ್, ಆಧಾರ್ ಕಾರ್ಡ, ಪ.ಜಾತಿ/ಪ.ಪಂಗಡ ರೈತರು ಆರ್.ಡಿ. ಸಂಖ್ಯೆ ಹೊಂದಿರುವ ಜಾತಿ ಪ್ರಮಾಣ ಪತ್ರ ಹಾಗೂ ಬ್ಯಾಂಕ್ ಪಾಸ್ ಪುಸ್ತಕಗಳ ನಕಲು ಪ್ರತಿಗಳೊಂದಿಗೆ (ಝೆರಾಕ್ಸ್ ಪ್ರತಿಗಳು) ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರು ಕಡ್ಡಾಯವಾಗಿ ಎಫ್‌ಐಡಿ ಮಾಡಿಕೊಂಡು ಬಿತ್ತನೆ ಬೀಜವನ್ನು ಪಡೆಯಬೇಕು ಹಾಗೂ ಎಫ್‌ಐಡಿ ಹೊಂದಿರುವ ರೈತರು ತಮ್ಮ ಮೂಲ ಆಧಾರ ಕಾರ್ಡ ಮತ್ತು ಎಫ್‌ಐಡಿ ಚೀಟಿಯನ್ನು ತೆಗೆದುಕೊಂಡು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ/ಹೆಚ್ಚುವರಿ ಬೀಜ ವಿತರಣಾ ಕೇಂದ್ರದಲ್ಲಿ ಬಿತ್ತನೆ ಬೀಜಗಳನ್ನು ತಾಳ್ಮೆಯಿಂದ ಪಡೆಯಲು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ತಾಲ್ಲೂಕಿನ ರೈತರು ರಸಗೊಬ್ಬರವನ್ನು ಖರೀದಿಸುವಾಗ ರಸಗೊಬ್ಬರವನ್ನು ಕಡ್ಡಾಯವಾಗಿ ಪಿಓಎಸ್ ಉಪಕರಣದ ಮೂಲಕವೇ ಖರೀದಿಸಿ ಯಾಂತ್ರಿತ ಬಿಲ್ಲು ಪಡೆಯಬೇಕು. ಗರಿಷ್ಠ ಮಾರಾಟ ಬೆಲೆಗಿಂತ ಯೂರಿಯಾ 266 ರೂ. ಪ್ರತಿ 45 ಕೆ.ಜಿ. ಚೀಲಕ್ಕೆ, ಡಿ.ಎ.ಪಿ 1350 ರೂ. ಪ್ರತಿ 50 ಕೆ.ಜಿ. ಚೀಲಕ್ಕೆ, ಎನ್.ಪಿ.ಕೆ 10:26:26 ರೂ.1470 ರಿಂದ 1750 ಪ್ರತಿ 50 ಕೆ.ಜಿ. ಚೀಲಕ್ಕೆ, ಎನ್.ಪಿ.ಕೆ 12:32:16 ರೂ.1470 ರಿಂದ 1725 ಪ್ರತಿ ಪ್ರತಿ 50 ಕೆ.ಜಿ. ಚೀಲಕ್ಕೆ, ಎನ್.ಪಿ.ಕೆ 20:20:0:13 ರೂ.1225 ರಿಂದ 1450 ಪ್ರತಿ 50 ಕೆ.ಜಿ. ಚೀಲಕ್ಕೆ ದರ ನಿಗದಿಯಾಗಿದ್ದು, ಹೆಚ್ಚಿನ ದರಕ್ಕೆ ಯಾರಾದರೂ ಮಾರಾಟ ಮಾಡಿದರೆ ಕೂಡಲೇ ಸಮೀಪದ ಸಹಾಯಕ ಕೃಷಿ ನಿರ್ದೇಶಕರು ಕಛೇರಿಗೆ ಅಥವಾ ರೈತ ಸಂಪರ್ಕ ಕೇಂದ್ರಕ್ಕೆ ತಿಳಿಸಬೇಕೆಂದು ತಿಳಿಸಿದ್ದಾರೆ.

ರಸಗೊಬ್ಬರ ಮಾರಾಟಗಾರರು ರೈತರಿಗೆ ರಸಗೊಬ್ಬರವನ್ನು ಕಡ್ಡಾಯವಾಗಿ ಪಿ.ಓ.ಎಸ್.ಯಂತ್ರದ ಮುಖಾಂತರವೇ ವಿತರಿಸತಕ್ಕದ್ದು,ಅದಲ್ಲದೇ ರಸಗೊಬ್ಬರ ಮಾರಾಟಗಾರರು ರಸಗೊಬ್ಬರದ ಕೃತಕ ಅಭಾವ ಸೃಷ್ಟಿಸಿ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದರೆ ಅಂತಹ ಮಾರಾಟಗಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ತಾಲ್ಲೂಕಿನ ರೈತರು ಕೇವಲ ಸೋಯಾಅವರೆ ಒಂದೇ ಬೆಳೆ ಖರಿದಿಸದೇ ತೋಗರಿ, ಉದ್ದು, ಹೆಸರು, ಜೋಳ ಮತ್ತು ಇತರೆ ತೃಣ ಧಾನ್ಯಗಳನ್ನು ಖರಿದಿ ಮಾಡಲು ಮತ್ತು ಅವುಗಳನ್ನು ಸಮಗ್ರ ಕೃಷಿ ಪದ್ದತಿ, ಅಂತರಬೆಳೆ, ಮಿಶ್ರ ಬೆಳೆಯಾಗಿ ಬೆಳೆದಿದ್ದಲ್ಲಿ ಬೆಳೆ ವೈವಿಧ್ಯತೆ ಕಾಪಾಡುವುದರ ಜೋತೆಗೆ ಬಹುಬೆಳೆ ಪದ್ಧತಿ ಬೆಳೆದಿದ್ದಲ್ಲಿ ಒಳ್ಳೆಯ ಇಳುವರಿ ಮತ್ತು ಲಾಭವನ್ನು ಪಡೆಯಬಹುದಾಗಿದೆ. ಡಿ.ಎ.ಪಿ ರಸಗೊಬ್ಬರ ಬದಲಾಗಿ ಇತರೆ ಸಂಯುಕ್ತ ರಸಗೊಬ್ಬರಗಳಾದ 12:32:16, 20:20:0:13, 10:26:26 ಹಾಗೂ 14:35:14 ರಸಗೊಬ್ಬರಗಳು ಪರ್ಯಾಯವಾಗಿ ಬಳಸಬೇಕೆಂದು ಬಸವಕಲ್ಯಾಣ ಸಹಾಯಕ ಕೃಷಿ ನಿರ್ದೇಶಕರು ಸಲಹೆ ನೀಡಿರುತ್ತಾರೆ.

# ಸೇತುವೆ ಹಾಳು: ಗುತ್ತಿಗೆದಾರರಿಗೆ ತರಾಟೆ

ಬೀದರ.ಮೇ.24:ಬಸವಕಲ್ಯಾಣ್ ನಗರದಿಂದ ಗೌರ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿನ ಕೆಲ ದಿನಗಳ ಹಿಂದೆ ಸುರಿದ ಮಳೆಗೆ ಕೊಚ್ಚಿಕೊಂಡು ಹೋಗಿರುವ ಸೇತುವೆಯ ಸ್ಥಳಕ್ಕೆ ವಿಧಾನ ಪರಿಷತ್ ಮಾಜಿ ಸದಸ್ಯ ವಿಜಯಸಿಂಗ್ ಶುಕ್ರವಾರ ಭೇಟಿ ನೀಡಿ,'ಕಳಪೆ ಕಾಮಗಾರಿಯ ಕಾರಣ ಅನಾಹುತ ಸಂಭವಿಸಿದೆ' ಎಂದು ಆರೋಪಿಸಿ ಗುತ್ತಿಗೆದಾರರನ್ನು ತರಾಟೆಗೆ ತೆಗೆದುಕೊಂಡರು.

ರಸ್ತೆ ನಿರ್ಮಾಣದ ಸಂದರ್ಭದಲ್ಲಿ ಡಾಂಬರ್ ಸುರಿಯದೆ ಬರೀ ಎಂಥದ್ದೋ ಎಣ್ಣೆ ಹಾಕಲಾಗುತ್ತಿದೆ ಎಂದು ಗ್ರಾಮದ ಮುಖಂಡರು ದೂರಿದ್ದರಿಂದ ರಸ್ತೆಯಲ್ಲಿ ನಡೆದು-



ಕೊಂಡು ಹೋಗಿ ಪರಿಶೀಲಿಸಿದ ಅವರು, ಕಾಲಿನಿಂದ ರಸ್ತೆಗೆ ಒದ್ದರೆ ಎಲ್ಲವೂ ಕಿತ್ತುಕೊಂಡು ಬರುತ್ತಿದೆ. ಇಂಥ ಕೆಲಸ ಮಾಡಲು ನಾಚಿಕೆ ಆಗುವುದಿಲ್ಲವೇ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೊಚ್ಚಿಕೊಂಡು ಹೋಗಿರುವ ಸೇತುವೆಯ ಕಾಮಗಾರಿ ಕ್ರಿಯಾಯೋಜನೆಯಲ್ಲಿ ಇಲ್ಲ ಎನ್ನುತ್ತೀರಿ, ಮತ್ತೇಕೆ ಕೆಲಸ ಕೈಗೊಂಡಿದ್ದೀರಿ. ತುರ್ತು ಇದೆ ಎಂದ ಮಾತ್ರಕ್ಕೆ ಲೋಕೋಪಯೋಗಿ ಇಲಾಖೆ ಕೆಲಸಕ್ಕೆ ನೀವೇಕೆ ಹಣ ಹಾಕಬೇಕು. ತಕ್ಷಣ ಕೆಲಸ ನಿಲ್ಲಿಸಿ. ಕಳಪೆ ಕಾಮಗಾರಿ ನಡೆಸಿದ್ದೀರಿ. ಮಣ್ಣು ಕೊಚ್ಚಿಕೊಂಡು ಹೋಗುತ್ತಿದ್ದಾಗ ಯಾರದ್ದಾದರೂ ಜೀವಕ್ಕೆ ಹಾನಿ ಆಗಿದ್ದರೆ ಏನು ಮಾಡಬೇಕಾಗಿತ್ತು. ಇಂಥ ಕೆಲಸ ಮಾಡಿದವರ ವಿರುದ್ಧ ಗ್ರಾಮಸ್ಥರು ಕ್ರಿಮಿನಲ್ ಮೊಕದ್ದಮೆ ಹೂಡಬೇಕು ಎಂದು ಅವರು ಸಿಟ್ಟಾದರು. ನಗರಸಭೆ ಅಧ್ಯಕ್ಷ ಸಗೀರುದ್ದೀನ್, ಲೋಕೋಪಯೋಗಿ ಇಲಾಖೆ ಎಇಇ ಧನರಾಜ್ ಚವಾಣ್ ಮತ್ತು ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.